RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 75 ಪುಟ: 06 ಗುರುವಾರ 13-02-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ದಾಖಲೆಯ ರನ್ ಚೇಸ್; ಭರ್ಜರಿ ಜಯ

ಅಮ್ಮನ ಬಳಿ ಬದುಕೋಕೇ ಇಷ್ಟವಿಲ್ಲ ಎಂದಿದ್ದೆ

ಆರ್‌ಸಿಬಿ ಸಾರಥಿ ರಜತ್

ಪುಟ 6

## ಪ್ರತಿಪಕ್ಷಗಳ ಗದ್ದಲ ಹಾಗೂ ಕೋಲಾಹಲದ ನಡುವೆಯೂ ಕರಡು ಮಂಡನೆ

# ಕಲಾಪ ನುಂಗಿದ ವಕ್ಫ್ ಮಸೂದೆ

**ನವದೆಹಲಿ:** ವಿರೋಧದ ನಡುವೆಯೂ ವಿವಾದಿತ ವಕ್ಫ್(ತಿದ್ದುಪಡಿ) ಮಸೂದೆಯನ್ನು ಜಂಟಿ ಸಂಸದೀಯ ಸಮಿತಿ ವರದಿಯನ್ನು ಪ್ರತಿಪಕ್ಷಗಳ ಗದ್ದಲ ಹಾಗೂ ಕೋಲಾಹಲದ ನಡುವೆಯೂ ಗುರುವಾರ ರಾಜ್ಯಸಭೆಯಲ್ಲಿ ಮಂಡಿಸಿತು.

ವಕ್ಫ್ ಮಸೂದೆ ಮಂಡನೆಗೆ ಇಂಡಿ ಮೈತ್ರಿಕೂಟದ ಮಿತ್ರರು ಆಕ್ಷೇಪ ವ್ಯಕ್ತಪಡಿಸಿದ್ದು, ಈ ವೇಳೆ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಮಾತಿನ ಚಕಮಕಿ ಏರ್ಪಟ್ಟಿತು.

ಕೆಲ ಕಾಲ ಸಂಸತ್ತಿನಲ್ಲಿ ಗೊಂದಲದ ವಾತಾವರಣ ಸೃಷ್ಟಿಯಾದ ಬೆನ್ನಲ್ಲೇ, ಸಭಾಧ್ಯಕ್ಷ ಜಗದೀಪ್ ಧನಕರ್ ಅವರು ಕೆಲಕಾಲ ಕಲಾಪವನ್ನು ಮುಂದೂಡಿದರು. ಆದಾಗ್ಯೂ, ಕಲಾಪಗಳು ಪುನರಾರಂಭಗೊಂಡ ಕೂಡಲೇ, ವಿರೋಧ ಪಕ್ಷದ ಸದಸ್ಯರು ಮತ್ತೆ ಗದ್ದಲ ಎಬ್ಬಿಸಿದರು.

ವಕ್ಫ್ (ತಿದ್ದುಪಡಿ) ಮಸೂದೆಯ ಜಂಟಿ ಸಂಸದೀಯ ಸಮಿತಿ (ಜೆಪಿಸಿ) ಅಧ್ಯಕ್ಷೆ ಜಗದಂಬಿಕಾ ಪಾಲ್, ಆರು ತಿಂಗಳ ದೇಶಾದ್ಯಂತ ಸಮಾಲೋಚನೆ ನಡೆಸಿ ನಂತರ ಜೆಪಿಸಿ ತನ್ನ ವರದಿಯನ್ನು ಸಂಸತ್ತಿನಲ್ಲಿ ಬಿಜೆಪಿ ಸಂಸದೆ



ಮೇಧಾ ವಿಶ್ರಾಮ್ ಕುಲಕರ್ಣಿ ವರದಿ ಮಂಡಿಸಿದರು. ಇದೇ ವೇಳೆ ಸಮಿತಿಯ ಮುಂದೆ ನೀಡಿದ ಸಾಕ್ಷ್ಯಗಳ ದಾಖಲೆಯ ಪ್ರತಿಯನ್ನು ಸಹ ಅವರು ಮಂಡಿಸಿದರು.

ವಕ್ಫ್ ಆಸ್ತಿಗಳನ್ನು ನಿಯಂತ್ರಿಸುವ ಮತ್ತು ದುರುಪಯೋಗ ಹಾಗೂ ಅತಿಕ್ರಮಣಗಳಂತಹ ಸಮಸ್ಯೆಗಳಿಗೆ ಕಾನೂನು ಪರಿಹಾರ ಒದಗಿಸುವ ಸಂಬಂಧದ ಮಸೂದೆ ಇದಾಗಿದ್ದು, ವಕ್ಫ್ ಮಸೂದೆ ಡಿಜಿಟಲೀಕರಣ, ವರ್ಧಿತ ಲೆಕ್ಕಪರಿಶೋಧನೆಗಳು ಮತ್ತು ಆಕ್ರಮಿತ ಆಸ್ತಿಗಳನ್ನು ಮರುಪಡೆಯಲು ಕಾನೂನು ಕಾರ್ಯವಿಧಾನಗಳನ್ನು ಒಳಗೊಂಡಂತೆ ಹಲವು ಸುಧಾರಣೆಗಳನ್ನು ಪರಿಚಯಿಸಲಿದೆ. ಈ ಮಸೂದೆಯು ಅಂಚಿನಲ್ಲಿರುವ ಗುಂಪುಗಳಿಗೆ ಸುಧಾರಣೆಗಳನ್ನು ಒಳಗೊಂಡಂತೆ 44 ತಿದ್ದುಪಡಿಗಳನ್ನು ಪ್ರಸ್ತಾಪಿಸುತ್ತದೆ. 1995 ರ ವಕ್ಫ್ ಕಾಯಿದೆಗೆ ತಿದ್ದುಪಡಿ ಮಾಡಲಿರುವ ಮಸೂದೆಯ ವರದಿಯನ್ನು ಹಿಂದಿ ಮತ್ತು ಇಂಗ್ಲಿಷ್‌ನಲ್ಲಿ ಮಂಡಿಸಲು ಸಂಸತ್ತಿನ ಸಮಿತಿ ಮುಖ್ಯಸ್ಥರು ಜನವರಿ 30ರಂದೇ ಸ್ಪೀಕರ್ ಓಂ ಬಿರ್ಲಾ ಅವರಿಗೆ ವರದಿ ಸಲ್ಲಿಸಿದ್ದರು.

ವಕ್ಫ್ ಕರಡು 44 ತಿದ್ದುಪಡಿಗಳನ್ನು ಹೊಂದಿದೆ, ಆ ಪೈಕಿ 14 ವಿಪಕ್ಷ ಸದಸ್ಯರ ತಿದ್ದುಪಡಿಗಳನ್ನು ಪ್ರಸ್ತಾಪಿಸಿದ್ದೇವೆ" ಎಂದು 14 ಷರತ್ತುಗಳಲ್ಲಿ 25 ತಿದ್ದುಪಡಿಗಳನ್ನು ಅಳವಡಿಸಿಕೊಳ್ಳಲಾಗಿದೆ ಅವರು ಕಲಾಪಕೆಕ ತಿಳಿಸಿದ್ದಾರೆ

ಸಮಿತಿಯ ಭಾಗವಾಗಿದ್ದ ವಿರೋಧ ಪಕ್ಷದ ಸಂಸದರ ಸಲಹೆಗಳನ್ನು ಈ ವರದಿಯಲ್ಲಿ ಸೇರಿಸಲಾಗಿಲ್ಲ ಎಂದು ವಿರೋಧ ಪಕ್ಷದ ಸಂಸದರು ವಾದಿಸುತ್ತಾರೆ. ಇದಲ್ಲದೆ, ಕಾಂಗ್ರೆಸ್ ಸಂಸದ ಇಮ್ರಾನ್ ಮಸೂದ್ ಇದನ್ನು ಅಲ್ಪಸಂಖ್ಯಾತರ ಮೇಲಿನ ದೌರ್ಜನ್ಯ ಎಂದು ಕರೆದರು ಮತ್ತು ಮುಸ್ಲಿಮರಿಗೆ ವಿಭಿನ್ನ ಮಾನದಂಡವನ್ನು ಅಳವಡಿಸಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮತ್ತು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಈ ವರದಿಯನ್ನು ಪ್ರಜಾಪ್ರಭುತ್ವ ವಿರೋಧಿ ಮತ್ತು ನಕಲಿ ಎಂದು ಕರೆದಿದ್ದಾರೆ ಮತ್ತು ಸಮಿತಿಯ ಭಾಗವಾಗಿರುವ ವಿರೋಧ ಪಕ್ಷದ ಸಂಸದರ ಸಲಹೆಗಳನ್ನು ಈ ವರದಿಯಲ್ಲಿ ಸೇರಿಸದ ಕಾರಣ ವರದಿಯನ್ನು ಜೆಪಿಸಿಗೆ ಹಿಂತಿರುಗಿಸಬೇಕುಪುಟ 2

## ಸುಕ್ರಿ ಅವರ ನಿಧನಕ್ಕೆ ವಿಜಯೇಂದ್ರ ಸಂತಾಪ

**ಬೆಂಗಳೂರು:** ಕಾರವಾರ ಜಿಲ್ಲೆಯ 'ಹಾಡುಹಕ್ಕಿ', ಪದ್ಮಶ್ರೀ ಪುರಸ್ಕೃತೆ ಸುಕ್ರಿ ಬೊಮ್ಮಗೌಡ ಅವರ ನಿಧನಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತೀವ್ರ ಸಂತಾಪ ಸೂಚಿಸಿದ್ದಾರೆ. ಸುಕ್ರಿ ಬೊಮ್ಮಗೌಡ ಅವರು ಬಾಲ್ಯದಲ್ಲಿದ್ದಾಗ ತಮ್ಮ ತಾಯಿ ಮೂಲಕ ಜಾನಪದ ಹಾಡುಗಳನ್ನು ಕಲಿತಿದ್ದರು. ಜಾನಪದ ಹಾಡು, ಹಾಲಕ್ಕಿ ಒಕ್ಕಲಿಗ ಬುಡಕಟ್ಟಿನ ಸಾಂಪ್ರದಾಯಿಕ ಸಂಗೀತ ಹಾಡುಗಳನ್ನು ಸಂರಕ್ಷಿಸಿಕೊಂಡು ಹೋಗುವಲ್ಲಿ ಶ್ರಮಿಸಿದ್ದರು. ಹಾಡುಗಳು ಮಾತ್ರವಲ್ಲದೇ ವಿವಿಧ ಸಾಮಾಜಿಕ ಹೋರಾಟಗಳಲ್ಲಿಯೂ ಮುಂಚೂಣಿಯಲ್ಲಿದ್ದರು ಎಂದು ತಿಳಿಸಿದ್ದಾರೆ. ಪುಟ 2

## ಕಾಡಾನೆ ದಾಳಿಗೆ ಯುವಕ ಬಲಿ

**ಮೈಸೂರು :** ಕಾಡಾನೆ ದಾಳಿಯಿಂದ ಯುವಕನೋರ್ವ ಮೃತಪಟ್ಟ ಘಟನೆ ಜಿಲ್ಲೆಯ ಹೆಚ್. ಡಿ. ಕೋಟೆ ತಾಲೂಕಿನ ಸರಗೂರು ಗದ್ದೆ ಹಳ್ಳ ಗ್ರಾಮದಲ್ಲಿ ನಡೆದಿದೆ. ಅವಿನಾಶ್ (21) ಮೃತ ಯುವಕ. ಬೆಳಗ್ಗೆ ಜಮೀನಿಗೆ ಅವಿನಾಶ್ ಹೋದ ವೇಳೆ ಮೂರು ಕಾಡಾನೆಗಳು ದಾಳಿ ಮಾಡಿವೆ. ಪರಿಣಾಮವಾಗಿ ಸ್ಥಳದಲ್ಲೇ ಯುವಕ ಮೃತಪಟ್ಟಿದ್ದಾನೆ. ಜಮೀನಿನಲ್ಲಿ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದ್ದು, ಸ್ಥಳದಲ್ಲಿ ಗ್ರಾಮಸ್ಥರು ನೆರೆದಿದ್ದಾರೆ.

ಸ್ಥಳಕ್ಕೆ ಅರಣ್ಯ ಇಲಾಖೆ ಆಗಮಿಸಿ ಆನೆಗಳನ್ನು ಕಾಡಿಗೆ ಅಟ್ಟುವ ಪ್ರಯತ್ನ ಮಾಡುತ್ತಿದ್ದಾರೆ. ಈ ವೇಳೆ ಸ್ಥಳಕ್ಕೆ ಬಂದ ಅರಣ್ಯ ಇಲಾಖೆಯ ಅಧಿಕಾರಿಗಳನ್ನು ಕುಟುಂಬಸ್ಥರು ಮತ್ತು ಗ್ರಾಮಸ್ಥರು ತರಾಟೆಗೆ ತೆಗೆದುಕೊಂಡರು. ತಡೆಗೋಡೆಗೆ ಹಾಕಿದ್ದ ರೈಲ್ವೆ ಕಂಬಿಗಳನ್ನು ಪುಟ 2

## ಮರಕ್ಕೆ ಬಸ್ ಡಿಕ್ಕಿ: 25ಕ್ಕೂ ಹೆಚ್ಚು ಪ್ರಯಾಣಿಕರಿಗೆ ಗಾಯ

**ಮಂಡ್ಯ:** ಚಾಲಕನ ನಿಯಂತ್ರಣ ತಪ್ಪಿ ಮರಕ್ಕೆ ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿ ಹೊಡೆದ ಪರಿಣಾಮ 25ಕ್ಕೂ ಹೆಚ್ಚು ಜನರು ಗಾಯಗೊಂಡಿರುವ ಘಟನೆ ಕೆ.ಆರ್.ಪೇಟೆ ತಾಲೂಕಿನ ಕುಂದನಹಳ್ಳಿ ಗೇಟ್ ಬಳಿ ನಡೆದಿದೆ. 25ಕ್ಕೂ ಹೆಚ್ಚು ಜನರನ್ನು ಹೊತ್ತು ಸರ್ಕಾರಿ ಬಸ್ ಆಲೇನಹಳ್ಳಿ ಗ್ರಾಮದಿಂದ ಕೆ.ಆರ್.ಪೇಟೆಗೆ ತೆರಳುತ್ತಿದ್ದ ವೇಳೆ ಅಪಘಾತ ಸಂಭವಿಸಿದೆ. ಘಟನೆಯಲ್ಲಿ ಬಸ್ಸಿನಲ್ಲಿದ್ದ ಕೆಲ ಶಾಲಾ ಮಕ್ಕಳ ಸೇರಿ 25ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ.

ಗಾಯಾಳುಗಳನ್ನು ಕೆ.ಆರ್. ತಾಲೂಕು ಆಸ್ಪತ್ರೆಗೆ ರವಾನಿಸಲಾಗಿದೆ. ಪ್ರಕರಣ ಸಂಬಂಧ ಕೆ.ಆರ್. ಪೇಟೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಪುಟ 2

## ಮೆಟ್ರೋ ದರ ಇಳಿಕೆಗೆ ಸೂಚನೆ

**ಬೆಂಗಳೂರು:** ಇತ್ತೀಚೆಗೆ ಬಿಎಂಆರ್ ಸಿಎಲ್ ಮೆಟ್ರೋ ಪ್ರಯಾಣ ದರವನ್ನ ಭಾರಿ ಪ್ರಮಾಣದಲ್ಲಿ ಏರಿಕೆ ಮಾಡಿದ್ದಕ್ಕೆ ಪ್ರಯಾಣಿಕರಿಂದ ತೀವ್ರ ಆಕ್ರೋಶ ವ್ಯಕ್ತವಾದ ಬೆನ್ನಲ್ಲೆ ಇದೀಗ ಸಿಎಂ ಸಿದ್ದರಾಮಯ್ಯ ಅವರು ಮೆಟ್ರೋ ಪ್ರಯಾಣ ದರ ಇಳಿಕೆ ಮಾಡುವಂತೆ ಬಿಎಂಆರ್ ಸಿಎಲ್ ಗೆ ಸೂಚನೆ ನೀಡಿದ್ದಾರೆ.



ಈ ಕುರಿತು ಟ್ವೀಟ್ ಮಾಡಿರುವ ಸಿಎಂ ಸಿದ್ದರಾಮಯ್ಯ, ಬೆಂಗಳೂರು ಮೆಟ್ರೊ ರೈಲು ನಿಗಮ (ಬಿಎಂಆರ್‌ಸಿಎಲ್) ಇತ್ತೀಚೆಗೆ ಪರಿಷ್ಕರಿಸಿರುವ ಪ್ರಯಾಣ ದರ ಏರಿಕೆ ಹಲವು ರೀತಿಯ ವೈಪರೀತ್ಯಗಳಿಂದ ಕೂಡಿದ್ದು, ಕೆಲವು ಕಡೆಗಳಲ್ಲಿ ಪ್ರಯಾಣ ದರ ದುಪ್ಪಟ್ಟಾಗಿರುವುದನ್ನು ಗಮನಿಸಿದ್ದೇನೆ. ಇದರ ವಿರುದ್ಧ ವ್ಯಕ್ತವಾದ ಸಾರ್ವಜನಿಕರ ವಿರೋಧವನ್ನು ಪರಿಗಣಿಸಿ ಎಲ್ಲೆಲ್ಲಿ ಅಸಹಜ ರೀತಿಯಲ್ಲಿ ದರ ಏರಿಕೆಯಾಗಿದೆಯೋ ಅಂತಹ ಕಡೆಗಳಲ್ಲಿ ಪ್ರಯಾಣ ದರ ಇಳಿಸುವಂತೆ ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕರಿಗೆ ತಿಳಿಸಿದ್ದೇನೆ ಎಂದು ತಿಳಿಸಿದ್ದಾರೆ.

ಮೆಟ್ರೊ ರೈಲು ವ್ಯವಸ್ಥೆ ದೊಡ್ಡ ಪ್ರಮಾಣದಲ್ಲಿ ಬಂಡವಾಳ ಹೂಡಿಕೆ ಮಾಡಬೇಕಾಗಿರುವ ಸಾರ್ವಜನಿಕ ಸಾರಿಗೆ ವ್ಯವಸ್ಥೆಯಾಗಿರುವ ಕಾರಣ ಪ್ರಯಾಣ ದರ ಪರಿಷ್ಕರಣೆ ಅನಿವಾರ್ಯವಾಗಿತ್ತು ಎನ್ನುವುದು ನಿಜವಾದರೂ ಅಂತಿಮವಾಗಿ ಪ್ರಯಾಣಿಕರ ಹಿತರಕ್ಷಣೆ ಮಾಡಬೇಕಾಗಿರುವುದು ನಮ್ಮ ಕರ್ತವ್ಯ ಎನ್ನುವುದನ್ನು ಬಿಎಂಆರ್‌ಸಿಎಲ್ ಗಮನಕ್ಕೆ ತಂದಿದ್ದೇನೆ ಎಂದು ಟ್ವಿಟ್ಟರ್ ನಲ್ಲಿ ತಿಳಿಸಿದ್ದಾರೆ.

**ದರ ಇಳಿಕೆಯ ಅಂತಿಮ ತೀರ್ಮಾನ ಕೇಂದ್ರ ಸಮಿತಿಯದ್ದು: ಡಿಸಿಎಂ**

"ಮೆಟ್ರೋ ದರ ಇಳಿಸಬೇಕು ಎಂದು ನಮ್ಮ ಸರ್ಕಾರ ಅಭಿಪ್ರಾಯವನ್ನು ಬಿಎಂಆರ್ ಸಿಎಲ್ ಗೆ ತಿಳಿಸಿದ್ದು, ಅಂತಿಮ ತೀರ್ಮಾನ ಕೇಂದ್ರ ಸಮಿತಿಯದ್ದು" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

"ನಮಗೂ ಅದಕ್ಕೂ ಸಂಬಂಧವಿಲ್ಲ. ಈ ವಿಚಾರ ರಾಜ್ಯ ಸರ್ಕಾರದ ಸುಪರ್ದಿಗೆ ಬರಲ್ಲ, ಇದಕ್ಕಾಗಿಯೇ ಕೇಂದ್ರ ಸಮಿತಿ ಪುಟ 2

## ವೋಲ್ವೊದಿಂದ 1,500 ಕೋಟಿ ರೂ. ಹೂಡಿಕೆ

**ಬೆಂಗಳೂರು:** ಬಸ್ ಮತ್ತು ಟ್ರಕ್ ತಯಾರಿಕೆಗೆ ಹೆಸರಾಗಿರುವ ಸ್ವೀಡನ್ನ ಮೂಲದ ವೋಲ್ವೊ ಕಂಪನಿಯು ಹೊಸಕೋಟೆಯಲ್ಲಿರುವ ತನ್ನ ತಯಾರಿಕಾ ಸ್ಥಾವರವನ್ನು ವಿಸ್ತರಿಸಲು ತೀರ್ಮಾನಿಸಿದ್ದು, ಇದಕ್ಕಾಗಿ 1,300ರಿಂದ 1,500 ಕೋಟಿ ರೂ. ಬಂಡವಾಳ ಹೂಡಿಕೆ ಮಾಡುವುದಾಗಿ ಘೋಷಿಸಿದೆ.

ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ಅವರ ಅಧಿಕೃತ ನಿವಾಸ 'ಕಾವೇರಿ'ಯಲ್ಲಿ ಗುರುವಾರ ಒಡಂಬಡಿಕೆಗೆ ಅಂಕಿತ ಬಿದ್ದಿದೆ.

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಅವರ ಉಪಸ್ಥಿತಿಯಲ್ಲಿ ಈ ಪ್ರಕ್ರಿಯೆ ನೆರವೇರಿತು. ಒಡಂಬಡಿಕೆಗೆ ಸರಕಾರದ ಪರವಾಗಿ ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್ ಮತ್ತು ವೋಲ್ವೊ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ ಕಮಲ್ ಬಾಲಿ ಸಹಿ ಹಾಕಿದರು.

ಇಲ್ಲಿನ ಅರಮನೆ ಆವರಣದಲ್ಲಿ ನಡೆಯುತ್ತಿರುವ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಸಕ್ರಿಯ




ವಾಗಿರುವ ವೊಲ್ವೊ ಸಂಸ್ಥೆ, ಅದರ ಭಾಗವಾಗಿ ಈ ಪ್ರಮುಖ ಒಪ್ಪಂದಕ್ಕೆ ಸಹಿ ಹಾಕಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, 'ವೋಲ್ವೋ ಕಂಪನಿಯು 25 ವರ್ಷಗಳ ಹಿಂದೆಯೇ ರಾಜ್ಯಕ್ಕೆ ಬಂದು, ಬಂಡವಾಳ ಹೂಡಿ, ಬದಲಾವಣೆಗೆ ನಾಂದಿ ಹಾಡಿತು. ಈಗ ನಮ್ಮಲ್ಲಿ ವೋಲ್ವೊ ಎನ್ನುವುದು ಉತ್ಕೃಷ್ಟ ಗುಣಮಟ್ಟದ ಬಸ್ಸುಗಳಿಗೆ ಇನ್ನೊಂದು ಹೆಸರಾಗಿದೆ. ರಾಜ್ಯ ಸಾರಿಗೆ ನಿಗಮದ ಐಷಾರಾಮಿ ಬಸ್ಸುಗಳನ್ನು ಕೂಡ ಜನ ಇದೇ ಹೆಸರಿನಿಂದ ಕರೆಯುತ್ತಿದ್ದಾರೆ. ವೋಲ್ವೊ ಕಂಪನಿಗೆ ಸರಕಾರ ಅಗತ್ಯ ಸೌಲಭ್ಯ ಪುಟ 2

## ಅಮೆರಿಕಾದ ರಾಷ್ಟ್ರೀಯ ಗುಪ್ತಚರ ನಿರ್ದೇಶಕಿ ತುಳಸಿ ಗಬ್ಬಾರ್ಡ್ ಭೇಟಿಯಾದ ಮೋದಿ

**ವಾಷಿಂಗ್ಟನ್:** ಪ್ರಧಾನಿ ನರೇಂದ್ರ ಮೋದಿ ಅವರು ಡೊನಾಲ್ಡ್ ಟ್ರಂಪ್ ಆಡಳಿತದಲ್ಲಿ ಹೊಸದಾಗಿ ನೇಮಕಗೊಂಡ ರಾಷ್ಟ್ರೀಯ ಗುಪ್ತಚರ ನಿರ್ದೇಶಕಿ ತುಳಸಿ ಗಾರ್ಡ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು ಮತ್ತು ಭಾರತ-ಯುಎಸ್ ಸ್ನೇಹದ ಬಗ್ಗೆ ಚರ್ಚಿಸಿದರು.

ಹಿಂದೂ-ಅಮೆರಿಕನ್ ಆಗಿರುವ ಗಬ್ಬಾರ್ಡ್ ಅವರು ರಾಷ್ಟ್ರದ ಉನ್ನತ ಗುಪ್ತಚರ ಅಧಿಕಾರಿಯಾಗಿ ದೃಢೀಕರಿಸಲ್ಪಟ್ಟಿದ್ದಕ್ಕಾಗಿ



ಮೋದಿ ಅವರನ್ನು ಅಭಿನಂದಿಸಿದರು. ವಾಷಿಂಗ್ಟನ್ ಡಿಸಿಯಲ್ಲಿ ಯುಎಸ್ ನ ರಾಷ್ಟ್ರೀಯ ಗುಪ್ತಚರ ನಿರ್ದೇಶಕಿ ಗಬ್ಬಾರ್ಡ್ ಅವರನ್ನು ಭೇಟಿಯಾಗಿ ಭಾರತ-ಯುಎಸ್ ಎ ಸ್ನೇಹದ ವಿವಿಧ ಅಂಶಗಳನ್ನು ಚರ್ಚಿಸಿದ್ದೇವೆ ಎಂದು ಮೋದಿ ಎಕ್ಸ್ ಮಾಡಿದ್ದಾರೆ.

ಭಯೋತ್ಪಾದನೆ ನಿಗ್ರಹ, ಸೈಬರ್ ಭದ್ರತೆ ಮತ್ತು ಉದಯೋನ್ಮುಖ ಬೆದರಿಕೆಗಳಲ್ಲಿ ಗುಪ್ತಚರ ಸಹಕಾರವನ್ನು ಹೆಚ್ಚಿಸುವ ಪುಟ 2

## ಸಿದ್ದರಾಮಯ್ಯ ಅವರೇ 5 ವರ್ಷ ಸಿಎಂ

ಬೆಂಗಳೂರು:ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಪೂರ್ಣಾವಧಿ ಮುಖ್ಯಮಂತ್ರಿ ಎಂಬ ವಿಚಾರ ಮತ್ತೆ ಮುನ್ನೆಲೆಗೆ ಬಂದಿದ್ದು, ಸಚಿವರುಗಳಾದ ಎಂ.ಬಿ ಪಾಟೀಲ್, ಡಾ. ಜಿ. ಪರಮೇಶ್ವರ್ ಇವರುಗಳು ಸಿದ್ದರಾಮಯ್ಯ ಅವರೇ ಪೂರ್ಣಾವಧಿ ಮುಖ್ಯಮಂತ್ರಿ ಎಂದು ಹೇಳಿಕೆ ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಹೈಕಮಾಂಡ್ ಮುಖ್ಯಮಂತ್ರಿಯನ್ನಾಗಿ ನೇಮಕ ಮಾಡಿದೆ. ಪೂರ್ಣಾವಧಿಗೆ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರೆ ಎಂದರು.





ಸದ್ಯ ಮುಖ್ಯಮಂತ್ರಿ ಹುದ್ದೆ ಖಾಲಿ ಇಲ್ಲ ಎಂದ ಅವರು, ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿ ಈ ಅವಧಿಯನ್ನೂ ಪೂರೈಸಿದ ನಂತರ ಅವರ ನೇತೃತ್ವದಲ್ಲೇ ಮುಂದಿನ ವಿಧಾನಸಭಾ ಚುನಾವಣೆಯನ್ನೂ ಎದುರಿಸುತ್ತೇವೆ. ಮುಂದಿನ ಬಾರಿಯೂ ನಾವೇಅಧಿಕಾರಕ್ಕೆ ಬರುತ್ತೇವೆ ಎಂದರು. ಪುಟ 2

## ಕೋವಿಡ್ ಸಂದರ್ಭದ ಸಂಕಷ್ಟಗಳನ್ನು ಮುದ್ರಣ ಮಾಧ್ಯಮ ಜೀರ್ಣಿಸಿಕೊಂಡು ಮುಂದುವರೆದಿದೆ

**ಕೋಲಾರ:** ಜಗತ್ತು ಎಐ ಹಿಂದೆ ಓಡುವಾಗ ನಾವು ಎಫ್‌ಐ ಹಿಂದೆ ಓಡ್ತಾ ಇದೀವಿ. ಫೇಕ್ ನ್ಯೂಸ್ ಗಳ ಕಾರಣಕ್ಕೆ ಈಗ ಫ್ಯಾಕ್ಟ್ ಚೆಕ್ ಆರಂಭಿಸುವ ಸ್ಥಿತಿ ಬಂದಿದೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು ಅಭಿಪ್ರಾಯಪಟ್ಟರು.

ಮಾಧ್ಯಮ ಅಕಾಡೆಮಿ ಆಯೋಜಿಸಿದ್ದ "ಪತ್ರಿಕೋದ್ಯಮ ಇಂದು-ಮುಂದು" ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಪತ್ರಕರ್ತರಲ್ಲಿ ಅಧ್ಯಯನಶೀಲತೆ ಕಡಿಮೆ ಆಗುತ್ತಿದೆ. ಕೈಯಲ್ಲಿ ಲೋಗೋ ಹಿಡಿದು ಪ್ರಶ್ನೆ ಕೇಳುವ ಪತ್ರಕರ್ತರಿಗೆ ವಾಪಾಸ್ ಅದೇ ವಿಚಾರದ ಬಗ್ಗೆ ನಾವೇ ಒಂದು ಪ್ರಶ್ನೆ ಕೇಳಿದರೆ ಅವರಲ್ಲಿ ಉತ್ತರ ಇರುವುದಿಲ್ಲ. ಇದಕ್ಕೆ ಅಧ್ಯಯನಶೀಲತೆಯ ಕೊರತೆಯೇ ಕಾರಣ ಎಂದರು. ಮತ್ತೊಂದು ಊಹಾ ಪತ್ರಿಕೋದ್ಯಮ ಅತಿಯಾಗುತ್ತಿದೆ. ನಡೆಯದ ಸಂಗತಿಗಳನ್ನು ಅವರಿಗೆ ಅವರೇ ಊಹೆ ಮಾಡಿಕೊಂಡು ಬ್ರೇಕಿಂಗ್ ಸುದ್ದಿ ಕೊಡುವ ಹಾವಳಿ ಹೆಚ್ಚಾಗಿದೆ ಎಂದರು.

ಮಾಧ್ಯಮ ಅಕಾಡೆಮಿ ಇಂದು ಆಯೋಜಿ ಸಿರುವ



ಪತ್ರಿಕೋದ್ಯಮ: ಇಂದು-ಮುಂದು" ವಿಷಯ ಕುರಿತ ಒಂದು ದಿನದ ಕಾರ್ಯಾಗಾರ ಅತ್ಯಂತ ಅರ್ಥಪೂರ್ಣ ಮತ್ತು ಅಗತ್ಯವಾದದ್ದು ಪತ್ರಿಕಾ ವೃತ್ತಿಗೆ, ಮಾಧ್ಯಮ ಕ್ಷೇತ್ರಕ್ಕೆ ಬಂದೊದಗಬಹುದಾದ ಸವಾಲುಗಳನ್ನು ಮೊದಲೇ ಗ್ರಹಿಸಿ ಆ ಸವಾಲುಗಳನ್ನು ಗೆಲ್ಲಲು ಅಗತ್ಯವಾದ ಬೌದ್ಧಿಕ ಕಸರತ್ತು ನಡೆಸುವುದು ಅತ್ಯಗತ್ಯ ಎಂದರು.

ಸಂವಿಧಾನ ಶಿಲ್ಪಿ ಅಂಬೇಡ್ಕರ್ ಅವರು ಪತ್ರಿಕೋದ್ಯಮವನ್ನು ಸಮಾಜದ ಪ್ರಾಣವಾಯು ಅಂತ ಕರೆದಿದ್ದಾರೆ. ಆದರೆ ಈ ಮಾತು ಈಗ ಪತ್ರಿಕೋದ್ಯಮದಲ್ಲಿ ಉಳಿದಿದೆಯಾ ಎಂದು ನಾವೇ ಪ್ರಶ್ನಿಸಿಕೊಳ್ಳಬೇಕು ಎಂದರು.

ಇವತ್ತಿನ ಈ ಕಾರ್ಯಾಗಾರಕ್ಕೆ ಎರಡು ಕಾರಣಗಳು ಇರಬಹುದು ಎಂದು ನಾನು ಭಾವಿಸುತ್ತೇನೆ...

1) ಎಐ (ಕೃತಕ ಬುದ್ದಿ ಮತ್ತೆ) ಹಾಗೂ ಇತರೆ ತಂತ್ರಜ್ಞಾನ ತಂದೊಡ್ಡುವ ಸವಾಲು.

2) ತಂತ್ರಜ್ಞಾನದ ಜೊತೆಗೆ ಫೇಕ್ ನ್ಯೂಸ್ ವೇಗವೂ ಹೆಚ್ಚಾಗುತ್ತಿರುವ ಸವಾಲು. ಪುಟ 2

## ಪದ್ಮಶ್ರೀ ಸುಕ್ರಿ ಬೊಮ್ಮ ಗೌಡ ನಿಧನ

**ಕಾರವಾರ:** ಜಾನಪದ ಗಾಯಕಿ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತೆ ಹಾಡುಹಕ್ಕಿ ಸುಕ್ರಿ ಬೊಮ್ಮ ಗೌಡ (88) ಅವರು ವಯೋಸಹಜ ಕಾಯಿಲೆಗಳಿಂದ ಗುರುವಾರ ನಸುಕಿನ ಜಾವ ಸ್ವಗೃಹದಲ್ಲಿ ನಿಧನರಾಗಿದ್ದಾರೆ.



ಉತ್ತರಕನ್ನಡ ಜಿಲ್ಲೆಯ ಅಂಕೋಲಾ ತಾಲೂಕಿನ ಬಡಿಗೇರಿಯ ಸುಕ್ರಜ್ಜಿ ಕಳೆದ ಹಲವು ವರ್ಷದಿಂದ ಉಸಿರಾಟದ ಸಮಸ್ಯೆ ಸೇರಿದಂತೆ ಕೆಲ ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದರು.

ಹಲವು ಬಾರಿ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದಿದ್ದರು. ಕಳೆದ ಎರಡು ದಿನದ ಹಿಂದೆಯೂ ಮಣಿಪಾಲದ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದು ವಾಪಸ್ ಆಗಿದ್ದರು. ಆದರೆ, ಗುರುವಾರ ಇಂದು ನಸುಕಿನ ಜಾವ ಸುಮಾರು 3.30 ಗಂಟೆಗೆ ಕೊನೆಯುಸಿರೆಳೆದಿದ್ದಾರೆ. ಪುಟ 2

ಮೊದಲ ಪುಟದಿಂದ

## ವಕ್ಫ್ ಮಸೂದೆ

ಎಂದು ಹೇಳಿದ್ದಾರೆ. ವಕ್ಫ್ ಮಂಡಳಿಯ ಕುರಿತಾದ ಜೆಪಿಸಿ ವರದಿಯ ಬಗ್ಗೆ ಅನೇಕ ಸದಸ್ಯರ ಭಿನ್ನಾಭಿಪ್ರಾಯವಿದೆ' ಎಂದು ಖರ್ಗೆ ಹೇಳಿದರು.

ಈ ಬಗ್ಗೆ ಮಾತನಾಡಿದ ಕಾಂಗ್ರೆಸ್ ಸಂಸದ ಗೌರವ್ ಗೊಗೊಯ್, ಈಗಾಗಲೇ ಜಾರಿಯಲ್ಲಿರುವ ವಕ್ಫ್ ಕಾಯ್ದೆಯನ್ನು ಮುಂದುವರಿಸುವ ಬದಲು ರಾಜಕೀಯ ಪ್ರೇರಿತ ತಿದ್ದುಪಡಿಯನ್ನು ತರಲು ಪ್ರಯತ್ನಿಸಲಾಗುತ್ತಿದೆ ಎಂದು ಆರೋಪಿಸಿದರುಜೆಪಿಸಿ ವರದಿಯಲ್ಲಿ ಹಲವಾರು ಸಂಸತ್ ಸದಸ್ಯರು ತಮ್ಮ ಭಿನ್ನಾಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. ಈ ಮಸೂದೆಯಲ್ಲಿ ಸಾಂವಿಧಾನಿಕ ನಿಯಮಾವಳಿಗಳ ಬಗ್ಗೆ ನಿರ್ಲಕ್ಷ್ಯ ಮಾಡಲಾಗಿದೆ ಎಂಬುದು ಸ್ಪಷ್ಟವಾಗಿದೆ. ಪ್ರಸ್ತುತ, ವಕ್ಫ್ ಆಸ್ತಿಗಳನ್ನು ನಿರ್ವಹಿಸಲು ಕಾಯ್ದೆ ಇದೆ ಮತ್ತು ಸರ್ಕಾರವು ಈ ಕಾಯ್ದೆಯನ್ನು ಹೇಗೆ ಉತ್ತಮವಾಗಿ ಜಾರಿಗೊಳಿಸಬಹುದು ಎಂಬುದರ ಮೇಲೆ ಗಮನ ಕೇಂದ್ರೀಕರಿಸುವ ಬದಲು, ರಾಜಕೀಯ ಪ್ರೇರಿತ ತಿದ್ದುಪಡಿಯನ್ನು ತರುವ ಪ್ರಯತ್ನ ಮಾಡುತ್ತಿದೆ" ಎಂದು ಆರೋಪಿಸಿದರು

## ದರ ಇಳಿಕೆಗೆ ಸೂಚನೆ

ರಚಿಸಲಾಗಿದೆ. ಜನರ ಮನವಿ ಆಲಿಸಿ ಮುಖ್ಯಮಂತ್ರಿಗಳು ಮೆಟ್ರೋ ದರ ಇಳಿಸುವ ಬಗ್ಗೆ ಅಭಿಪ್ರಾಯ ತಿಳಿಸಿದ್ದಾರೆ. ಜನಸಾಮಾನ್ಯರು ಹಾಗೂ ಮೆಟ್ರೋ ಹಿತಾಸಕ್ತಿ ಕಾಯಲು ಯಾವ ನಿರ್ಧಾರ ಮಾಡುತ್ತಾರೋ ಮಾಡಲಿ. ಈ ದರ ನಿಗದಿಗೆ ನ್ಯಾಯಾಧೀಶರ ನೇತೃತ್ವದ ಪ್ರತ್ಯೇಕ ಕೇಂದ್ರ ಸಮಿತಿ ಮಾಡಲಾಗಿದೆ. ಆ ಸಮಿತಿಗೆ ನಾವು ನಮ್ಮ ಅಭಿಪ್ರಾಯ ತಿಳಿಸುತ್ತೇವೆ, ಅಂತಿಮ ನಿರ್ಧಾರ ಅವರದು" ಎಂದು ತಿಳಿಸಿದರು.

**ಬಿಎಂಆರ್‌ಸಿಎಲ್ ಅಧಿಕಾರಿಗಳ ಸಭೆ:** ಮೆಟ್ರೊ ರೈಲು ಪ್ರಯಾಣ ದರ ಇಳಿಕೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚನೆ ನೀಡಿರುವ ಬೆನ್ನಲ್ಲೆ ಬಿಎಂಆರ್‌ಸಿಎಲ್ ಅಧಿಕಾರಿಗಳು ಇಂದು ಸಭೆ ನಡೆಸಿ ಅಸಹಜವಾಗಿ ಏರಿಕೆ ಮಾಡಿರುವ ಮೆಟ್ರೊ ರೈಲು ಪ್ರಯಾಣದರ ಕಡಿತದ ಬಗ್ಗೆ ಒಂದು ತೀರ್ಮಾನ ಕೈಗೊಳ್ಳಲಿದ್ದಾರೆ. ಬಿಎಂಆರ್‌ಸಿಎಲ್‌ನ ವ್ಯವಸ್ಥಾಪಕ ನಿರ್ದೇಶಕರು ನಿನ್ನೆ ಮುಖ್ಯಮಂತ್ರಿ ಸಿದ್ದರಾಮಯ್ಯರವರನ್ನು ಭೇಟಿ ಮಾಡಿದ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ಏರಿಸಿರುವ ದರವನ್ನು ಇಳಿಕೆ ಮಾಡುವಂತೆ ಸೂಚಿಸಿದ್ದರು. ಮುಖ್ಯಮಂತ್ರಿಗಳ ಸೂಚನೆ ಮೇರೆಗೆ ಬಿಎಂಆರ್‌ಸಿಎಲ್‌ನ ವ್ಯವಸ್ಥಾಪಕ ನಿರ್ದೇಶಕರು ಇಂದು ಅಧಿಕಾರಿಗಳ ಸಭೆ ನಡೆಸಿ ದರ ಪರಿಷ್ಕರಣೆ ಬಗ್ಗೆ ಒಂದು ತೀರ್ಮಾನ ಕೈಗೊಳ್ಳುವ ಸಾಧ್ಯತೆಗಳು ಇವೆ.

## 1,500 ಕೋಟಿ ಹೂಡಿಕೆ

ಮತ್ತು ನೆರವು ಒದಗಿಸಲಿದೆ. ಕಂಪನಿಯು ತನ್ನಲ್ಲಿ ಹೆಚ್ಚಿನ ಕನ್ನಡಿಗರಿಗೆ ಕೆಲಸ ಕೊಡಬೇಕು. ಇದರಿಂದ ಸ್ಥಳೀಯರಿಗೆ ಭದ್ರತೆ ಮತ್ತು ಆರ್ಥಿಕ ಬೆಳವಣಿಗೆ ಎರಡನ್ನೂ ಸಾಧಿಸಬಹುದು' ಎಂದರು.

ವೋಲ್ವೊ ಸಿಇಒ ಮಾರ್ಟಿನ್ ಲುಂಡ್ಸ್ಟೆಡ್ ಮಾತನಾಡಿ, 'ಕರ್ನಾಟಕದಲ್ಲಿ ಕಂಪನಿಯು ಪೀಣ್ಯ, ಹೊಸಕೋಟೆ ಮತ್ತು ಧಾರವಾಡ ಸಮೀಪದ ಪೀತಂಪುರದಲ್ಲಿ ತಯಾರಿಕಾ ಘಟಕಗಳನ್ನು ಹೊಂದಿದೆ. ಈಗ ನಾವು ವರ್ಷಕ್ಕೆ ಇಲ್ಲಿ 3,000 ಬಸ್/ಟ್ರಕ್ ತಯಾರಿಸುತ್ತಿದ್ದೇವೆ. ಹೊಸಕೋಟೆ ಸ್ಥಾವರದ ವಿಸ್ತರಣೆಯಿಂದ ನಾವು ವರ್ಷಕ್ಕೆ 20 ಸಾವಿರ ಬಸ್/ಟ್ರಕ್ ತಯಾರಿಸಬಹುದು. ಈ ಸಾಮರ್ಥ್ಯ ವೃದ್ಧಿಯಿಂದ ಉದ್ಯೋಗಸೃಷ್ಟಿಯೂ ಆಗಲಿದ್ದು, ಜಾಗತಿಕ ಪೂರೈಕೆ ಸರಪಳಿಯಲ್ಲಿ ಭಾರತ ಮತ್ತು ಕರ್ನಾಟಕದ ಸ್ಥಾನ ಮತ್ತಷ್ಟು ಸುಭದ್ರವಾಗಲಿದೆ. ಜತೆಗೆ ಸ್ಥಳೀಯ ಮಾರುಕಟ್ಟೆ ಅಗತ್ಯಗಳನ್ನೂ ಸರಾಗವಾಗಿ ಪೂರೈಸಲು ಸಾಧ್ಯವಾಗಲಿದೆ' ಎಂದರು.

ಬೆಂಗಳೂರು ವೋಲ್ವೋ ಕಂಪನಿಯ ಪಾಲಿಗೆ ಅಂತಾರಾಷ್ಟ್ರೀಯ ಮಟ್ಟದಲ್ಲಿ 4ನೇ ಅತಿದೊಡ್ಡ ತಾಣವಾಗಿದೆ. ಇಲ್ಲಿರುವ ನಮ್ಮ ಜಿಸಿಸಿ ಕೇಂದ್ರದಲ್ಲಿ 3,500ಕ್ಕೂ ಹೆಚ್ಚು ಮಂದಿ ಕೆಲಸ ಮಾಡುತ್ತಿದ್ದು, ಇಲ್ಲಿ ಆರ್ & ಡಿ, ಐಟಿ, ಖರೀದಿ, ಲಾಜಿಸ್ಟಿಕ್ಸ್ ಮತ್ತು ಹಣಕಾಸು ಸೇವೆಗಳನ್ನು ನಿರ್ವಹಿಸಲಾಗುತ್ತಿದೆ. ಇದಲ್ಲದೆ ಮಧ್ಯಪ್ರದೇಶದಲ್ಲಿ ಕೂಡ ಜಂಟಿ ಸಹಭಾಗಿತ್ವದ ಯೋಜನೆ ಜಾರಿಯಲ್ಲಿದೆ. ಕಂಪನಿಯ ವಹಿವಾಟು ಈಗ ವರ್ಷಕ್ಕೆ 50 ಬಿಲಿಯನ್ ಡಾಲರ್ ದಾಟಿದೆ ಎಂದು ಅವರು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎಲ್ ಕೆ ಅತೀಕ್ ಮತ್ತು ಕೈಗಾರಿಕಾ ಇಲಾಖೆ ಆಯುಕ್ತೆ ಗುಂಜನ್ ಕೃಷ್ಣ ಉಪಸ್ಥಿತರಿದ್ದರು.

## ವಿಜಯೇಂದ್ರ ಸಂತಾಪ

ಅವರಲ್ಲಿದ್ದ ಅದ್ಭುತ ಹಾಡುಗಾರಿಕೆ ಕಲೆಯನ್ನು ಗುರುತಿಸಿದ್ದ ಭಾರತ ಸರ್ಕಾರ, ಪದ್ಮಶ್ರೀ ಪ್ರಶಸ್ತಿ ನೀಡಿ ಗೌರವಿಸಿತ್ತು. ಸ್ಥಳೀಯ ಬುಡಕಟ್ಟು ಜನಾಂಗದ ಸಂಸ್ಕೃತಿಯನ್ನು ಸಂರಕ್ಷಿಸಿದ್ದಕ್ಕಾಗಿ ಕರ್ನಾಟಕ ಸರ್ಕಾರದಿಂದ ಪ್ರಶಸ್ತಿ, 'ಜಾನಪದ ಶ್ರೀ' ಪ್ರಶಸ್ತಿ, ಕನ್ನಡ ವಿಶ್ವವಿದ್ಯಾಲಯದಿಂದ ನೀಡಲಾಗುವ 'ನಾಡೋಜ' ಗೌರವ ಹಾಗೂ 2009ರಲ್ಲಿ ಸಂದೇಶ ಕಲಾ ಪ್ರಶಸ್ತಿ, ಆಳ್ವಾಸ್ ನುಡಿಸಿ ಪ್ರಶಸ್ತಿ ಸೇರಿದಂತೆ ಅನೇಕ ಗೌರವಗಳು ಇವರಿಗೆ ಲಭಿಸಿದ್ದವು ಎಂದು ತಿಳಿಸಿದ್ದಾರೆ.

ಅವರ ಕುಟುಂಬ ವರ್ಗದವರಿಗೆ ಈ ಅಗಲಿಕೆಯ ನೋವು ಸಹಿಸುವ ಶಕ್ತಿಯನ್ನು ಭಗವಂತನು ಕರುಣಿಸಲಿ. ಮೃತರ ಆತ್ಮಕ್ಕೆ ಚಿರಶಾಂತಿ ದೊರೆಯಲಿ ಎಂದು ಪ್ರಾರ್ಥಿಸಿದ್ದಾರೆ.

## ತುಳಸಿ ಗಬ್ಬಾರ್ಡ್ ಭೇಟಿಯಾದ ಮೋದಿ

ಬಗ್ಗೆಯೂ ಚರ್ಚೆಗಳು ಕೇಂದ್ರೀಕೃತವಾಗಿವೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಅಧಿಕೃತ ವಕ್ತಾರ ರಣಧೀರ್ ಜೈಸ್ವಾಲ್ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ. ಮೋದಿಜೀ ಅವರು ಇಂದು ವಾಷಿಂಗ್ಟನ್ ಡಿಸಿಯಲ್ಲಿ ಯುಎಸ್ ರಾಷ್ಟ್ರೀಯ ಗುಪ್ತಚರ ನಿರ್ದೇಶಕಿ ಗಾರ್ಡ್ ಅವರೊಂದಿಗೆ ಉತ್ಪಾದಕ ಸಭೆ ನಡೆಸಿದರು.

ಭಯೋತ್ಪಾದನೆ ನಿಗ್ರಹ, ಸೈಬರ್ ಭದ್ರತೆ ಮತ್ತು ಉದಯೋನ್ಮುಖ ಬೆದರಿಕೆಗಳಲ್ಲಿ ಗುಪ್ತಚರ ಸಹಕಾರವನ್ನು ಹೆಚ್ಚಿಸುವ ಬಗ್ಗೆ ಚರ್ಚೆಗಳು ಕೇಂದ್ರೀಕೃತವಾಗಿವೆ ಎಂದು ಪೋಸ್ಟ್ ಹೇಳಿದೆ. ಫ್ರಾನ್ಸ್‌ಗೆ ಭೇಟಿ ನೀಡಿದ ನಂತರ ಇಂದು ಮುಂಜಾನೆ ಅಮೆರಿಕದ ರಾಜಧಾನಿಗೆ ಮೋದಿ ಆಗಮಿಸಿದರು,

ಅಲ್ಲಿ ಅವರು ಫ್ರೆಂಚ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರೊಂದಿಗೆ ಕೃತಕ ಬುದ್ಧಿಮತ್ತೆಯ ಕ್ರಿಯಾ ಶೃಂಗಸಭೆಯ ಸಹ-ಅಧ್ಯಕ್ಷತೆ ವಹಿಸಿದ್ದರು.

## 5 ವರ್ಷ ಸಿಎಂ

ರಾಜ್ಯದ ಮುಖ್ಯಮಂತ್ರಿಯಾಗಿ ದೇವರಾಜ ಅರಸು ಅವರು 7 ವರ್ಷಗಳ ಕಾಲ ಅಧಿಕಾರ ನಡೆಸಿದ್ದರು. ಸಿದ್ದರಾಮಯ್ಯ ಅವರು 7 ವರ್ಷಗಳಲ್ಲ 10 ವರ್ಷ ಅಧಿಕಾರದಲ್ಲಿರುತ್ತಾರೆ ಎಂದೂ ಸಚಿವ ಎಂ.ಬಿ ಪಾಟೀಲ್ ಹೇಳಿದರು.

ಪರಮೇಶ್ವರ್ ಹೇಳಿಕೆಸಿದ್ದರಾಮಯ್ಯ ಅವರು ದೀರ್ಘಾವಧಿ ಮುಖ್ಯಮಂತ್ರಿಯಾಗಿ ದಾಖಲೆ ಮಾಡಲಿ, 5 ವರ್ಷ ಆಡಳಿತ ಪೂರೈಸಿದರೆ ಸಹಜವಾಗಿ ದಾಖಲೆಯಾಗಲಿದೆ. ಅವರೇ 5 ವರ್ಷ ಮುಖ್ಯಮಂತ್ರಿಯಾಗುರುತ್ತಾರೆ ಎಂದೇ ಭಾವಿಸಿದ್ದೇವೆ ಎಂದು ಗೃಹ ಸಚಿವ ಪರಮೇಶ್ವರ್ ಹೇಳಿದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕರನ್ನಾಗಿ ಶಾಸಕರು ಸಿದ್ದರಾಮಯ್ಯ ಅವರನ್ನು ಆಯ್ಕೆ ಮಾಡಿದ್ದರು. ಆ ಸಂದರ್ಭದಲ್ಲಿ ಹೈಕಮಾಂಡ್ ಸಿದ್ದರಾಮಯ್ಯ ಅವರಿಗೆ ಎರಡೂವರೆ ವರ್ಷ ಅಧಿಕಾರ ಎಂದು ನಮಗ್ಯಾರಿಗೂ ಹೇಳಿಲ್ಲ. ಹಾಗಾಗಿ ನಾವೆಲ್ಲ ಸಿದ್ದರಾಮಯ್ಯ 5 ವರ್ಷ ಮುಖ್ಯಮಂತ್ರಿಯಾಗಿರುತ್ತಾರೆ ಎಂದೇ ಭಾವಿಸಿದ್ದೇವೆ. ದೀರ್ಘಾವಧಿ ಮುಖ್ಯಮಂತ್ರಿಯಾಗಿ ಅವರು ದಾಖಲೆ ಮಾಡಲಿ ಎಂದು ನಾನು ಹಾರೈಸುತ್ತೇನೆ ಎಂದರು.

ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಬಗ್ಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರು ಸುಳಿವು ನೀಡಿರುವ ಬಗ್ಗೆ ಕೇಳಲಾದ ಪ್ರಶ್ನೆಗೆ ಪ್ರತಿಕ್ರಿಯಿಸಲು ನಿರಾಕರಿಸಿದ ಸಚಿವ ಪರಮೇಶ್ವರ್ ಅವರು ಹೈಕಮಾಂಡ್ ತೀರ್ಮಾನ ಏನೇ ಇದ್ದರೂ ನಾವು ಅದನ್ನು ಒಪ್ಪುತೇವೆ ಎಂದರು.

ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾವಣೆ, ಮುಖ್ಯಮಂತ್ರಿ ಹುದ್ದೆಗೆ ಸಂಬಂಧಿಸಿದಂತೆ ಯಾವುದೇ ಹೇಳಿಕೆಗಳನ್ನು ನೀಡಬಾರದು ಎಂದು ಹೈಕಮಾಂಡ್ ಕಟ್ಟಪ್ಪಣೆ ಮಾಡಿದ್ದರೂ ಈ ಇಬ್ಬರು ಸಚಿವರುಗಳು ಸಿದ್ದರಾಮಯ್ಯ ಅವರೇ ಪೂರ್ಣಾವಧಿ ಮುಖ್ಯಮಂತ್ರಿ ಎಂದು ಹೇಳಿಕೆ ನೀಡಿರುವುದು ರಾಜ್ಯಕಾಂಗ್ರೆಸ್‌ನಲ್ಲಿ ಒಳಗೊಳಗೆ ರಾಜಕೀಯ ಬೆಳವಣಿಗೆಗಳು ನಡೆಯುತ್ತಿವೆ ಎಂಬುದನ್ನು ದೃಢೀಕರಿಸಿವೆ.

# ಇಂದಿನ ಪೀಳಿಗೆಗೆ ಪಶ್ಚಿಮಘಟ್ಟದ ಮಹತ್ವ ತಿಳಿಸುವುದು ಅಗತ್ಯ




**ಬೆಂಗಳೂರು,:** ಅದ್ಭುತ ಜೀವವೈವಿಧ್ಯತೆಯ ತಾಣ ಹಾಗೂ ಹಲವು ಪ್ರಮುಖ ನದಿಗಳ ಮೂಲವಾದ ಪಶ್ಚಿಮಘಟ್ಟಗಳ ಮಹತ್ವದ ಬಗ್ಗೆ ಇಂದಿನ ಯುವ ಪೀಳಿಗೆಗೆ ಅರಿವು ಮೂಡಿಸುವ ಅಗತ್ಯವಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ಚಿತ್ರಕಲಾ ಪರಿಷತ್ತಿನಲ್ಲಿಂದು ಪ್ರೊ. ಮಾಧವ ಗಾಡ್ಗೀಳ್ ಅವರ ಆತ್ಮಕತೆ ೦ ಫಾಚಿಟಇ ಣಾ ಣುಜ ಊಟಟ ನ ಕನ್ನಡ ಕೃತಿ 'ಏರುಘಟ್ಟದ ನಡಿಗೆ' ಬಿಡುಗಡೆ ಮಾಡಿ ಮಾತನಾಡಿದ ಅವರು, ಡಾ. ಕಸ್ತೂರಿ ರಂಗನ್ ಸಮಿತಿಯ ವರದಿಯಲ್ಲಿ ಕರ್ನಾಟಕದ ಪಶ್ಚಿಮಘಟ್ಟ ಪ್ರದೇಶ 20,668 ಚ.ಕಿ.ಮೀ. ಪರಿಸರ ಸೂಕ್ಷ್ಮ ಎಂದು ಗುರುತಿಸಿದೆ. ರಾಜ್ಯ ಈಗಾಗಲೇ 16,114 ಚದರ ಕಿ.ಮೀ. ಸಂರಕ್ಷಿಸಿದ್ದು, ಕಸ್ತೂರಿ ರಂಗನ್ ವರದಿಯಲ್ಲಿ ನಮೂದಿಸಿರುವ ವ್ಯಾಪ್ತಿಯ ಶೇ. 83ರಷ್ಟು ಆಗಿರುತ್ತದೆ. ಉಳಿದ 4 ಸಾವಿರ ಚ.ಕಿ.ಮೀ ಅಂದರೆ ಶೇ. 17ರಷ್ಟು ಪ್ರದೇಶದಲ್ಲಿ 39 ತಾಲೂಕುಗಳ ಸುಮಾರು 1449 ಗ್ರಾಮಗಳಿದ್ದು, ಇಲ್ಲಿ ಶಾಲೆ, ಆಸ್ಪತ್ರೆ, ಅಂಗನವಾಡಿ, ವಸತಿ ಪ್ರದೇಶಗಳಿವೆ. ಹೀಗಾಗಿ ಜೀವನ, ಜೀವನೋಪಾಯ ಮತ್ತು ಪರಿಸರ ಸಂರಕ್ಷಣೆ ಎಲ್ಲವನ್ನೂ ಸಮತೋಲಿತವಾಗಿ ತೆಗೆದುಕೊಂಡು ಹೋಗಲಾಗುತ್ತಿದೆ ಎಂದು ತಿಳಿಸಿದರು. ಇಡೀ ವಿಶ್ವ, ಜಾಗತಿಕ ತಾಪಮಾನ ಏರಿಕೆ, ಹವಾಮಾನ ಬದಲಾವಣೆಯಂತಹ ಸವಾಲು ಎದುರಿಸುತ್ತಿದೆ. ಋತುಮಾನಗಳಲ್ಲಿ ಭಾರೀ ಬದಲಾವಣೆ ಆಗಿದೆ. ಒಂದು ತಿಂಗಳಲ್ಲಿ ಬೀಳಬೇಕಾದ ಮಳೆ ಒಂದು ವಾರದಲ್ಲಿ, ಒಂದು ವಾರದಲ್ಲಿ ಬೀಳುವ ಮಳೆ ಒಂದು ದಿನ ಅಥವಾ ಒಂದು ಗಂಟೆಯಲ್ಲಿ ಬೀಳುತ್ತಿದೆ. ಇಂತಹ ವೈಪರೀತ್ಯಗಳಿಗೆ ಮಾನವನ ದುರಾಸೆ. ಅರಣ್ಯ ನಾಶ, ಪ್ರಕೃತಿ, ಪರಿಸರದ ಮೇಲೆ ಮಾನವ ನಡೆಸುತ್ತಿರುವ ದೌರ್ಜನ್ಯ ಕಾರಣ ಎಂದರು.

ಇದನ್ನು ಮನಗಂಡು ರಾಜ್ಯದ ಹಸಿರು ವ್ಯಾಪ್ತಿ ಹೆಚ್ಚಿಸಲು 2023-24ರ ಸಾಲಿನಲ್ಲಿ 5 ಕೋಟಿ ಸಸಿ ನೆಡುವ ಗುರಿ ಹಾಕಿಕೊಳ್ಳಲಾಗಿತ್ತು. ಆದರೆ ಗುರಿ ಮೀರಿದ ಸಾಧನೆ ಮಾಡಿ 5 ಕೋಟಿ 48 ಲಕ್ಷ ಸಸಿ ನೆಡಲಾಗಿದೆ. 2024-25ರಲ್ಲಿ 3 ಕೋಟಿ ಸಸಿ ನೆಡಲಾಗಿದೆ. ಇವುಗಳ ಪೈಕಿ ಎಷ್ಟು ಬದುಕಿಳಿದಿವೆ ಎಂದು ತಿಳಿಯಲು ಆಡಿಟ್ ಕೂಡ ಮಾಡಿಸಲಾಗಿದ್ದು, ಈ ವಿವರವನ್ನು ಅರಣ್ಯ ಇಲಾಖೆಯ ಅಂತರ್ಜಾಲ ತಾಣದಲ್ಲಿ ಅಪ್ ಲೋಡ್ ಮಾಡಲಾಗಿದೆ ಎಂದು ತಿಳಿಸಿದರು.

ನಮ್ಮ ಪೂರ್ವಿಕರು ಪ್ರಕೃತಿದತ್ತವಾದ ನೈಸರ್ಗಿಕ ಸಂಪನ್ಮೂಲಗಳನ್ನು ಹಿತಮಿತವಾಗಿ ಬಳಸುತ್ತಿದ್ದರು. ಮರುಬಳಕೆಗೆ ಆದ್ಯತೆ ನೀಡುತ್ತಿದ್ದರು. ಆದರೆ ಇಂದು ಇಡೀ ಜಗತ್ತು ನೈಸರ್ಗಿಕ ಸಂಪನ್ಮೂಲವನ್ನು ಮನಸೋಇಚ್ಛೆ ಬಳಕೆ ಮಾಡುತ್ತಿದೆ. ಈ ಭೂಮಿ, ಈ ಭೂಮಿಯಲ್ಲಿರುವ ನೀರು, ಕಾಡು, ಬೆಟ್ಟ, ಗುಡ್ಡ, ಪರ್ವತ, ನದಿ ಇದ್ಯಾವುದೂ ನಮಗೆ ನಮ್ಮ ಪೂರ್ವಿಕರಿಂದ ಬಂದಿರುವ ಪಿತ್ರಾರ್ಜಿತ ಆಸ್ತಿಯಲ್ಲ. ಬದಲಾಗಿ ನಮ್ಮ ಮುಂದಿನ ಪೀಳಿಗೆ ನಮಗೆ ನೀಡಿರುವ ಸಾಲ. ಇದನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಹಸ್ತಾಂತರಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು.

ನಾವೆಲ್ಲರೂ ಸಾಮಾನ್ಯವಾಗಿ ಪರಿಸರ ಎಂದರೆ ಮರ, ಗಿಡ, ಕಾಡು, ಮೇಡು, ವನ್ಯಜೀವಿಗಳಿಗಷ್ಟೇ ಸೀಮಿತವಾಗುತ್ತೇವೆ. ಆದರೆ ಪ್ರೊ. ಗಾಡ್ಗೀಳ್ ಅವರು ಪರಿಸರ ವಿಜ್ಞಾನಿಯಾಗಿ ಪರಿಸರವನ್ನು ನೋಡಿರುವ ದೃಷ್ಟಿಕೋನವೇ ಬೇರೆ ಇದೆ. ಅವರು ಪರಿಸರವನ್ನು ಕಲ್ಲು ಮಣ್ಣಿನಿಂದ ಕೂಡಿದ ಭೂಮಿ, ಬೆಟ್ಟ, ಗುಡ್ಡ, ಈ ಭೂಮಿಯಲ್ಲಿ ಬೆಳೆಯುವ ಸಕಲ ಜೀವರಾಶಿ, ಸಸ್ಯ ಸಂಕುಲ, ಪಕ್ಷಿ ಸಂಕುಲ, ಕೀಟ ಸಂಕುಲ, ಸೂಕ್ಷ್ಮಾಣು ಜೀವಿಗಳು, ನದಿ ಮೂಲಗಳು, ಅರಣ್ಯವಾಸಿಗಳು, ನಾಗರಿಕತೆಯವರೆಗೆ ತಮ್ಮ ವ್ಯಾಪ್ತಿಯನ್ನು ಹಿಗ್ಗಿಸಿಕೊಂಡು ಅಧ್ಯಯನ ನಡೆಸಿದವರು ಎಂದರು.

ಹೀಗಾಗಿಯೇ ಇವರಿಗೆ ವಿಶ್ವಸಂಸ್ಥೆ ಚಾಂಪಿಯನ್ಸ್ ಆಫ್ ದಿ ಅರ್ಥ್ ಪ್ರಶಸ್ತಿ ನೀಡಿ ಗೌರವಿಸಿದೆ. ಪಶ್ಚಿಮ ಘಟ್ಟ ಕುರಿತಂತೆ ಮಾಧವ ಗಾಡ್ಗೀಳ್ ನೇತೃತ್ವದ ಸಮಿತಿ 31.08.2011ರಂದು ನೀಡಿರುವ ವರದಿ, ಅವರೆಲ್ಲರೂ ಕೈಗೊಂಡ ಅಧ್ಯಯನ ಪಶ್ಚಿಮಘಟ್ಟದ ಸಂರಕ್ಷಣೆಯಲ್ಲಿ ಮಹತ್ವದ ಪಾತ್ರ ವಹಿಸಿದೆ. ವರದಿ ಸಂಪೂರ್ಣವಾಗಿ ಜಾರಿಗೆ ಬಾರದೆ ಇರಬಹುದು. ಆದರೆ 2012ರ ಜುಲೈನಲ್ಲಿ ಪಶ್ಚಿಮಘಟ್ಟವನ್ನು ಸಂರಕ್ಷಿತ ಪ್ರದೇಶ ಎಂದು ಯುನೆಸ್ಕೋ ಘೋಷಿಸಲು ಇದು ಸಹಕಾರಿಯಾಗಿದೆ ಎಂದು ನಾನು ಭಾವಿಸುತ್ತೇನೆ ಎಂದರು.

ಕಳೆದ 20 ತಿಂಗಳುಗಳಲ್ಲಿ ಬೆಂಗಳೂರು ನಗರ ಒಂದರಲ್ಲೇ ಕೋಟ್ಯಂತರ ರೂಪಾಯಿ ಬೆಲೆ ಬಾಳುವ 117 ಎಕರೆ ಅರಣ್ಯ ಭೂಮಿ ಒತ್ತುವರಿ ತೆರವು ಮಾಡಿಸಲಾಗಿದೆ. ರಾಜ್ಯದಾದ್ಯಂತ 5 ಸಾವಿರ ಎಕರೆ ಭೂಮಿ ಒತ್ತುವರಿ ತೆರವು ಮಾಡಿಸಲಾಗಿದ್ದು, ತೆರವು ಮಾಡಿಸಲಾದ ಎಲ್ಲ ಅರಣ್ಯ ಭೂಮಿಯಲ್ಲಿ ಗಡಿ ಗುರುತಿಗೆ ಕಂದಕ ತೋಡಿ, ಗಿಡ ನೆಡಲಾಗಿದೆ. ಮತ್ತೆ ಒತ್ತುವರಿ ಆಗದಂತೆ ಎಚ್ಚರ ವಹಿಸಲೂ ಸೂಚಿಸಲಾಗಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ತಿಳಿಸಿದರು.

ಪ್ರೊ ಗಾಡ್ಗೀಳ್ ಅವರ ಆತ್ಮಕಥೆಯನ್ನು ಕನ್ನಡಕ್ಕೆ ಅನುವಾದಿಸಿದ ಪತ್ರಕರ್ತ, ಪರಿಸರ ಪ್ರೇಮಿ ನಾಗೇಶ್ ಹೆಗಡೆ ಮತ್ತು ಶಾರದಾ ಗೋಪಾಲ ಹಾಗೂ ಈ ಗ್ರಂಥ ಹರತಂದಿರುವ ಆಕೃತಿ ಆಶಯ ಪಬ್ಲಿಕೇಷನ್ ಗೆ ಅಭಿನಂದನೆ ಸಲ್ಲಿಸಿದರು. ಶಿಕ್ಷಣ ತಜ್ಞ ಪ್ರೊ. ಕೆ.ಈ. ರಾಧಾಕೃಷ್ಣ ಅಧ್ಯಕ್ಷತೆ ವಹಿಸಿದ್ದ ಸಭೆಯಲ್ಲಿ ಪತ್ರಕರ್ತ ನಾಗೇಶ್ ಹೆಗಡೆ, ಪರಿಸರ ಚಿಂತಕ ಡಾ. ನರೇಂದ್ರ ರೈ ದೇರ್ಲ, ಕ್ಯಾಪ್ಟನ್ ಜಿ.ಆರ್. ಗೋಪಿನಾಥ್, ಆರ್.ಪಿ.ಇ. ಸೊಸೈಟಿ ಕಾರ್ಯದರ್ಶಿ ನಟರಾಜ್ ಸಾಗರನಹಳ್ಳಿ, ಆಕೃತಿ ಆಶಯ ಪ್ರಕಾಶನದ ಕಲ್ಲೂರು ನಾಗೇಶ್ ಮತ್ತಿತರರು ಪಾಲ್ಗೊಂಡಿದ್ದರು.




ಡಿಸಿಎಂ ಡಿ ಕೆ ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ಉಪಸಮಿತಿಯು ರಾಜ್ಯದ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿ ಕುರಿತು ವಿಧಾನಸೌಧದಲ್ಲಿ ಗುರುವಾರ ಸಭೆ ನಡೆಸಿ, ಅವಲೋಕಿಸಿತು. ಸಚಿವರಾದ ಎಚ್ ಕೆ ಪಾಟೀಲ್, ಎಚ್ ಸಿ ಮಹದೇವಪ್ಪ, ಡಾ ಶರಣ್ಬಾಗವಹಿಸಿದ್ದರು ಪ್ರಕಾಶ್ ಪಾಟೀಲ್, ಕೃಷ್ಣ ಬೈರೇಗೌಡ, ಡಾ ಎಂ ಸಿ ಸುಧಾಕರ್ ಹಾಗೂ ಅಧಿಕಾರಿಗಳು ಭಾಗವಹಿಸಿದ್ದರು.

**ಖ್ಯಾತ ರಂಗಕರ್ಮಿ, ಚಿತ್ರನಟಿ ಜಯಶ್ರೀ ಅವರು ಡಿಸಿಎಂ ಡಿ ಕೆ ಶಿವಕುಮಾರ್ ಅವರನ್ನು ಸದಾಶಿವನಗರ ನಿವಾಸದಲ್ಲಿ ಗುರುವಾರ ಭೇಟಿ ಮಾಡಿ, ತುಮಕೂರಿನ ಗುಬ್ಬಿಯಲ್ಲಿ ಬಯಲು ರಂಗಮಂದಿರ ಸ್ಥಾಪನೆ ಸಂಬಂಧ ಸಮಾಲೋಚನೆ ನಡೆಸಿದರು.**



# ಉದಯಗಿರಿ: ಪ್ರಚೋದನಾಕಾರಿ ಭಾಷಣ ಮಾಡಿದಆರೋಪಿಗಾಗಿ ಪೊಲೀಸರ ಹುಡುಕಾಟ

**ಮೈಸೂರು:** ಉದಯಗಿರಿ ಪೊಲೀಸ್ ಠಾಣೆ ಮೇಲೆ ಕಲ್ಲು ತೂರಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ವ್ಯಕ್ತಿಯೊಬ್ಬನ ಪ್ರಚೋದನಾಕಾರಿ ಭಾಷಣವೇ ಘಟನೆಗೆ ಕಾರಣ ಎನ್ನಲಾಗುತ್ತಿದ್ದು ಇದೀಗ ಪ್ರಚೋದನಾಕಾರಿ ಭಾಷಣ ಮಾಡಿದ್ದ ಆರೋಪಿಗಾಗಿ ಪೊಲೀಸರು ಹುಡುಕಾಟ ನಡೆಸುತ್ತಿದ್ದಾರೆ. ಮುಫ್ತಿ ಮುಷ್ತಾಕ್ ಮಕ್ಬೂಲಿ ಎಂಬಾತನೇ ಪ್ರಚೋದನಾಕಾರಿ ಭಾಷಣ ಮಾಡಿದ್ದು ಎನ್ನಲಾಗಿದ್ದು, ಘಟನೆ ಬಳಿಕ ತಲೆಮರೆಸಿಕೊಂಡಿರುವ ಮುಷ್ತಾಕ್ ಗಾಗಿ ಸಿಸಿಬಿ ಪೊಲೀಸರು ತೀವ್ರ ಶೋಧ ನಡೆಸುತ್ತಿದ್ದಾರೆ

ಮುಫ್ತಿ ಮುಷ್ತಾಕ್ ಮಕ್ಬೂಲಿ ಮೈಕ್ ಹಿಡಿದು ಪ್ರಚೋದನೆ ಮಾಡಿದ್ದ ಎನ್ನಲಾಗಿದೆ. ಧರ್ಮಕ್ಕಾಗಿ ಬದುಕಿರುವ ಮುಸ್ಲಿಂರು ಇನ್ನು ಇದ್ದಾರೆ. ಧರ್ಮ ರಕ್ಷಣೆಯ ಬದ್ದತೆ ನಿನ್ನೆಯೂ ಇತ್ತು ಇವತ್ತು ಇದೆ. ಎಲ್ಲಾ ಘೋಷಣೆ ಕೂಗಿ ನಾವು ಪ್ರಾಣ ಬೇಕಾದರೂ ಕೊಡುತ್ತೇವೆ. ಸದಾ ಮುಸ್ಲಿಂರನ್ನು ಟಾರ್ಗೆಟ್ ಮಾಡಲಾಗುತ್ತಿದೆ. ಸುರೇಶ್ ಹೆಸರಿನ ನಾಯಿ ಸುರೇಶ್ ಹೆಸರಿನ ಹರಾಮಿ. ನನ್ನ ಮಾಲೀಕನ ಬಗ್ಗೆ ಕೆಟ್ಟದಾಗಿ ಮಾಡಿದ್ದಾನೆ. ಆತನನ್ನು ಕೂಡಲೇ ಬಂಧಿಸಿ ಆತನನ್ನು ನೇಣಿಗೆ ಹಾಕಬೇಕು. ಮರಣದಂಡನೆ ವಿಧಿಸಬೇಕು ನಿಮ್ಮ ಇಚ್ಛೆ ಏನು ? ಆತನಿಗೆ ಮರಣದಂಡನೆಯಾಗಬೇಕು ಎಂಬುದು. ಮೈಸೂರಿನ ಎಲ್ಲಾ ಮುಸ್ಲಿಂರು ಒಂದಾಗಿ ಇದಕ್ಕೆ ತಕ್ಕ ಉತ್ತರ ಕೊಡಬೇಕಾಗಿದೆ. ಅವಶ್ಯಕತೆ ಬಂದರೆ ನಮ್ಮ ತಲೆ ಬೇಕಾದರೂ ಕತ್ತರಿಸಿಕೊಳ್ಳುತ್ತೇವೆ. ನಮ್ಮ ಮಕ್ಕಳ ತಲೆ ಬೇಕಾದರೂ ಬಲಿಕೊಡುತ್ತೇವೆ ಎಂದು ಮುಷ್ತಾಕ್ ಮೈಕ್ ಮೂಲಕ ಕೂಗಿ ಕೂಗಿ ಹೇಳಿದ್ದ. ಇದರಿಂದ ಜನರು ಪ್ರಚೋದನೆಗೊಳಗಾಗಿ ಈ ಘಟನೆ ನಡೆದಿದೆ ಎನ್ನಲಾಗಿದೆ.

ಸದ್ಯ ಪ್ರಚೋದನೆ ಮಾಡಿದ ಮುಷ್ತಾಕ್ ಗಾಗಿ ಪೊಲೀಸರು ಹುಡುಕಾಟ ನಡೆಸುತ್ತಿದ್ದಾರೆ. ಪ್ರಕರಣ ಸಂಬಂಧ ಈಗಾಗಲೇ ಪೊಲೀಸರು 13 ಮಂದಿಯನ್ನ ಬಂಧಿಸಿದ್ದಾರೆ.

## ಇಬ್ಬರು ಪುತ್ರಿಯರಿಗೆ ವಿಷ ನೀಡಿ, ಆತ್ಮಹತ್ಯೆ

**ಮುಜಾಫರ್‌ನಗರ:** ಮಹಿಳೆಯೊಬ್ಬರು ತನ್ನ ಇಬ್ಬರು ಅಪ್ರಾಪ್ತ ಹೆಣ್ಣು ಮಕ್ಕಳಿಗೆ ವಿಷ ನೀಡಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಇಲ್ಲಿನ ಚಚೋಲಿ ಗ್ರಾಮದಲ್ಲಿ ನಡೆದಿದೆ. ಘಟನೆಯಲ್ಲಿ ಓರ್ವ ಪುತ್ರಿ ಬದುಕುಳಿದಿದ್ದು, ಆಕೆಯ ಸ್ಥಿತಿ ಚಿಂತಾಜನಕವಾಗಿದೆ ಚಿಕಿತ್ಸೆ ಮುಂದುವರೆದಿದೆ ಎಂದು ಅವರು ಪೊಲೀಸರು ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ತಾಯಿ ವಿಂಟಿ ತನ್ನ ಪುತ್ರಿಯರಾದ ಸಪ್ನಾ (13) ಮತ್ತು ಸರಸ್ವತಿ (11) ಅವರಿಗೆ ವಿಷವನ್ನು ತಾನು ಕುಡಿದಿದ್ದು ಘಟನೆ ತಿಳಿದು ಅಕ್ಕ ಪಕ್ಕಸವರು ದಾವಿಸಿ ಎಲ್ಲರನ್ನು ಆಸ್ಪತ್ರೆಗೆ ಸಾಗಿಸಿದ್ದಾರೆ.

ಚಿಕಿತ್ಸೆ ಫಲಿಸದೆ ನಿಂತಿ ಮತ್ತು ಸಪ್ನಾ ಸಾವನ್ನಪ್ಪಿದ್ದಾರೆ ಎಂದು ಭೋಪಾ ಎಎಚ್ ಒ ಪೊಲೀಸ್ ಠಾಣೆ ವಿಜಯ್ ಕುಮಾರ್ ಹೇಳಿದ್ದಾರೆ. ಸರಸ್ವತಿಗೆ ಚಿಕಿತ್ಸೆ ನೀಡಲಾಗುತ್ತಿದೆ ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದ್ದು, ಘಟನೆಗೆ ಕಾರಣ ಏನೆಂಬುದರ ಬಗ್ಗೆ ತನಿಖೆ ನಡೆಯುತ್ತಿದೆ ಎಂದು ಅವರು ತಿಳಿಸಿದ್ದಾರೆ.

## ಸುಕ್ರಿ ಅವರ ನಿಧನಕ್ಕೆ ಗೋಪಾಲಯ್ಯ ಸಂತಾಪ

ಪದ್ಮಶ್ರೀ ಸುಕ್ರಿ ಬೊಮ್ಮಗೌಡ ಅವರ ನಿಧನಕ್ಕೆ ಮಾಜಿ ಸಚಿವರು ಹಾಗೂ ಶಾಸಕರಾದ ಕೆ ಗೋಪಾಲಯ್ಯನವರು ತೀವ್ರ ಸಂತಾಪ ಸೂಚಿಸಿದ್ದಾರೆ.

ಸುಕ್ರಿ ಬೊಮ್ಮಗೌಡ ಅವರು ಕಾರವಾರ ಜಿಲ್ಲೆಯ "ಹಾಡು ಹಕ್ಕಿ " ಚಿಕ್ಕಂದಿನಿಂದಲೇ ತಮ್ಮ ತಾಯಿಯ ಮೂಲಕ ಜಾನಪದ ಹಾಡುಗಳನ್ನು ಕಲಿತಿದ್ದವರು, ಇವರು ಹಾಲಕ್ಕಿ ಒಕ್ಕಲಿಗ ಬುಡಕಟ್ಟಿನಲ್ಲಿ ಹುಟ್ಟಿ, ಹಾಡುಗಾರಿಕೆಯ ಜೊತೆಗೆ ವಿವಿಧ ಸಾಮಾಜಿಕ ಹೋರಾಟಗಳಲ್ಲಿಯೂ ಮುಂಚೂಣಿಯಲ್ಲಿದ್ದರು.



ಇವರ ಅದ್ಭುತ ಹಾಡುಗಾರಿಕೆಯನ್ನು ಗುರುತಿಸಿದ್ದ ಭಾರತ ಸರ್ಕಾರ, ಪದ್ಮಶ್ರೀ ಪ್ರಶಸ್ತಿ, ಕರ್ನಾಟಕ ಸರ್ಕಾರದಿಂದ "ಜಾನಪದ ಶ್ರೀ ಪ್ರಶಸ್ತಿ " ಕನ್ನಡ ವಿಶ್ವವಿದ್ಯಾಲಯದಿಂದ 'ನಾಡೋಜ' ಗೌರವ ಹಾಗೂ 2009ರಲ್ಲಿ ಸಂದೇಶ ಕಲಾ ಪ್ರಶಸ್ತಿ, ಆಳ್ವಾಸ್ ನುಡಿಸಿರಿ ,ಸೇರಿದಂತೆ ಅನೇಕ ಪ್ರಶಸ್ತಿಗಳು ಇವರಿಗೆ ಲಭಿಸಿದ್ದವು. ಸುಕ್ರಿ ಬೊಮ್ಮಗೌಡ ರವರು ತಮ್ಮ ಅಪ್ರತಿಮ ಸಾಧನೆಗಳ ಮೂಲಕ ಸಾರ್ಥಕವಾದ ಜೀವನವನ್ನು ನಡೆಸಿದ್ದಾರೆ ಎಂದು ಶಾಸಕರು ತಿಳಿಸಿದರು. ಅವರ ಕುಟುಂಬ ವರ್ಗದವರಿಗೆ ಹಾಗೂ ಅಭಿಮಾನಿಗಳಿಗೆ ಇವರ ಅಗಲಿಕೆಯ ನೋವು ಭರಿಸುವ ಶಕ್ತಿಯನ್ನು ಆ ದೇವರು ಕರುಣಿಸಲಿ. ಮೃತರ ಆತ್ಮಕ್ಕೆ ಚಿರಶಾಂತಿ ದೊರೆಯಲಿ ಎಂದು ಪ್ರಾರ್ಥಿಸಿದ್ದಾರೆ.

## ಬೊಮ್ಮ ಗೌಡ ನಿಧನ

ಸಾರಾಯಿ ಮುಕ್ತ ಗ್ರಾಮಕ್ಕಾಗಿ ಹೋರಾಟ: ನಾಡೋಜ, ರಾಜ್ಯೋತ್ಸವ, ಜಾನಪದ ಶ್ರೀ ಪ್ರಶಸ್ತಿ ಪಡೆದಿದ್ದ ಸುಕ್ರಜ್ಜಿ 2017 ರಲ್ಲಿ ಪದ್ಮಶ್ರೀ ಪ್ರಶಸ್ತಿ ಪಡೆದಿದ್ದರು. ಜಾನಪದ ಹಾಡುಗಳ ಮೂಲಕ ಸಮುದಾಯದ ಮಹಿಳೆಯ ಪರಿಚಯಿಸುವ ಕಾರ್ಯ ನಿರ್ವಹಿಸಿದ್ದ ಸುಕ್ರಜ್ಜಿ ಉತ್ತರಕನ್ನಡ ಜಿಲ್ಲೆಗೆ ಮಲ್ಟಿಸ್ಪೇಷಾಲಿಟಿ ಆಸ್ಪತ್ರೆ, ತಮ್ಮೂರನ್ನು ಸಾರಾಯಿ ಮುಕ್ತ ಗ್ರಾಮವನ್ನಾಗಿಸಲು ಹೋರಾಟಗಳ ಮೂಲಕ ಮುಂಚೂಣಿಯಲ್ಲಿ ಇರುತ್ತಿದ್ದರು.

ದುರ್ದೈವದ ಸಂಗತಿ ಅಂದರೆ ಉತ್ತರ ಕನ್ನಡ ಜಿಲ್ಲೆಗೆ ಮಲ್ಟಿ ಸ್ಪೇಷಾಲಿಟಿ ಆಸ್ಪತ್ರೆಗಾಗಿ ಹೋರಾಟ ಮಾಡಿದ್ದರೂ ಕೂಡ ಜಿಲ್ಲೆಯಲ್ಲಿ ಉತ್ತಮ ಆಸ್ಪತ್ರೆಗಳಿಲ್ಲದೇ ಹಲವು ಬಾರಿ ಚಿಕಿತ್ಸೆಗಾಗಿ ದೂರದ ಮಂಗಳೂರು, ಮಣಿಪಾಲ್‌ಗೆ ತೆರಳಿ ಆಸ್ಪತ್ರೆಗೆ ದಾಖಲಾಗುವಂತಾಗಿತ್ತು. ಬಡಗೇರಿಯನ್ನು ಸಾರಾಯಿ ಮುಕ್ತ ಗ್ರಾಮ ಮಾಡುವಲ್ಲಿ ಅವಿರತವಾಗಿ ಹೋರಾಡಿದ್ದ ಸುಕ್ರಜ್ಜಿ, ಯಾವುದೇ ಕಾರ್ಯಕ್ರಮಗಳಿಗೆ ಹೋದಾಗಲೂ ಸಾರಾಯಿ ತ್ಯಜಿಸುವಂತೆ ಕರೆ ನೀಡುತ್ತಿದ್ದರು. ಅಲ್ಲದೇ ಜಿಲ್ಲೆಯ ಅನೇಕ ಹೋರಾಟಗಳಲ್ಲಿ ಸುಕ್ರಜ್ಜಿ ಮುಂಚೂಣಿಯಲ್ಲಿ ಇದ್ದು, ತಮ್ಮ ಬೆಂಬಲವನ್ನು ವ್ಯಕ್ತಪಡಿಸಿದ್ದರು. ಇತ್ತೀಚೆಗೆ ಅನಾರೋಗ್ಯದ ಹಿನ್ನೆಲೆ ಅಷ್ಟಾಗಿ ಕಾರ್ಯಕ್ರಮಗಳಲ್ಲಿ ಕಾಣಿಸಿಕೊಳ್ಳುತ್ತಿರಲಿಲ್ಲ.

ಗಣ್ಯರಿಂದ ಕಂಬನಿ: ಸುಕ್ರಜ್ಜಿಯ ಅಗಲಿಕೆಯಿಂದ ಜಿಲ್ಲೆಯ ಜಾನಪದ ಲೋಕದ ಮೇರು ಕೊಂಡಿ ಕಳಚಿದಂತಾಗಿದೆ. ಸುಕ್ರಿ ಬೊಮ್ಮ ಗೌಡ ನಿಧನಕ್ಕೆ ಜಿಲ್ಲೆಯ ಅನೇಕ ಗಣ್ಯರು, ಸಾಹಿತಿಗಳು, ಜಾನಪದ ಕಲಾವಿದರು, ಜನಸಾಮಾನ್ಯರು ಕಂಬನಿ ಮಿಡಿದಿದ್ದಾರೆ.

ಇನ್ನು ಇತ್ತೀಚೆಗೆ ಹಾಲಕ್ಕಿ ಒಕ್ಕಲಿಗ ಸಮುದಾಯದವರೇ ಆಗಿದ್ದ ವೃಕ್ಷಮಾತೆ ಪದ್ಮಶ್ರೀ ಪುರಸ್ಕೃತೆ ತುಳಸಿ ಗೌಡ ಕೂಡ ನಿಧನರಾಗಿದ್ದರು. ಅಕ್ಕತಂಗಿಯರಂತೆ ಇದ್ದ ಇಬ್ಬರು ಹಾಲಕ್ಕಿ ಸಮುದಾಯದಲ್ಲಿ ಪದ್ಮಶ್ರೀ ಪುರಸ್ಕೃತರಾಗಿ ಸಮುದಾಯದಲ್ಲಿ ಕಳಸಪ್ರಾಯದಂತಿದ್ದರು.

## ಯುವಕ ಬಲಿ

ದಾಟಿ ಕಾಡಂಚಿನ ಜಮೀನುಗಳಿಗೆ ಕಾಡಾನೆಗಳು ಆಹಾರ ಅರಸಿ ಬರುತ್ತವೆ. ಸುತ್ತಾಮುತ್ತಾ ಜಮೀನಿನಲ್ಲಿ ಬೆಳೆದ ಬೆಳೆಗಳನ್ನು ತುಳಿದು ಹಾಗೂ ತಿಂದು ನಾಶ ಮಾಡುತ್ತವೆ ಎಂದು ಗ್ರಾಮಸ್ಥರು ಅಳಲು ತೋಡಿಕೊಂಡಿದ್ದಾರೆ.

## ಜೀರ್ಣಿಸಿಕೊಂಡು ಮುಂದುವರೆದಿದೆ

ಇವೆರಡೂ ಸವಾಲುಗಳಿಂದ ಮಾಧ್ಯಮ ಕ್ಷೇತ್ರ ತಪ್ಪಿಸಿಕೊಳ್ಳಲು ಸಾಧ್ಯವೇ ಇಲ್ಲ. ಏನಿದ್ದರೂ ಇವೆರಡನ್ನೂ ಮುಖಾಮುಖಿಯಾಗಿ ನಾವು ಎದುರಿಸಲೇಬೇಕು ಮತ್ತು ಜೀರ್ಣಿಸಿಕೊಳ್ಳಲೇಬೇಕಿದೆ ಎಂದರು.

ನಮ್ಮ ಮಾಧ್ಯಮ ಕ್ಷೇತ್ರಕ್ಕೆ ಜೀರ್ಣಿಸಿಕೊಳ್ಳುವ ಶಕ್ತಿ ಇದೆ. ಇಂತಹ ಹಲವಾರು ಸವಾಲುಗಳನ್ನು ಜೀರ್ಣಿಸಿಕೊಂಡಿರುವ ಉದಾಹರಣೆ ಕೂಡ ನಮ್ಮ ಮುಂದಿದೆ. ಇದಕ್ಕೆ ಉತ್ತಮ ಉದಾಹರಣೆ ಎಂದರೆ ಕೋವಿಡ್. ಕೋವಿಡ್ ಬಂದಾಗ ಮಾಧ್ಯಮಗಳು ಅದರಲ್ಲೂ ಮುದ್ರಣ ಮಾಧ್ಯಮದ ಭವಿಷ್ಯವೇ ಮುಗಿದುಹೋಯ್ತು ಎನ್ನುವ ಆತಂಕ ಮನೆ ಮಾಡಿತ್ತು. ಆದರೆ, ಎಫ್‌ಐಸಿಸಿಐ (Federation of Indian Chambers of Commerce and Industry) ಸಂಸ್ಥೆ 2023 ರಲ್ಲಿ ಮುದ್ರಣ ಮಾಧ್ಯಮಗಳ ಸ್ಥಿತಿ ಗತಿಯ ವರದಿ ಬಿಡುಗಡೆ ಮಾಡಿದೆ. ಈ ವರದಿ ಬಹಳ ಭರವಸೆ ಮೂಡಿಸುವಂತಿದೆ.

ಕೋವಿಡ್ ಸಂದರ್ಭದಲ್ಲಿ ಅಪಾರವಾಗಿ ನೆಲಕಚ್ಚಿದ್ದ ಮುದ್ರಣ ಮಾಧ್ಯಮ 2023 ರಲ್ಲಿ ಬಹಳ ಚೇತರಿಸಿಕೊಂಡಿದೆ.

ದೇಶದ ಮುದ್ರಣ ಮಾಧ್ಯಮದ ಆದಾಯ 4% ಹೆಚ್ಚಾಗಿ ವಾರ್ಷಿಕ 260 ಬಿಲಿಯನ್ ರೂಪಾಯಿಗೆ ತಲುಪಿದೆ. 2027ಕ್ಕೆ ಈ ಬೆಳವಣಿಗೆ ದರ ಇನ್ನೂ ಹೆಚ್ಚಾಗಿ 295.7 ಬಿಲಿಯನ್ ಗೆ ಏರಿಕೆ ಆಗಲಿದೆ ಎನ್ನುವ ಆಶಾ ಭಾವನೆ ವ್ಯಕ್ತವಾಗಿದೆ. ಇದರಲ್ಲಿ...

ಜಾಹಿರಾತು ಆದಾಯ 4% ಹೆಚ್ಚಾಗಿದೆ, ಪತ್ರಿಕೆಗಳ ಪ್ರಸಾರದಿಂದ ಬರುವ ಆದಾಯ 3% ಹೆಚ್ಚಾಗಿದೆ. ದಿನಪತ್ರಿಕೆಗಳಲ್ಲದ ಮ್ಯಾಗ್ಜೀನ್ ಗಳ ಆದಾಯ 3% ಹೆಚ್ಚಾಗಿದೆ. ಜಾಹಿರಾತು ುಟಿಜಡಿಣಟಿ ಗಳ ಪ್ರಮಾಣ 4% ಹೆಚ್ಚಾಗಿದೆ.

( ಪತ್ರಿಕೆಗಳ ಒಳಗೆ ಜಾಹಿರಾತು ಕರಪತ್ರಗಳನ್ನು ಹಾಕಿ ಕಳುಹಿಸುವುದು). ಇಂಗ್ಲಿಷ್ ಪತ್ರಿಕೆಗಳ ಛಿಡಿಛಿಣಟಚಿಣುಟಿ ಆದಾಯ 10% ಹೆಚ್ಚಾಗಿದ್ದರೆ, ಕನ್ನಡ ಮತ್ತು ಇತರೆ ರಾಜ್ಯ ಭಾಷಿಕ ಪತ್ರಿಕೆಗಳ circulation ಆದಾಯ 2% ಹೆಚ್ಚಾಗಿದೆ.

ಸರ್ಕಾರಗಳ ಜಾಹಿರಾತು ಪ್ರಮಾಣ ಕೂಡ ಹೆಚ್ಚಾಗಿದೆ. ಎಲ್ಲಕ್ಕಿಂತ ಮುಖ್ಯವಾಗಿ, ಜಾಹಿರಾತುದಾರರ ವಿಶ್ವಾಸಾರ್ಹತೆಯನ್ನು ಮುದ್ರಣ ಮಾಧ್ಯಮಗಳು ಉಳಿಸಿಕೊಂಡಿವೆ ಎಂದು ಈಱಅಅಖ ಹೇಳಿದೆ. 1,50000 ಜಾಹಿರಾತುದಾರರು, 185000 ಬ್ರಾಂಡ್ ಗಳು ಮುದ್ರಣ ಮಾಧ್ಯಮಗಳ ಮೇಲೆ ಅಪಾರ ಭರವಸೆ ವ್ಯಕ್ತಪಡಿಸಿವೆ. ಹೀಗಾಗಿ ಆದಾಯ, ಗಳಿಕೆಯ ಸವಾಲನ್ನು ಮುದ್ರಣ ಮಾಧ್ಯಮ ನಿರಂತರವಾಗಿ ಗೆಲ್ಲುತ್ತಲೇ ಇದೆ ಎಂದು ವಿಶ್ಲೇಷಿಸಿದರು.

ಅಚ್ಚುಮೊಳೆ ಕಾಲದಿಂದ ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ವರೆಗೂ ಹಲವಾರು ತಂತ್ರಜ್ಞಾನದ ಸವಾಲುಗಳನ್ನು ಮಾಧ್ಯಮ ಲೋಕ ಜೀರ್ಣಿಸಿಕೊಳ್ಳುತ್ತಲೇ ಬೆಳೆದಿದೆ ಎಂದರು.

ಪತ್ರಿಕೋದ್ಯಮ ತಂತ್ರಜ್ಞಾನದಲ್ಲಿ ಎಷ್ಟೇ ಉನ್ನತ ಮಟ್ಟಕ್ಕೇರಿದರೂ, ಅದರ ನೈತಿಕ ಗುಣಮಟ್ಟ ಪಾತಾಳ ಸೇರದಂತೆ ಕಾಪಾಡಿಕೊಳ್ಳುವ ನೈತಿಕ ಮತ್ತು ಸಾಮಾಜಿಕ ಹೊಣೆ ನಮ್ಮೆಲ್ಲರ ಮೇಲಿದೆ ಎಂದರು.

ಸುಳ್ಳುಸುದ್ದಿಗಳನ್ನು ತಡೆಯುವ ಸವಾಲು ಮತ್ತು ನಿಖರತೆ ಹಾಗೂ ವಾಸ್ತವಾಂಶಗಳ ಪರಿಶೀಲನೆಯ ಅಗತ್ಯ ಹಿಂದೆಂದಿಗಿಂತಲೂ ಹೆಚ್ಚಾಗಿದೆ. ಇದಕ್ಕಾಗಿ ಜಿಚಿಛಿಣ ಛಿಜಛಿಞ ಆರಂಭಿಸಲಾಗಿದೆ ಎಂದರು.

## ಮರಕ್ಕೆ ಬಸ್ ಡಿಕ್ಕಿ

ಸೂಕ್ತ ಚಿಕಿತ್ಸೆಗೆ ಕೇಂದ್ರ ಸಚಿವ ಹೆಚ್‌ಡಿಕೆ ನಿರ್ದೇಶನ : ಮಂಡ್ಯ ಜಿಲ್ಲೆಯ ಕೆ.ಆರ್. ಪೇಟೆ ತಾಲೂಕಿನ ಕುಂದನಹಳ್ಳಿ ಗೇಟ್ ಬಳಿ ಸಂಭವಿಸಿರುವ ರಾಜ್ಯ ಸಾರಿಗೆ ಬಸ್ ಅಪಘಾತದಲ್ಲಿ ಶಾಲಾ ಮಕ್ಕಳು ಸೇರಿ ಇಪ್ಪತ್ತೈದಕ್ಕೂ ಹೆಚ್ಚು ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿರುವ ಸುದ್ದಿ ತಿಳಿದು ತೀವ್ರ ಆಘಾತ ಉಂಟಾಯಿತು.

ಈ ಬಗ್ಗೆ ತಕ್ಷಣವೇ ಸ್ಪಂದಿಸಿ ಜಿಲ್ಲಾ ವೈದ್ಯಾಧಿಕಾರಿಗಳ ಜೊತೆ ಮಾತನಾಡಿ ಸಮಗ್ರ ಮಾಹಿತಿ ಪಡೆದುಕೊಂಡಿದ್ದೇನೆ ಹಾಗೂ ಗಾಯಾಳುಗಳಿಗೆ ಅಗತ್ಯವಾದ ತುರ್ತುಚಿಕಿತ್ಸೆ ನೀಡಬೇಕು ಎಂದು ಸೂಚಿಸಿದ್ದೇನೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ತೀವ್ರವಾಗಿ ಗಾಯಗೊಂಡಿರುವವರನ್ನು ಮೈಸೂರು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರೆಲ್ಲರಿಗೂ ಉಚಿತ ಮತ್ತು ಗುಣಮಟ್ಟದ ಚಿಕಿತ್ಸೆ ನೀಡಬೇಕೆಂದು ಸ್ಪಷ್ಟವಾಗಿ ನಿರ್ದೇಶನ ನೀಡಿದ್ದೇನೆ. ಗಾಯಾಳುಗಳೆಲ್ಲರೂ ಆದಷ್ಟು ಶೀಘ್ರವಾಗಿ ಚೇತರಿಸಿಕೊಂಡು ಕ್ಷೇಮವಾಗಿ ಮನೆಗೆ ಮರಳಲಿ ಹಾರೈಸುತ್ತೇನೆ ಎಂದು ಬರೆದುಕೊಂಡಿದ್ದಾರೆ.

# ಚಿಕ್ಕ ಕೆರೆಯಲ್ಲಿ ಬೋಟಿಂಗ್ ವಿಹಾರಕ್ಕೆ ವಿರೋಧ



**ದೇವನಹಳ್ಳಿ:** ಪಟ್ಟಣದ ಪುರಸಭಾ ವ್ಯಾಪ್ತಿಯ 8 ನೇ ವಾರ್ಡಿನಲ್ಲಿರುವ ಚಿಕ್ಕಕೆರೆ ಶ್ರೀ ಆಂಜನೇಯ ಸ್ವಾಮಿ ದೇವಾಲಯದ ಸಿಹಿ ನೀರಿನ ಚಿಕ್ಕ ಕೆರೆಯಲ್ಲಿ ಸಾರ್ವಜನಿಕರಿಗಾಗಿ ಮತ್ತು ಪ್ರವಾಸಿತಾಣವಾಗಿ ಅಭಿವೃದ್ಧಿಪಡಿಸುವ ಉದ್ದೇಶದೊಂದಿಗೆ ಬೋಟಿಂಗ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಆದರೆ, ಸಾರ್ವಜನಿಕರಿಗೆ ಯಾವುದೇ ಮಾಹಿತಿಯನ್ನು ನೀಡದೆ ಟೆಂಡರ್ ಪ್ರಕ್ರಿಯೆ ನಡೆಸದೇ ಏಕಾಏಕಿ ಚಿಕ್ಕಕೆರೆ ನೀರಿನಲ್ಲಿ ಬೋಟಿಂಗ್ ವ್ಯವಸ್ಥೆ ಮಾಡಿರುವುದು ಕಾನೂನು ಬಾಹಿರ ಎಂದು ಆರೋಪ ಕೇಳಿಬಂದಿದೆ.

ಈ ಸಂಬಂದ ಮಾತನಾಡಿದ ಮೀನು ಸಾಕಾಣಿಕೆಯ ಗುತ್ತಿಗೆದಾರ ಜಗನ್ನಾಥ್, ಮೀನುಗಾರಿಕಾ ಇಲಾಖೆ ಮತ್ತು ಪುರಸಭೆಯ ಮುಖಾಂತರ ಟೆಂಡರ್ ಪ್ರಕ್ರಿಯೆಯ ಮೂಲಕ ಮೀನು ಸಾಕಾಣಿಕೆಯ(ಫಿಶಿಂಗ್) ಹಕ್ಕನ್ನು ಪಡೆದಿದ್ದೇನೆ ಹಾಗೆಯೇ ಕೆರೆಯಲ್ಲಿ ಬೋಟಿಂಗ್ ವ್ಯವಸ್ಥೆಯು ಸಹ ಸಾರ್ವಜನಿಕರ ಸಮ್ಮುಖದಲ್ಲಿ ಟೆಂಡರ್ ಪ್ರಕ್ರಿಯೆ ನಡೆದು ಕಾನೂನು ಬದ್ಧವಾಗಿ ಪಡೆದುಕೊಳ್ಳಲಿ ನನಗೆ ಯಾವುದೇ ಅಭ್ಯಂತರವಿಲ್ಲ ಎಂದು ಹೇಳಿದರು.

ಬೋಟಿಂಗ್ ಮಾಡುವುದರಿಂದ ಕೆರೆಯಲ್ಲಿ ಜಲಚರಗಳಿಗೆ ಮತ್ತು ಕೆರೆಯ ಸುತ್ತಲಿನ ತ್ಯಾಜ್ಯದಿಂದ ತೊಂದರೆಯಾಗುವುದು. ಅದಕ್ಕಾಗಿ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ಶ್ರೀ ಧನಲಕ್ಷ್ಮಿ ವಾಟರ್ ಬೋಟಿಂಗ್ ಅಂಡ್ ಅಡ್ವೆಂಚರ್ಸ ಮಾಲೀಕ ರವಿಕುಮಾರ್, ಚಿಕ್ಕ ಕೆರೆಯಲ್ಲಿ ಅನಧಿಕೃತವಾಗಿ ಏಕಾಏಕಿ ಬೋಟಿಂಗ್(ನಾವೆ) ಪ್ರಾರಂಭ ಮಾಡಿಲ್ಲ, ಪುರಸಭಾ ವ್ಯಾಪ್ತಿಯ ಸಿಹಿ ನೀರು ಮತ್ತು ದೊಡ್ಡ ಕೆರೆಯಲ್ಲಿ ಬೋಟ್ ನಡೆಸಲು ಶಿವಮೊಗ್ಗ ಜಿಲ್ಲೆಯ ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ ಹಾಗೂ ದೇವನಹಳ್ಳಿ ಪುರಸಭೆಯಿಂದ ಕಾನೂನುಬದ್ಧವಾಗಿ ಅನುಮತಿಯನ್ನು ಪಡೆಯಲಾಗಿದೆ ಎಂದು ನುಡಿದರು.

ಅಗತ್ಯ ಸುರಕ್ಷತಾ ಕ್ರಮಗಳೊಂದಿಗೆ ಕೆರೆಯ ಸ್ವಚ್ಛತೆ ,ಜಲಚರಗಳು, ಪ್ರಯಾಣಿಸುವವರ ಸುರಕ್ಷತೆ ಗಮನದಲ್ಲಿಟ್ಟುಕೊಂಡು ಅಗತ್ಯ ವ್ಯವಸ್ಥೆಗಳನ್ನು ಅಭಿವೃದ್ಧಿಪಡಿಸಿ ಸಚಿವರಿಂದ ಉದ್ಘಾಟಿಸಿ ಬೋಟಿಂಗ್ ವ್ಯವಸ್ಥೆ ಪ್ರಾರಂಭಿಸಲಾಗುವುದು ಎಂದರು.

# ಪ್ರಸಿದ್ಧ ಶ್ರೀ ವರದರಾಜ ಸ್ವಾಮಿ ಬ್ರಹ್ಮರಥೋತ್ಸವ



**ಮುಳಬಾಗಿಲು:** ತಾಲೂಕಿನ ಉತ್ತನೂರು ಗ್ರಾಮದಲ್ಲಿ ನಡೆಸಿರುವ ಪ್ರಸಿದ್ಧ ಐತಿಹಾಸಿಕ ದೇವಾಲಯ ಶ್ರೀ ವರದರಾಜ ಸ್ವಾಮಿ ಬ್ರಹ್ಮ ರಥೋತ್ಸವವು ಬುಧವಾರ ಸಂಭ್ರಮದಿಂದ ನಡೆಯಿತು.

ಶತಮಾನಗಳ ಇತಿಹಾಸ ಹೊಂದಿರುವ ವರದರಾಜ ಸ್ವಾಮಿ ರಥೋತ್ಸವ ಸಲುವಾಗಿ ದೇವಸ್ಥಾ ನದಲ್ಲಿ ವಿವಿಧ ಪೂಜಾ ಕಾರ್ಯಗಳನ್ನು ಹಮ್ಮಿಕೊ ಳ್ಳಲಾಗಿತ್ತು. ಮೂಲ ದೇವರಿಗೆ ಪಂಚಾಮೃತ ಅಭಿಷೇ ಕ, ಹೋಮ, ವೇದ, ಉಪ ನಿಷತ್ತುಗಳ ಮಂತ್ರಗಳ ಘೋಷಣೆ ಮೊಳಗಿದವು.

ಪ್ರತಿ ವರ್ಷದಂತೆ ಈ ಬಾರಿಯೂ ನಡೆದ ರಥೋತ್ಸವಕ್ಕೆ ಹೂವುಗಳಿಂದ ಅಲಂಕಾರಗೊಳಿಸಿದ್ದ ಬೃಹತ್ ರಥದಲ್ಲಿ ವರದರಾಜ ಸ್ವಾಮಿ, ಉತ್ಸವ ಮೂರ್ತಿಗಳನ್ನು ಇರಿಸಲಾಗಿತ್ತು. ಶಾಸಕ ಸಮೃದ್ಧಿ ವಿ. ಮಂಜುನಾಥ್ ಗೋವಿಂದ ನಾಮ ಸ್ಮರಣೆದೊಂದಿಗೆ ರಥವನ್ನು ಎಳೆಯುವ ಮೂಲಕ ಚಾಲನೆ ನೀಡಿದರು.

ರಥಕ್ಕೆ ದವನ, ಹೂವು ಬಾಳೆಹಣ್ಣು ಎಸೆದು ಭಕ್ತಾದಿಗಳು ಹರಕೆ ತೀರಿಸಿಕೊಂಡರು. ತಮಟೆ. ಮಂಗಳ ವಾದ್ಯಗಳೊಂದಿಗೆ ಡೋಳ್ಳು ಕುಣಿತ ಜಾನ ಪದ ಕಲಾ ತಂಡಗಳು ಗ್ರಾಮದಲ್ಲಿ ಕಲಾವಿದರ ಮಂಡಳಿಯಿಂದ ಭಜನೆ .ಮತ್ತು ಅನ್ನಸಂತರ್ಪನೆ. ರಾಮಚಂದ್ರಪ್ಪ ರವರ ಕುಟುಂಬದಿಂದ ಲಡ್ಡುಗಳ ಪ್ರಸಾದ ವಿನಿಯೋಗ ರಥೋತ್ಸವಕ್ಕೆ ಮೆರಗು ನೀಡಿದವು.

ದೇವಾಲಯದ ಮಂಭಾಗದಿಂದ ಹೊರಟ ರಥೋತ್ಸವ ಗ್ರಾಮದ ಪ್ರಮುಖ ರಥ ಬೀದಿಗಳಲ್ಲಿ ಸಂಚರಿಸಿತು. ಗ್ರಾಮದ ಭಕ್ತಾದಿಗಳಿಂದ ಅನ್ನಸಂತರ್ಪಣೆ ನಡೆಯಿತು ಕಾಂಗ್ರೆಸ್ ಮುಖಂಡ ವಿ ಆದಿ ನಾರಾಯಣ . ಆವನಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನೀಲಕಂಠೇಗೌಡ ಎಂ ರಾಮಲಿಂಗಾರೆಡ್ಡಿ. ಬಿ ಎಂ ವೆಂಕಟರಾಮೇಗೌಡ. ಮಾಜಿ ಜೆಡ್ ಪಿ. ಉತ್ತನೂರು ಅರವಿಂದ್. ದರ್ಕಾಸ್ಥ ಸಮಿತಿ ಸದಸ್ಯ ಜಮುನಳ್ಳಿ ಕೃಷ್ಣಪ್ಪ.ಗ್ರಾಮ ಪಂಚಾಯತಿ ಅಧ್ಯಕ್ಷ. ಕಾಂತಮ್ಮ. ಉಪಾಧ್ಯಕ್ಷರಾದ ವಿ.ಚಂದ್ರ . ಪಿಡಿಒ ಶ್ರೀನಿವಾಸ್ ಭಾಗಿಯಾಗಿದ್ದರು.

ಈ ಸಂದರ್ಭದಲ್ಲಿ ರಥೋತ್ಸವದಲ್ಲಿ ಪೋಲಿಸ್ ಇಲಾಖೆ ಪಿಎಸ್ಐ ವಿಠ್ಠಲ್ ತಳವಾರ್ ಹಾಗೂ ಸಿಬ್ಬಂದಿ ವರ್ಗ ಅಹಿತಕರ ಘಟನೆಗಳು ನಡೆಯದಂತೆ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು.

ಸಂಘ ಸಂಸ್ಥೆಯವರು, ರಾಜಕೀಯ ಮುಖಂಡರುಗಳು ಚುನಾಯಿತ ಜನ ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ರಥೋತ್ಸವ ಕಾರ್ಯಕ್ರಮ ಯಶಸ್ವಿಗೊಳಿಸಿದರು.

# ನಕಲಿ ಬೀಜ ಕಂಪನಿಗಳ ನಿಯಂತ್ರಣಕ್ಕೆ ಕಾನೂನು ರಚನೆ ಮಾಡಿ



ಮುಳಬಾಗಿಲು: ಟೊಮೇಟೊ, ಕ್ಯಾಪ್ಸಿಕಂಗೆ ಬಾದಿಸುತ್ತಿರುವ ರೋಗ ನಿಯಂತ್ರಣಕ್ಕೆ ಗುಣಮಟ್ಟದ ಔಷಧಿ ವಿತರಣೆ ಮಾಡಿ ನಕಲಿ ಬೀಜ ಕಂಪನಿಗಳ ನಿಯಂತ್ರಣಕ್ಕೆ ಕಾನೂನು ರಚನೆ ಮಾಡಬೇಕೆಂದು ರೈತಸಂಘದಿಂದ ಕೃಷಿ ಸಹಾಯಕ ನಿರ್ದೇಶಕರಿಗೆ ಮನವಿ ನೀಡಿ ಆಗ್ರಹಿಸಲಾಯಿತು.

ಟೊಮೋಟೊ ಕ್ಯಾಪ್ಸಿಕಂ ಋತುಮಾನ ಪ್ರಾರಂಭವಾಗಿದ್ದು ಗುಣಮಟ್ಟದ ಬಿತ್ತನೆ ಬೀಜ ಕೀಟ ನಾಶಕ ವಿತರಣೆ ಮಾಡುವಂತೆ ಔಷದಿ ಅಂಗಡಿಗಳ ಮಾಲೀಕರ ಸಭೆ ಕರೆದು ಸೂಚನೆ ನೀಡುವ ಜೊತೆಗೆ ಅನಧಿಕೃತ ನರ್ಸರಿಗಳ ವಿರುದ್ಧ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲು ತೋಟಗಾರಿಕೆ ಅಧಿಕಾರಿಗಳಿಗೆ ಸೂಚಸಿಬೇಕೆಂದು ರೈತ ಸಂಘದ ರಾಜ್ಯ ಉಪಾದ್ಯಕ್ಷ ಕೆ.ನಾರಾಯಣಗೌಡ ಅಧಿಕಾರಿಗಳನ್ನು ಒತ್ತಾಯಿಸಿದರು.

ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿ 3 ತಿಂಗಳು ಬೆವರು ಸುರಿಸಿ ದುಡಿಯುವ ರೈತರಿಗೆ ನಕಲಿ ಬಿತ್ತನೆ ಬೀಜಗಳನ್ನು ವಿತರಣೆ ಮಾಡಿ ಬೆಳೆ ನಷ್ಟವಾದರೆ ಆ ಕಂಪನಿಯ ಹಾಗೂ ಬೀಜ ವಿತರಣೆ ಮಾಡಿದ ಅಂಗಡಿ ಮಾಲೀಕರು ಮತ್ತು ಸುಳ್ಳು ವರದಿ ನೀಡುವ ವಿಜ್ಞಾನಿಗಳ ಆಸ್ತಿಯನ್ನು ಹರಾಜು ಹಾಕಿ ರೈತರಿಗೆ ಪರಿಹಾರ ನೀಡುವ ಕಾನೂನು ಜಾರಿ ಆಗಬೇಕೆಂದು ಕೃಷಿ ತೋಟಗಾರಿಕಾ ಮಂತ್ರಿಗಳನ್ನು ಒತ್ತಾಯಿಸಿದರು.

**ಗುಣಮಟ್ಟವಿಲ್ಲದ ರೋಗಕ್ಕೆ ತಕ್ಕ ಔಷಧಿ ವಿತರಣೆ ಮಾಡದ ಕಂಪನಿಗಳು:**

ಬಹುರಾಷ್ಟ್ರಿಯ ಔಷಧಿ ಕಂಪನಿಗಳು ವಿತರಣೆ ಮಾಡುತ್ತಿರುವ ಔಷಧಿಗಳ ಗುಣಮಟ್ಟ ಸಂಪೂರ್ಣವಾಗಿ ಕಳಪೆಯಾಗಿದೆ. 10 ರೂಪಾಯಿ ಸೊಳ್ಳೆ ಬತ್ತಿ ಮನೆಯ ಸೊಳ್ಳೆಯನ್ನು ಸಾಯಿಸುತ್ತದೆ. ಆದರೆ, ಲಕ್ಷಾಂತರ ರೂಪಾಯಿ ನೀಡಿ ಖರೀದಿ ಮಾಡುವ ಔಷಧಿಗಳಿಂದ ರೋಗ ನಿಯಂತ್ರಣಕ್ಕೆ ಬಾರದೆ ರೈತನ ಆರೋಗ್ಯ ಹದಗೆಡುತ್ತದೆ. ಅಷ್ಟರ ಮಟ್ಟಿಗೆ ಔಷಧಿಗಳ ಗುಣಮಟ್ಟ ಕಳಪೆಯಾಗಿದೆ. ಇದನ್ನು ಸರಿಪಡಿಸಬೇಕಾದ ಅಧಿಕಾರಿಗಳು ಕಂಪನಿಗಳ ಜೊತೆ ಶಾಮೀಲಾಗಿ ರೈತರ ಹಣೆಬರಹವನ್ನು ತಿದ್ದುತ್ತಿದ್ದಾರೆಂದು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

**ನಕಲಿ ಬಿತ್ತನೆ ಬೀಜಗಳ ನಿಯಂತ್ರಣಕ್ಕಿಲ್ಲ ಕಾನೂನು:**

ಭೂಮಿ ನಂಬಿ ಬೆವರ ಹನಿ ಸುರಿಸಿ ಬಿತ್ತಿದ ಬೀಜ ಗುಣಮಟ್ಟ ಇದೆಯೋ ಇಲ್ಲವೋ ಎಂಬುದು ರೈತರಿಗೆ ಮನವರಿಕೆಯಿಲ್ಲ. ನರ್ಸರಿಯವರು ನೀಡಿದ ನಾರನ್ನೇ ನಾಟಿ ಮಾಡಿ ಬೆಳೆ ಸಮೃದ್ಧವಾಗಿ ಬಂದರೂ ಕಾಯಿ ಬಿಡುವುದಿಲ್ಲ. ಕಾಯಿ ಬಿಟ್ಟರೆ ನೂರೊಂದು ರೋಗ. ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ನೀಡಿದರೆ ರೈತರ ಮೇಲೆಯೇ ನೂರೊಂದು ಸಮಸ್ಯೆ ಹೇಳಿ ಕಂಪನಿಗಳ ಪರ ಲಾಭಿ ಮಾಡಿ ಕಡೆಗೆ ರೈತರನ್ನೇ ಅಪರಾಧಿ ಸ್ಥಾನದಲ್ಲಿ ನಿಲ್ಲಿಸುವ ಮುಖಾಂತರ ಕೃಷಿ ಕ್ಷೇತ್ರಕ್ಕೆ ಮರಣಶಾಸನ ಬರೆಯುತ್ತಿದ್ದಾರೆ ಎಂದು ಅವ್ಯವಸ್ಥೆ ವಿರುದ್ಧ ಕಿಡಿಕಾರಿದರು.

**ಬೇಕು ಎಂದಾಗ ಸಿಗದ ಬೆಳೆ ವಿಮಾ ಪರಿಹಾರ ಕಂಪನಿಗಳು:**

ರಾಜ್ಯ ಪ್ರಧಾನ ಕಾರ್ಯದರ್ಶಿ ಪಾರುಕ್‌ಪಾಷ ಮಾತನಾಡಿ, ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೀಯ ಪ್ರಧಾನ ಮಂತ್ರಿ ಫಸಲ್ ಭಿಮಾ ಯೋಜನೆ ಕಟ್ಟ ಕಡೆಯ ರೈತರಿಗೆ ಸಿಗುತ್ತಿಲ್ಲ. ಮಳೆಯಾಧಾರಿತ ಬೆಳೆಗಳಿಗೆ ಮಾತ್ರ ಬೆಳೆ ವಿಮೆ ಸೀಮಿತವಾಗಿದ್ದು, ಲಕ್ಷಾಂತರ ಬಂಡವಾಳ ಹಾಕುವ ವಾಣಿಜ್ಯ ಬೆಳೆಗಳಾದ ಟೊಮೇಟೊ, ಕ್ಯಾಪ್ಸಿಕಂ ಮತ್ತಿತರರ ಬೆಳೆಗಳಿಗೆ ವಿಮೆ ಎಂಬುದು ಮರೀಚಿಕೆಯಾಗಿದೆ. ಪ್ರತಿಯೊಂದು ಬೆಳೆಗೂ ವಿಮಾ ಕಂಪನಿ ಪರಿಹಾರ ನೀಡುವ ಕಾನೂನು ಜಾರಿಯಾಗಬೇಕು. ಹಾಗೂ ಬೆಳೆ ವಿಮೆ ಪಾವತಿಸಿಕೊಳ್ಳಲು ಕೋಟ್ಯಾಂತರ ರೂಪಾಯಿ ಜಾಹಿರಾತಿಗಾಗಿ ಖರ್ಚು ಮಾಡುವ ಕೃಷಿ ಮಂತ್ರಿಗಳು ಬೆಳೆ ನಷ್ಟವಾದಾಗ ರೈತರಿಗೆ ಸಿಗುತ್ತದೆಯೋ ಇಲ್ಲವೋ ಎಂಬುದನ್ನು ಪರಿಶೀಲಿಸಲು ವಿಶೇಷ ತಂಡ ರಚನೆ ಮಾಡಬೇಕು.

ಮನವಿ ಸ್ವೀಕರಿಸಿ ಮಾತನಾಡಿದ ಸಹಾಯಕ ನಿರ್ದೇಶಕರಾದ ರವಿಕುಮಾರ್ ನಕಲಿ ಕೀಟನಾಶಕ ರಸಗೊಬ್ಬರ ಮಾರಾಟ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸಿ ಅಂಗಡಿಗಳ ವಿರುದ್ಧ ಕ್ರಮ ಕೈಗೊಳ್ಳೊವ ಜೊತೆಗೆ ಟೊಮೇಟೊ ಮತ್ತಿತರ ಬೆಳೆಗಳಿಗೆ ರೋಗಗಳ ಬಗ್ಗೆ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಸಮಸ್ಯೆ ಬಗೆಹರಿಸುವ ಭರವಸೆ ನೀಡಿದರು.

ಮನವಿ ನೀಡುವಾಗ ಜಿಲ್ಲಾಧ್ಯಕ್ಷ ಈಕಂಬಳ್ಳಿ ಮಂಜುನಾಥ್, ಭಾಸ್ಕರ್, ಸುನಿಲ್‌ಕುಮಾರ್, ರಾಜೇಶ್, ಶ್ರೀನಿವಾಸ್, ಶಿವಾರೆಡ್ಡಿ, ಅಂಬ್ಲಿಕಲ್ ಮಂಜುನಾಥ್, ರಾಮಕೃಷ್ಣಪ್ಪ, ಹೆಬ್ಬಣಿ ಆನಂದರೆಡ್ಡಿ, ಮಂಗಸಂದ್ರ ತಿಮ್ಮಣ್ಣ, ಮುಂತಾದವರಿದ್ದರು.

# ಶ್ರೀಮತ್ಕಲ್ಯಾಣ ಬ್ರಹ್ಮರಥೋತ್ಸವ



**ಶಿಡ್ಲಘಟ್ಟ:** ಪಾಪಾಗ್ನಿ ನದಿ ತಟದ ಮೇಲೆ ನೆಲೆಸಿರುವ, ಇತಿಹಾಸ ಪ್ರಸಿದ್ದ ತಲಕಾಯಲಬೆಟ್ಟದ ಶ್ರೀವೆಂಕಟರಮಣಸ್ವಾಮಿಯ ಶ್ರೀಮತ್ಕಲ್ಯಾಣ ಬ್ರಹ್ಮರಥೋತ್ಸವವು ಸಡಗರ ಸಂಭ್ರಮದಿಂದ ನೆರವೇರಿತು. ನಾಡಿನ ಮೂಲೆ ಮೂಲೆಯಿಂದ ಆಗಮಿಸಿದ್ದ ಸಹಸ್ರಾರು ಭಕ್ತರು ಬ್ರಹ್ಮ ರಥೋತ್ಸವಕ್ಕೆ ಸಾಕ್ಷಿಯಾದರು.

ಶ್ರೀದೇವಿ ಭೂದೇವಿಯೊಂದಿಗೆ ಪ್ರಸನ್ನನಾಗಿರುವ ವೆಂಕಟರಮಣಸ್ವಾಮಿಯ ಮೂರ್ತಿಗೆ ವಿಶೇಷ ಹೂವಿನ ಅಲಂಕಾರ, ಪೂಜೆ ನೆರವೇರಿಸಿ ಮಹಾ ಮಂಗಳಾರತಿ ಮಾಡಿ ತೀರ್ಥ ಪ್ರಸಾದವನ್ನು ವಿನಿಯೋಗಿಸಲಾಯಿತು. ನಂತರ ಉತ್ಸವ ಮೂರ್ತಿಗಳನ್ನು ಅಲಂಕೃತ ತೇರಿನಲ್ಲಿ ಪ್ರತಿಷ್ಠಾಪಿಸಲಾಯಿತು.

ಬ್ರಹ್ಮರಥೋತ್ಸವಕ್ಕೆ ತಹಶೀಲ್ದಾರ್ ಬಿ.ಎನ್.ಸ್ವಾಮಿ ಚಾಲನೆ ನೀಡಿದರು. ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್, ಆಹಾರ ಮತ್ತು ನಾಗರೀಕ ಪೂರೈಕೆ ಸಚಿವ ಕೆ.ಎಚ್.ಮುನಿಯಪ್ಪ, ಶಾಸಕರಾದ ಬಿ.ಎನ್.ರವಿಕುಮಾರ್, ಕಾಂಗ್ರೆಸ್ ಮುಖಂಡ ರಾಜೀವ್‌ಗೌಡರಾದ ,ಆಂಜಿನಪ್ಪ (ಪುಟ್ಟು), ಬಿಜೆಪಿ ಮುಖಂಡ ಸೀಕಲ್ ರಾಮಚಂದ್ರಗೌಡ, ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಡಿ.ಪಿ.ನಾಗರಾಜ್ ಜತೆಗೂಡಿದರು.

ತೇರನ್ನು ಎಳೆಯುತ್ತಿದ್ದಂತೆ ನೆರೆದಿದ್ದ ಭಕ್ತರ ಭಕ್ತಿಯ ಭಾವ ಮುಗಿಲು ಮುಟ್ಟಿತು. ರಥದ ಹಗ್ಗ ಹಿಡಿದು ಎಳೆದು ಭಕ್ತಿಯಭಾವ ಪರವಶರಾದರು. ಬಾಳೆ ಹಣ್ಣು ದವನವನ್ನು ತೇರಿನ ತುತ್ತ ತುದಿಯಲ್ಲಿನ ಕಳಶಕ್ಕೆ ತಾಗುವಂತೆ ಎಸೆದು ಬದುಕಿನಲ್ಲಿನ ಎಲ್ಲ ಇಷ್ಟಾರ್ಥಗಳು ಈಡೇರಿಸುವಂತೆ ಭಗವಂತನಲ್ಲಿ ಕೈ ಮುಗಿದು ಬೇಡಿಕೊಂಡರು.

ದೇವಾಲಯದ ಸುತ್ತಲೂ ಒಂದು ಸುತ್ತು ಪ್ರದಕ್ಷಿಣೆ ಹಾಕಿದ ರಥದ ಹಗ್ಗ ಹಿಡಿದು ಎಳೆದ ಭಕ್ತರು ಭಗವಂತನ ಜಪ ಮಾಡುತ್ತಾ ಭಕ್ತಿ ಸಾಗರದಲ್ಲಿ ಮಿಂದೆದ್ದರು.

**ಪರಿಷೆ ಜೋರು: ಜಾತ್ರೆ ಅಂಗವಾಗಿ ಬುರುಗು, ಬತ್ತಾಸು, ಜಿಲೇಬಿ, ಮೈಸೂರು ಪಾಕು, ಕಬ್ಬಿನ ಹಾಲು, ಮಕ್ಕಳ ಆಟಿಕೆ, ಹೆಣ್ಣು ಮಕ್ಕಳ ಶೃಂಗಾರದ ವಸ್ತುಗಳ ಅಂಗಡಿಗಳು ತಲೆ ಎತ್ತಿದ್ದವು. ಬಿಸಿಲ ಬೇಗೆಯನ್ನು ತಣಿಸುವ ಐಸ್ ಕ್ರೀಂ, ಕಲ್ಲಂಗಡಿ ಹಣ್ಣಿನ ಅಂಗಡಿ ಸೇರಿದಂತೆ ಹಣ್ಣಿನ ಜ್ಯೂಸ್ ಅಂಗಡಿಗಳು ಸಾಕಷ್ಟಿದ್ದವು,ದೇವಾಲಯದ ವ್ಯವಸ್ಥಾಪನಾ ಸಮಿತಿಯಿಂದಲ್ಲದೆ ಅನೇಕ ದಾನಿಗಳು ಬ್ರಹ್ಮರಥೋತ್ಸವಕ್ಕೆ ಆಗಮಿಸಿದ್ದ ಎಲ್ಲ ಭಕ್ತರಿಗೂ ಸಾಮೂಹಿಕ ಅನ್ನ ಸಂತರ್ಪಣೆ, ಪ್ರಸಾದ ವಿನಿಯೋಗವನ್ನು ಹಮ್ಮಿಕೊಂಡಿದ್ದರು.**

# ಅಖಿಲ ಭಾರತ ದಕ್ಷಿಣ ವಲಯ ಪೊಲೀಸ್ ಟಿ–20 ಕ್ರಿಕೆಟ್ ಪಂದ್ಯಾವಳಿ



**ಬೆಂಗಳೂರು:** ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ ನೇತೃತ್ವದಲ್ಲಿ ನಡೆದ ಮೊದಲನೇ ಅಖಿಲ ಭಾರತ ದಕ್ಷಿಣ ವಲಯ ಪೋಲಿಸ್ ಟಿ–20 ಕ್ರಿಕೆಟ್ ಪಂದ್ಯಾವಳಿ ಮುಕ್ತಾಯಗೊಂಡಿದೆ.

ಪಂದ್ಯಾವಳಿಯ ಸಮಾರೋಪ ಸಮಾರಂಭವು ಡಿಜಿ–ಐಜಿಪಿ ಡಾ. ಅಲೋಕ್ ಮೋಹನ್ ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಎಎಸ್ಸಿ ಕ್ರಿಕೆಟ್ ಮೈದಾನ ದೊಮ್ಮಲೂರು ಮತ್ತು ಆರ್‌ಎಸ್‌ಐ ಕ್ರೀಡಾ ಮೈದಾನದಲ್ಲಿ ನಡೆದ ಐದು ದಿನಗಳ ಕಾಲ ನಡೆದ ಐತಿಹಾಸಿಕ ಪದ್ಯಾವಳಿಯಲ್ಲಿ ಕರ್ನಾಟಕ ಸೇರಿದಂತೆ ಅಂಡಮಾನ್ ಮತ್ತು ನಿಕೋಬಾರ್, ಛತ್ತೀಸ್‌ಘಢ, ಐಟಿಬಿಪಿ (ಇಂಡೋ–ಟಿಬೆಟನ್‌ಬ್ಾರ್ಡರ್‌ಫೋರ್ಲಿಸ್), ಕೇರಳ, ಲಕ್ಷದ್ವೀಪ, ಎನ್‌ಎಸ್ಜಿ (ನ್ಯಾಷನಲ್‌ಸೆಕ್ಯುರಿಟಿಗಾರ್ಡ್) ಪುದುಚೇರಿ, ತಮಿಳುನಾಡು ಮತ್ತು ತೆಲಂಗಾಣ ರಾಜ್ಯಗಳ ಒಟ್ಟು10 ತಂಡಗಳು ಭಾಗವಹಿಸಿದ್ದವು.

ತಮಿಳುನಾಡು ಮತ್ತು ಕೇರಳ ರಾಜ್ಯಗಳ ನಡುವೆ ನಡೆದ ರೋಚಕ ಫೈನಲ್ ಪಂದ್ಯದಲ್ಲಿ ಟಾಸ್ ಗೆದ್ದ ಕೇರಳಪೊಲೀಸ್ ತಂಡ ಫಿಲ್ಡಿಂಗ್ ಆಯ್ಕೆಮಾಡಿಕೊಂಡಿತು. ಮೊದಲು ಬ್ಯಾಟ್ ಮಾಡಿದ ತಮಿಳುನಾಡು 20 ಓವರ್‌ಗಳಲ್ಲಿ 8 ವಿಕೆಟ್‌ಗಳ ನಷ್ಟದೊಂದಿಗೆ 173 ರನ್‌ಗಳ ಮೊತ್ತವನ್ನು ಕಲೆಹಾಕಿದರು. ಕೇರಳಪೊಲೀಸ್ ತಂಡವು 19 ಓವರ್‌ಗಳಲ್ಲಿ ಕೇವಲ 136 ರನ್ ಗಳಿಸುವ ಮೂಲಕ ತನ್ನ ಎಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡು ತಮಿಳುನಾಡು ತಂಡದ ವಿರುದ್ಧ 37 ರನ್‌ಗಳಿಂದ ಸೋಲನ್ನುಅನುಭವಿಸಿತು.

ತಮಿಳುನಾಡು ಪೊಲೀಸ್ ತಂಡವು ಫೈನಲ್ ಪಂದ್ಯವನ್ನು ಗೆಲ್ಲುವುದರ ಮೂಲಕ ಅಖಿಲ ಭಾರತ ದಕ್ಷಿಣ ವಲಯ ಪೊಲೀಸ್ ಟಿ–20 ಕ್ರಿಕೆಟ್ ಪಂದ್ಯಾವಳಿ–2025ರ ಚಾಂಪಿಯನ್ ಆಗಿಹೊರಹೊಮ್ಮಿತು.

ಪುದುಚೇರಿ ಪೊಲೀಸ್ ತಂಡದ ಆಟಗಾರ ಪ್ರಭುರವರು 3 ಪಂದ್ಯಗಳಲ್ಲಿ 195 ರನ್ ಹಾಗೂ ಬಾಲಿಂಗ್‌ನಲ್ಲಿ 06 ವಿಕೆಟ್‌ಗಳನ್ನು ಪಡೆಯುವುದರ ಮೂಲಕ 'ಸರಣಿಶ್ರೇಷ್ಠ ಪ್ರಶಸ್ತಿ ತಮ್ಮದಾಗಿಸಿ ಕೊಂಡರು.

ಡಾ.ಅಲೋಕ್ ಮೋಹನ್ ಮಾತನಾಡಿ, ಪೊಲೀಸರು ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಮನಸ್ಸಿಗೆ ಉಲ್ಲಾಸ ಸಿಗುವುದರ ಜೊತೆಗೆ ದೈಹಿಕ ಹಾಗೂ ಮಾನಸಿಕ ಸದೃಡತೆಗೆ ಸಹಕಾರಿಯಾಗಲಿದೆ ಎಂದು ಹೇಳಿದರು. ವಿಜೇತರಿಗೆ ಬಹುಮಾನಗಳನ್ನು ವಿತರಿಸುವ ಮೂಲಕ ಪಂದ್ಯಾವಳಿಯಲ್ಲಿ ಭಾಗವಹಿಸಿದ ಎಲ್ಲಾ ಪೊಲೀಸ್ ತಂಡಗಳಿಗೆ ಶುಭಹಾರೈಸಿದರು.

ಈಟೂರ್ನ್‌ಮೆಂಟ್ ಅನ್ನು ಎಡಿಜಿಪಿ, ಉಮೇಶ್ ಕುಮಾರ್ ಬೆಂಗಳೂರು ಅವರ ನೇತೃತ್ವದಲ್ಲಿ ಮತ್ತು ಐಜಿಪಿ ಸಂದೀಪ್ ಪಾಟೀಲ್ ಹಾಗೂ ಇತರ ಹಿರಿಯ ಅಧಿಕಾರಿಗಳ ಮಹತ್ವಪೂರ್ಣ ಕೊಡುಗೆ ಹಾಗೂ ಸಹಕಾರದಿಂದ ಅಖಿಲ ಭಾರತ ಮಟ್ಟದಲ್ಲಿ ಮೊಟ್ಟಮೊದಲ ಬಾರಿಗೆ ಯಶಸ್ವಿಯಾಗಿ ಆಯೋಜಿಸಲಾಗಿತ್ತು.



## ಮುದಾಸೀರ್‌ಗೆ ಚುನಾವಣೆಯಲ್ಲಿ ಗೆಲುವು

**ಚಿಕ್ಕಬಳ್ಳಾಪುರ:** ಕರ್ನಾಟಕ ಪ್ರದೇಶ ಯೂತ್ ಕಾಂಗ್ರೆಸ್, ಯುವ ಘಟಕದ ವಿವಿಧ ಪದಾಧಿಕಾರಿಗಳಿಗೆ ನಡೆದ ಚುನಾವಣೆಯಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಸ್ಥಾನಕ್ಕೆ ಸ್ಪರ್ಧಿಸಿದ್ದ ಮುದಾಸೀರ್ ದಾವೂದ್ ಭರ್ಜರಿ ಗೆಲುವು ಸಾಧಿಸಿದ್ದಾರೆ.



ಕರ್ನಾಟಕ ಪ್ರದೇಶ ಯೂತ್ ಕಾಂಗ್ರೆಸ್ ಸಮಿತಿಯ ನೇತೃತ್ವದಲ್ಲಿ ಆನ್ ಲೈನ್ ಮುಖಾಂತರ ನಡೆದ ಅಂತರಿಕ ಚುನಾವಣೆಯಲ್ಲಿ ಮುದಾಸೀರ್ ದಾವೂದ್ ತೀವ್ರ ಪೈಪೋಟಿ ನೀಡಿ ಗೆಲುವು ಸಾಧಿಸಿದ್ದಾರೆ.

ಮಾಜಿ ಜಿಲ್ಲಾ ಕಾಂಗ್ರೇಸ್ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ, ಮಾಜಿ ನಗರಸಭಾ ಸದಸ್ಯ ಹಾಗೂ ವಕೀಲ ಮೊಹಮ್ಮದ್ ದಾವೂದ್ ರವರ ಪುತ್ರ ಮುದಾಸೀರ್ ದಾವೂದ್ ಅವರು ಎನ್.ಎಸ್. ಯು.ಐ, ವಿಧಾನಸಭಾ ಕ್ಷೇತ್ರದ ಯುವ ಉಪಾಧ್ಯಕ್ಷ ಹಾಗೂ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದಾರೆ. ಇವರು ಜಿಲ್ಲೆಯ ಇತಿಹಾಸದಲ್ಲಿ ಪ್ರಪ್ರಥಮ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆ ಆಗಿದ್ದಾರೆ.

ಈ ವೇಳೆ ಕೆಪಿವೈಸಿ ಯುವ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಮುದಾಸೀರ್ ದಾವೂದ್ ಮಾತನಾಡಿ, ಸರ್ಕಾರದ ಯೋಜನೆಗಳನ್ನು ಜನಗಳಿಗೆ ತಲುಪಿಸುವ ಕಾಯಕವನ್ನು ಮಾಡುವ ಜೊತೆಗೆ ರಾಜ್ಯಾದ್ಯಂತ ಪ್ರವಾಸ ಕೈಗೊಂಡು ಯುವಕರನ್ನು ಕಾಂಗ್ರೆಸ್ ಪಕ್ಷಕ್ಕೆ ಸೆಳೆಯುವ ಮೂಲಕ ಹೆಚ್ಚಿನ ಸಂಖ್ಯೆಯಲ್ಲಿ ಸದಸ್ಯತ್ವ ಮಾಡಿಸಿ ಪಕ್ಷವನ್ನು ಕಟ್ಟುವ ಮೂಲಕ ಬಲಿಷ್ಠ ಗೊಳಿಸಲಾಗುವುದು ಹಾಗೂ ಮುಂಬರುವ ಜಿ.ಪಂ, ತಾ.ಪಂ, ಸ್ಥಳೀಯ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸುವ ನಿಟ್ಟಿನಲ್ಲಿ ತೊಡಗಿಕೊಳ್ಳಲಾಗು ವುದು ಎಂದು ಹೇಳಿದರು.


ನನ್ನ ಗೆಲುವಿಗೆ ಬೆನ್ನೆಲುಬಾಗಿ ನಿಂತ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್, ಶಾಸಕರಾದ ಪ್ರದೀಪ್ ಈಶ್ವರ್, ಸುಬ್ಬಾರೆಡ್ಡಿ, ಜಿಲ್ಲಾಧ್ಯಕ್ಷ ಕೆ.ಎನ್.ಕೇಶವ ರೆಡ್ಡಿ, ಮಾಜಿ ಸಚಿವರಾದ ವಿ.ಮುನಿಯಪ್ಪ,ಶಿವಶಂಕರ್ ರೆಡ್ಡಿ ಹಾಗೂ ಕರ್ನಾಟಕ ಪ್ರದೇಶ ಯೂತ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ನಲ್ಪಾಡ್ ಹ್ಯಾರೀಸ್ ಮತ್ತು ಸ್ನೇಹಿತರಿಗೆ ಧನ್ಯವಾದ ಸಲ್ಲಿಸಿದರು.

## ಸಮಾರಂಭಗಳಲ್ಲಿ ನಾವೆಲ್ಲಾ ಒಂದೇ ಕುಟುಂಬದ ಕುಡಿಗಳು

**ಚಿಕ್ಕಬಳ್ಳಾಪುರ:** ರಾಜಕೀಯವಾಗಿ ನಾವು ಎಷ್ಟೇ ವಿರೋಧಿಗಳಾದರೂ ಜಾತಿ ಸಂಬಂಧ ಸಮಾರಂಭಗಳಲ್ಲಿ ನಾವೆಲ್ಲಾ ಒಂದೇ, ಒಟ್ಟು ಕುಟುಂಬದ ಕುಡಿಗಳು ಎನ್ನುವುದನ್ನ ಶಾಸಕರು ಮತ್ತು ಸಮದಾಯದ ಮುಖಂಡ ಒಬ್ಬರಿಗೊಬ್ಬರನ್ನ ತಬ್ಬಿಕೊಂಡು ಆಲಿಂಗಿಸಿದ ಸಂದರ್ಭಕ್ಕೆ ಇಂದಿನ ಕೃಷ್ಣದೇವರಾಯನ ಅದ್ದೂರಿ ಮೆರವಣಿಗೆ ಸಾಕ್ಷಿಯಾಯಿತು.

ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರ ಮೂಲತಃ ಕೃಷಿ ಮತ್ತು ಹೈನೋದ್ಯಮಕ್ಕೆ ಹೆಸರುವಾಸಿ ಇಲ್ಲಿನ ರೈತರ ಮತ್ತು ವ್ಯಾಪಾರಿಗಳ ಸಂಬಂಧವನ್ನ ವೃದ್ಧಿಗೊಳಿಸಿದ್ದು ಶ್ರೀ ಕೃಷ್ಣ ದೇವರಾಯನ ಆಸ್ಥಾನದ ಸೇವಕರು ಎಂದು ಪುರಾಣಗಳಲ್ಲಿ ಹೇಳಲಾಗುತ್ತಿದೆ. ಶ್ರೀ ಕೃಷ್ಣದೇವರಾಯನ ಸಮುದಾಯ ಇಲ್ಲಿ ಹೆಚ್ಚಾಗಿ ಇದ್ದಾರೆ. 555 ವರ್ಷಗಳ ನಂತರ ನಗರದ ಜನ ಮತ್ತೆ ಶ್ರೀ ಕೃಷ್ಣದೇವರಾಯನ ನೋಡುವಂತ ಭಾಗ್ಯ ಬಂದಿದೆ. ಬೆಂಗಳೂರು ಬಲಿಜ ಯುವ ಶಕ್ತಿಯಿಂದ ಹದಿನಾರರಂದು ನಡೆಯುವ ಶ್ರೀ ಕೃಷ್ಣದೇವರಾಯ ಜಯಂತಿ ಅಂಗವಾಗಿ ರಥಯಾತ್ರೆ ಹಮ್ಮಿಕೊಳ್ಳಲಾಗಿತ್ತು.

ನಗರದ ಮೂಲಕ ಹಾದು ಹೋಗುತ್ತಿರುವ ರಥದ ಯಾತ್ರೆಗೆ ಅದ್ದೂರಿ ಸ್ವಾಗತ ಕೋರಿದರು. ಸ್ವಾಗತ ಮೆರವಣಿಗೆ ಮರಳುಸಿದ್ದೇಶ್ವರ ದೇವಾಲಯದ ಬಳಿ ಬರಮಾಡಿಕೊಂಡ ಮುಖಂಡರು ಎಂ.ಜಿ ರಸ್ತೆ ಮತ್ತು ಬಿಬಿ ರಸ್ತೆ ಮೂಲಕ ಒಕ್ಕಲಿಗರ ಕಲ್ಯಾಣ ಮಂಟಪದವರೆಗೂ ಸಾಗಿ ದೊಡ್ಡಬಳ್ಳಾಪುರಕ್ಕೆ ಬೀಳ್ಕೊಟ್ಟರು.





ಇನ್ನು ಬಲಿಜ ಸಮುದಾಯದವರು ಶ್ರೀ ಕೃಷ್ಣದೇವರಾಯ ಆಗಿದ್ದರಿಂದ ಚಿಕ್ಕಬಳ್ಳಾಪುರ ನಗರ ಸುತ್ತಮುತ್ತ ಮುಖಂಡರು ಪಕ್ಷಾತೀತವಾಗಿ ಒಂದಾಗಿ ಮೆರವಣಿಗೆ ನಡೆಸಿದರು.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಗೆದ್ದು ಶಾಸಕರಾದ ಮೇಲೆ ಪ್ರದೀಪ್ ಈಶ್ವರ್ ಮತ್ತು ಸಮಜದ ಪ್ರಭಾವಿ ನಾಯಕ ಕೆ.ವಿ.ನವೀನ್ ಕಿರಣ್ ರಾಜಕೀಯ ವಿರೋಧಿಗಳಾಗಿ ಹೊರಹೊಮ್ಮಿದ್ದರು.

ಇನ್ನು ಅದ್ದೂರಿ ಮೆರವಣಿಗೆಯಲ್ಲಿ ಸಮುದಾಯದ ಮಹಿಳೆಯರಿಂದ ಪೂರ್ಣ ಕುಂಭ ಕಳಶ, ಚಂಡೆ ಮದ್ದಳೆ, ನಾದಸ್ವರ,ವೀರಗಾಸೆ ಕುಣಿತ ಮೆರವಣಿಗೆಗೆ ಮತ್ತಷ್ಟು ಮೆರಗು ನೀಡಿತು.

ಮೆರವಣಿಗೆಯಲ್ಲಿ ಸಾಗಿ ಬಂದ ದಾಹ ನೀಗಿಸಲು ಕರವೇ ಅಧ್ಯಕ್ಷ ಅಲ್ಲಲ್ಲಿ ನೀರಿನ ಪಾಕೇಟ್ ವಿತರಣೆ ವ್ಯವಸ್ಥೆ ಮಾಡಿದ್ದರು. ಮೆರವಣಿಗೆಯಲ್ಲಿ ಸಮುದಾಯದ ರಾಜ್ಯ ಮುಖಂಡರು ಮತ್ತು ಸ್ಥಳೀಯ ಸಮುದಾಯದವರು ಪಾಲ್ಗೊಂಡಿದ್ದರು.

## ರಂಗೋಲಿ: ತಾಲ್ಲೂಕಿಗೆ ತೃತೀಯ ಬಹುಮಾನ



**ಮಾಲೂರು:** ತಾಲ್ಲೂಕಿನ ಸರ್ಕಾರಿ ಪ್ರೌಢಶಾಲೆ ಕುಡಿಯನೂರು ಶಾಲೆಯ ಕುಮಾರಿ ಮೋನೀಷಾ ರವರು ರಂಗೋಲಿ ಸ್ಪರ್ಧೆಯಲ್ಲಿ ತೃತೀಯ ಬಹುಮಾನವನ್ನು ಪಡೆದು ಜಿಲ್ಲೆಗೆ, ತಾಲ್ಲೂಕಿಗೆ ಕೀರ್ತಿ ತಂದಿರುವುದಾಗಿ ಶಿಕ್ಷಣ ಇಲಾಖೆ ಕ್ಷೇತ್ರ ಸಮನ್ವಯಾಧಿಕಾರಿ ವೆಂಕಟಸ್ವಾಮಿ ಟಿ ಹೇಳಿದರು.

ಕೋಟೆ ನಾಡು ಚಿತ್ರದುರ್ಗದಲ್ಲಿ ಎರಡು ದಿನ ನಡೆದ ರಾಜ್ಯಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮದಲ್ಲಿ ಕೋಲಾರ ಜಿಲ್ಲೆ

ಚಿತ್ರದುರ್ಗ ನಗರದ ಶ್ರೀ ಮುರುಘರಾಜೇಂದ್ರ ಬೃಹ್ಮನಂದ ಮಠದ ಅನುಭವ ಮಂಟಪದಲ್ಲಿ ಶಿಕ್ಷಣ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ನಡೆದ ರಾಜ್ಯ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮದಲ್ಲಿ ವೈಯಕ್ತಿಕ ಸ್ಪರ್ಧೆಯಲ್ಲಿ ಕುಮಾರಿ ಮೋನೀಷಾ ರಂಗೋಲಿ ಸ್ಪರ್ಧೆಯಲ್ಲಿ ರಾಜ್ಯಮಟ್ಟದಲ್ಲಿ ತೃತೀಯ ಬಹುಮಾನವನ್ನು ಪಡೆಯುವುದರ ಮೂಲಕ ಜಿಲ್ಲೆಗೆ ಮತ್ತು ತಾಲೂಕಿಗೆ ಕೀರ್ತಿ ತಂದಿದ್ದಾರೆ ಅವರಿಗೆ ಶಾಲಾ ಮತ್ತು ಶಿಕ್ಷಣ ಇಲಾಖೆಯ ಪರವಾಗಿ ಹೃದಯಪೂರ್ವಕ ಅಭಿನಂದನೆಗಳು ಸಲ್ಲಿಸುವುದಾಗಿ ಶಿಕ್ಷಣ ಇಲಾಖೆ ಕ್ಷೇತ್ರ ಸಮನ್ವಯ ಅಧಿಕಾರಿ ವೆಂಕಟಸ್ವಾಮಿ ಟಿ ಹೇಳಿದರು.

# ಸಮಾಜದ ಸಮನ್ವತೆಯ ಪರಿವರ್ತನೆಗೆ ಸವಿತಾ ಮಹರ್ಷಿ ಕೊಡುಗೆ ಅನನ್ಯ

**ನಾಗಮಂಗಲ:** ಮನುಷ್ಯನ ಮನಸ್ಸು ಮನಸ್ಸಿನ ಕತ್ತಲೆಯಿಂದ ಬೆಳಕಿನೆಡೆಗೆ ತಂದ ಮಹಾದರ್ಶನಕರಾದ ಸವಿತಾ ಋಷಿಗಳ ತತ್ವ ಆದರ್ಶಗಳು ನಿತ್ಯ ನಿರಂತರವಾಗಿದೆ ಎಂದು ತಾಲೂಕು ಕಚೇರಿಯ ಶಿರಸ್ತೇದಾರ್ ಎಚ್ ಎಸ್ ಉಮೇಶ್ ತಿಳಿಸಿದ್ದಾರೆ.

ಅವರು ನಾಗಮಂಗಲ ಪಟ್ಟಣದ ತಾಲ್ಲೂಕು ಆಡಳಿತ ವತಿಯಿಂದ ಸಭಾಂಗಣದಲ್ಲಿ ಏರ್ಪಡಿಸಿದ್ದ ಸವಿತಾ ಮಹರ್ಷಿಗಳ ಜಯಂತಿಯನ್ನು ಮಹನೀಯರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ಪ್ರತಿಯೊಂದು ಸಮುದಾಯದಲ್ಲಿಯು ಆದರ್ಶ ವ್ಯಕ್ತಿತ್ವ ವ್ಯಕ್ತಿಗಳ ತತ್ವ ಆದರ್ಶ ಮುಂದಿನ ಪೀಳಿಗೆಗೆ ಗೊತ್ತು ಪಡಿಸುವ ಸಲುವಾಗಿ ರಾಜ್ಯ ಸರ್ಕಾರಗಳು ಮಹನೀಯರ ಜಯಂತಿ, ಆಚರಣೆಗೆ ತಂದಿದೆ

ಮಹಾನ್ ವ್ಯಕ್ತಿಗಳ ತತ್ವ ಸಂದೇಶಗಳು ನಿತ್ಯ ನಿರಂತರವಾಗಿದ್ದು ಅವರ ಆದರ್ಶಗಳು ಜನರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಉತ್ತಮ ಸಮಾಜ ನಿರ್ಮಾಣವಾಗುತ್ತದೆ



ಸವಿತಾ ಸಮಾಜ ಸೇರಿದಂತೆ ಎಲ್ಲಾ ವರ್ಗದ ಜನರು ಶಿಕ್ಷಣಕ್ಕೆ ಒತ್ತು ನೀಡಬೇಕು ಶಿಕ್ಷಣದಿಂದ ಸೌಲಂಬಿ ಬದುಕಿನೊಂದಿಗೆ ಆರ್ಥಿಕವಾಗಿ ಸದೃಢವಾಗಬಹುದು ತಾನು ಮಾಡುವ ಯಾವುದೇ ಕಸುಬಿನ ಮೇಲೆ ಗೌರವ ನಿಷ್ಠೆ ಕಾಯಕ ಇಟ್ಟುಕೊಂಡಾಗ ಮಾತ್ರ ಜೀವನದಲ್ಲಿ ಮುಂದೆ ಬರಲು ಸಾಧ್ಯವಾಗುತ್ತಿದೆ ಎಂದು ತಿಳಿಸಿದರು.

ಸವಿತ ಮಹರ್ಷಿಯ ಇತಿಹಾಸ ಹಿನ್ನೆಲೆ ನೋಡಿದಾಗ ಬ್ರಹ್ಮ ಜ್ಞಾನ ಹೊಂದಿರುವ ಮಹರ್ಷಿಯ ಪೌರಾಣಿಕೆ ಪೌರಾಣಿಕ ಇತಿಹಾಸ ಇದ್ದು ಇಂತಹ ದಾರ್ಶನಿಕರ ತತ್ವದರ್ಶಗಳನ್ನು ಸಮುದಾಯದವರು ಅಳವಡಿಸಿಕೊಂಡಾಗ ಮಾತ್ರ ಮುಂದೆ ಬರಲು ಸಾಧ್ಯ ಎಂದು ಸಮಾಜದ ಅಧ್ಯಕ್ಷರಾದ ಜಗದೀಶ್ ಮಾತನಾಡಿದರು.

ಇದೇ ಸಂದರ್ಭದಲ್ಲಿ ಚುನಾವಣಾ ಶಿರಸ್ತೆದಾರ್ ಚಂದ್ರಶೇಖರ್ ಕಂದಾಯ ಇಲಾಖೆ ಸಿಬ್ಬಂದಿಗಳು ಉಮೇಶ್ ಶಿವಲಿಂಗಯ್ಯ ಮುಕುಂದ ರವಿಕುಮಾರ್ ಹಾಗೂ ಸಮಾಜದ ಪದಾಧಿಕಾರಿಗಳು ಮುಖಂಡರು ಹಾಜರಿದ್ದರು

# ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಧರಣಿ



**ಶಿಡ್ಲಘಟ್ಟ :** ಸಮಾನ ಕೆಲಸಕ್ಕೆ ಸಮಾನ ವೇತನ, ಪದೋನ್ನತಿ ನೀಡುವುದು ಸೇರಿದಂತೆ ವಿವಿಧ 23 ಕ್ಕೂ ಹೆಚ್ಚು ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ನೇತೃತ್ವದಲ್ಲಿ ರಾಜ್ಯಾಧ್ಯಂತ ಗ್ರಾಮ ಆಡಳಿತ ಅಧಿಕಾರಿಗಳು ಕೆಲಸ ಸ್ಥಗಿತಗೊಳಿಸಿ ಅನಿರ್ದಿಷ್ಟಾವಧಿ ಧರಣಿ ಮುಂದುವರಿಸಿದ್ದಾರೆ.

ಗ್ರಾಮ ಆಡಳಿತ ಅಧಿಕಾರಿಗಳು ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕೆಲಸ ಸ್ಥಗಿತಗೊಳಿಸಿ ತಮ್ಮ ಕರ್ತವ್ಯಕ್ಕೆ ಸಂಬಂಧಿ ಸಿದ ತಂತ್ರಾಂಶಗಳನ್ನು ಸ್ಥಗಿತಗೊಳಿಸಿ ಕೈಗೆ ಕಪ್ಪುಪಟ್ಟಿ ಧರಿಸಿ ಅನಿರ್ಧಿಷ್ಟಾವಧಿ ಧರಣಿ ಆರಂಭಿಸಿದ್ದು ಮುಷ್ಕರ ಯಶಸ್ವಿಯಾಗಿದೆ.

ತಾಲ್ಲೂಕಿನ ಎಲ್ಲಾ ಗ್ರಾಮ ಆಡಳಿತ ಅಧಿಕಾರಿಗಳು ಸಹ ತಾಲ್ಲೂಕು ಕಚೇರಿ ಆವರಣದಲ್ಲಿ ಕೈಗೆ ಕಪ್ಪುಪಟ್ಟಿ ಧರಿಸಿ, ತಮ್ಮ ಮೊಬೈಲ್‌ನಲ್ಲಿನ ತಮ್ಮ ಕಾರ್ಯಕ್ಕೆ ಸಂಬಂಧಿಸಿದ ಎಲ್ಲಾ ಆ್ಯಪ್ ಸ್ಥಗಿತಗೊಳಿಸಿ ಮೌನ ಪ್ರತಿಭಟನೆ ನಡೆಸುತ್ತಿದ್ದಾರೆ.

ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ತ್ರಿಮೂರ್ತಿ ಮಾತನಾಡಿ, ದ್ವಿತೀಯ ಪಿಯುಸಿ ಶೈಕ್ಷಣಿಕ ಆಧಾರದಲ್ಲಿ ನಾವು ನೇಮಕಗೊಂಡಿದ್ದು ವಿವಿಧ ಇಲಾಖೆಗಳಲ್ಲಿ ನೇಮಕಗೊಂಡ ಸಿಬ್ಬಂದಿಗೂ ನಮಗೂ ವೇತನದಲ್ಲಿ ಬಹಳ ತಾರತಮ್ಯ ಇದೆ ,

ಗ್ರಾಮ ಆಡಳಿತ ಅಧಿಕಾರಿಗಳಿಗೆ ಪದೋನ್ನತಿ ನೀಡದ ಕಾರಣ ಗ್ರಾಮ ಆಡಳಿತ ಅಧಿಕಾರಿಯಾಗಿ ನೇಮಕಗೊಂಡು ಗ್ರಾಮ ಆಡಳಿತ ಅಧಿಕಾರಿಯಾಗಿಯೇ ನಿವೃತ್ತಿ ಆಗಬೇಕಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ನಾವು ಕಾರ್ಯನಿರ್ವಹಿಸುವ ಕಚೇರಿ ಯಲ್ಲಿ ಕನಿಷ್ಟ ಮೇಜು ಖುರ್ಜಿ ಲ್ಯಾಪ್ ಟಾಪ್‌ನಂತಹ ಮೂಲ ಸೌಕರ್ಯ ಒದಗಿಸಬೇಕು, ಕಾರ್ಯನಿರ್ವಹಿಸುವಾಗ ಅ ಜೀವಹಾನಿ ಆದರೆ ಆ ಕುಟುಂಬಕ್ಕೆ 50 ಲಕ್ಷ ರೂ.ಗಳು ಪರಿಹಾರ ನೀಡುವುದು ಸೇರಿ ಹಲವು ಬೇಡಿಕೆಗಳನ್ನು ಈ ಹಿಂದೆ ಸರಕಾರದ ಮುಂದಿಟ್ಟಿದ್ದೆವು,ಮುಖ್ಯವಾಗಿ ಕಂದಾಯ ಇಲಾಖೆಯ ಎಲ್ಲ 21ಕ್ಕೂ ಹೆಚ್ಚಿನ ವೆಬ್ ತಂತ್ರಾಂಶಗಳನ್ನು ನಿರ್ವಹಣೆ ಮಾಡಬೇಕು, ಇಲಾಖೆಯ ಎಲ್ಲ ಯೋಜನೆಗಳನ್ನು ಅನುಷ್ಠಾನ ಮಾಡುವ ಕಾರ್ಯದೊತ್ತಡ ಹೆಚ್ಚುತ್ತಿದೆ,ಅದಕ್ಕೆ ಅನುಗುಣವಾಗಿ ಅನುಕೂಲ ಗಳನ್ನು ಕಲ್ಪಿಸುತ್ತಿಲ್ಲ ಎಂದು ದೂರಿದರು.

ಕೊಟ್ಟ ಭರವಸೆಯಂತೆ ಸರ್ಕಾರ ನಡೆದುಕೊಳ್ಳದ ಕಾರಣ 2 ನೇ ಹಂತದಲ್ಲಿ ಅನಿರ್ದಿಷ್ಟಾವಧಿ ಧರಣಿ ಕೈಗೆ ಕಪ್ಪುಪಟ್ಟಿ ಧರಿಸಿ ಮೌನ ಮುಷ್ಕರ ನಡೆಸುತ್ತಿದ್ದು, ಈ ವೇಳೆ ಸಾರ್ವಜನಿಕರಿಗೆ ತೊಂದರೆ ಆಗಲಿದ್ದು ಸಹಕರಿಸುವಂತೆ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ಗ್ರಾಮ ಆಡಳಿತ ಅಧಿ ಕಾರಿಗಳ ಸಂಘದ ಜಿಲ್ಲಾಧ್ಯಕ್ಷ ಚೇತನ್ ಕುಮಾರ್, ತಾಲ್ಲೂಕು ಗೌರವಾಧ್ಯಕ್ಷ ಲಾರೆನ್ಸ್, ಉಪಾಧ್ಯಕ್ಷ ಎಚ್.ಕೆ. ನಾಗರಾಜ್, ಪ್ರಧಾನ ಕಾರ್ಯದರ್ಶಿ ಬಿ.ವೈ. ಸುರೇಶ್,ಲೋಕೇಶ್, ರಾಕೇಶ್, ನಂದನ,ಸುಭಾಷಿಣಿ ವರಲಕ್ಷ್ಮಿ ಮುಂತಾದವರು ಭಾಗವಹಿಸಿದ್ದರು.

# ಪ್ರಸನ್ನ ಕುಮಾರು ಅವಿರೋಧ ಆಯ್ಕೆ

**ಮಾಗಡಿ:** ತಾಲೂಕಿನ ಅಜ್ಜನಹಳ್ಳಿ ಗ್ರಾಪಂಗೆ ನೂತನ ಉಪಾಧ್ಯಕ್ಷರಾಗಿ ಪ್ರಸನ್ನ ಕುಮಾರು ಅವಿರೋಧವಾಗಿ ಆಯ್ಕೆಯಾದರು.

ಧನಂಜಯ[ಕುಮಾರು] ರಾಜೀನಾಮೆಯಿಂದ ತೆರವಾದ ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಪ್ರಸನ್ನ ಕುಮಾರು ಒರತು ಪಡಿಸಿ ಯಾರು ನಾಮಪತ್ರ ಸಲ್ಲಿಸದ ಕಾರಣ ಚುನಾವಣಾಧಿಕಾರಿ ಶಿವಕುಮಾರು ಅವರು ಪ್ರಸನ್ನಕುಮಾರು ಅವರ ಅವಿರೋಧ ಆಯ್ಕೆ ಘೋಷಿಸುತ್ತಿದಂತೆ ಸದಸ್ಯರು, ಮುಖಂಡರು, ಅಭಿಮಾನಿಗಳು ಪಟಾಕಿ ಸಿಡಿಸಿ ಸಿಹಿ ಹಂಚುವ ಮೂಲಕ ಸಂಭ್ರಮಾಚರಣೆ ನಡೆಸಿದರು.

ನೂತನ ಉಪಾಧ್ಯಕ್ಷ ಪ್ರಸನ್ನ ಕುಮಾರು ಮಾತನಾಡಿ, ಬೇಸಿಗೆ ಸಮೀಪಿಸುತ್ತಿದ್ದು ಗ್ರಾಮಗಳಲ್ಲಿನ ನಾಗರೀಕರಿಗೆ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸದಂತೆ ಅಧ್ಯಕ್ಷರನ್ನೊಳಗೊಂಡು ಸಭೆ ನಡೆಸಿ ಸೂಕ್ತ ಕ್ರಮಕೈಗೊಳ್ಳಲಾಗುವುದು. ವಸತಿ ರಹಿತರನ್ನು ಪಟ್ಟಿಮಾಡಿ ವಸತಿ ಕಲ್ಪಿಸಲಾಗುವುದು, ನರೇಗಾ ಯೋಜನೆಯಡಿ ವಯಕ್ತಿಕ, ಸಾಮೂಹಿಕ ಕೆಲಸಮಾಡಲು ಅವಕಾಶಗಳಿದ್ದು ಈ ಬಗ್ಗೆ ಗ್ರಾಮಗಳಿಗೆ ಅಧಿಕಾರಿಗಳೊಂದಿಗೆ ಬೇಟಿ ನೀಡಿ ಅರಿವು ಮೂಡಿಸಿ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗುವುದು ಎಂದರು.

ಅಧ್ಯಕ್ಷೆ ಜಯಮ್ಮ ಶಿವರುದ್ರಯ್ಯ, ಸದಸ್ಯರಾದ ಗಂಗಲಕ್ಷ್ಮಮ್ಮ ಹನುಮಯ್ಯ, ರಂಗನರಸಿಂಹಯ್ಯ, ದೊಡ್ಡ ಬೈರಮ್ಮ, ನೇತ್ರಾ ರಂಗಸ್ವಾಮಯ್ಯ, ಗುರುಮೂರ್ತಿ, ಮಂಜುನಾಥ್, ಲತಾ ಬಸವರಾಜು, ಪುಟ್ಟರಾಜು, ಭಾಗ್ಯಮ್ಮ ರಂಗೇಗೌಡ, ಸಣಮ್ಮ ಶಿವಲಿಂಗಯ್ಯ, ಪಿಡಿಒ ಆಂಜನ್ ಮೂರ್ತಿ, ಕಾರ್ಯದರ್ಶಿ ಶಿವಸ್ವಾಮಿ ಇತರರು ಇದ್ದರು.



# ಪ್ಲಾಸ್ಟಿಕ್ ಬಳಕೆ ವಸ್ತುಗಳನ್ನು ಮಾರಾಟ ಮಾಡದಂತೆ ಎಚ್ಚರಿಕೆ: ನಿಯಮ ಉಲ್ಲಂಘಿಸಿದರೆ ದಂಡ

**ವರದಿ: ಪ್ರಕಾಶ್ ಕಾಮಗೆರೆ**

**ಹನೂರು :** ಮಲೆ ಮಹದೇಶ್ವರ ಬೆಟ್ಟದ ಅಂಗಡಿ ಮಳಿಗೆಗಳಲ್ಲಿ ತಿಂಡಿ ತಿನಿಸುಗಳ ಮಾರಾಟಕ್ಕೆ ಪ್ಲಾಸ್ಟಿಕ್ ಬಕ್ಯಾರಿ ಬ್ಯಾಗಗಳನ್ನು ಬಳಕೆ ಮಾಡುತಿದ್ದ ಮಳಿಗೆಗಳನ್ನು ಪರಿಶೀಲಿಸಿ ಪ್ಲಾಸ್ಟಿಕ್ ನೀರಿನ ಬಾಟಲ್. ಪ್ಲಾಸ್ಟಿಕ್ ಬಳಕೆ ವಸ್ತುಗಳನ್ನು ವಶಪಡಿಸಿಕೊಂಡು ಪ್ಲಾಸ್ಟಿಕ್ ಬಳಕೆ ವಸ್ತುಗಳನ್ನು ಮಾರಾಟ ಮಾಡದಂತೆ ಎಚ್ಚರಿಕೆ ನೀಡಲಾಗಿದೆ.



ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟವನ್ನು ಪ್ಲಾಸ್ಟಿಕ್ ಮುಕ್ತ ಪ್ರದೇಶವೆಂದು ಈಗಾಗಲೇ ಘೋಷಣೆ ಮಾಡಲಾಗಿದೆ. ಕಳೆದು ಒಂದು ವಾರಗಳ ಹಿಂದೆಯೇ ಪ್ರಾಧಿಕಾರದ ಕಾರ್ಯದರ್ಶಿ ರಘು ಸಿಬ್ಬಂದಿಗಳ ಜೊತೆ ಚರ್ಚೆ ನಡೆಸಿ ಇನ್ನು ಮುಂದೆ ಪ್ಲಾಸ್ಟಿಕ್ ಮಾರಾಟವನ್ನು ಸಂಪೂರ್ಣವಾಗಿ ನಿಷೇಧ ಮಾಡಲು ಪ್ರತಿಯೊಬ್ಬ ಸಿಬ್ಬಂದಿಗಳು ಎಚ್ಚರಿಕೆ ವಹಿಸಬೇಕು ಎಂದು ಸೂಚನೆ ನೀಡಿದ್ದರು.

ಇದಲ್ಲದೆ ಪ್ರತಿಯೊಬ್ಬ ಮಳಿಗೆದಾರರಿಗೂ ನೋಟಿಸ್ ನೀಡಿ ಪ್ಲಾಸ್ಟಿಕ್ ಪದಾರ್ಥಗಳನ್ನು ಯಾರೊಬ್ಬರು ಮಾರಾಟ ಮಾಡಬಾರದು, ಒಂದೊಮ್ಮೆ ಮಾರಾಟ ಮಾಡಿದರೆ ಪ್ಲಾಸ್ಟಿಕ್ ಪದಾರ್ಥಗಳನ್ನು ವಶಕ್ಕೆ ಪಡೆದುಕೊಂಡು ಮೊದಲ ಬಾರಿ 5 ಸಾವಿರ ದಂಡ ವಿಧಿಸಲಾಗುವುದು, ಆನಂತರವೂ ಪ್ಲಾಸ್ಟಿಕ್ ಬಳಕೆ ಮಾಡಿದರೆ ಟೆಂಡರ್ ರದ್ದು ಮಾಡಲಾಗುವುದು ಎಂದು ಎಚ್ಚರಿಕೆ ನೀಡಿ ಮಳಿಗೆದಾರರಿಗೆ ನೋಟಿಸ್ ನೀಡಿದ್ದರು.

ಆದರೂ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದ ಪ್ರಾಧಿಕಾರದ ವತಿಯಿಂದ ಪಡೆದಿರುವ ಮಳಿಗೆ ಮಾಲೀಕರುಗಳು ಪ್ಲಾಸ್ಟಿಕ್ ನೀರಿನ ಬಾಟಲ್, ಪ್ಲಾಸ್ಟಿಕ್ ಲೋಟ ತಟ್ಟೆ, ಕವರ್, ಬೀಡಿ ಸಿಗರೇಟು, ತಂಬಾಕು ಪದಾರ್ಥಗಳನ್ನು ಮಾರಾಟ ಮಾಡುತ್ತಿದ್ದರು. ಈ ಹಿನ್ನೆಲೆ ಪ್ರಾಧಿಕಾರದ ಕಾರ್ಯದರ್ಶಿ ಹಾಗೂ ಸಿಬ್ಬಂದಿಗಳು ಮಲೆ ಮಹದೇಶ್ವರ ಬೆಟ್ಟ ಹಾಗೂ ತಾಳು ಬೆಟ್ಟದ ಅಂಗಡಿಗಳಲ್ಲಿ ದಾಳಿ ನಡೆಸಿ ಪ್ಲಾಸ್ಟಿಕ್ ಬಳಕೆ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.


ಒಂದು ಸಾವಿರಕ್ಕೂ ಹೆಚ್ಚಿನ ನೀರಿನ ಬಾಟಲ್, 5 ಕೆಜಿ ಪ್ಲಾಸ್ಟಿಕ್ ಕವರ್ 3 ಬಂಡಲ್ ಬೀಡಿ, 4 ಪ್ಯಾಕ್ ಸಿಗರೇಟ್, ತಂಬಾಕು ಪದಾರ್ಥಗಳು, ಜ್ಯೂಸ್ ನ ಪೌಚ್ ಗಳನ್ನು ವಶಕ್ಕೆ ಪಡೆದು ಮುಂದಿನ ದಿನಗಳಲ್ಲಿ ಪ್ಲಾಸ್ಟಿಕ್ ಬಳಕೆ ಮಾಡದಂತೆ ಎಚ್ಚರಿಕೆ ನೀಡಿದ್ದಾರೆ.

ಈ ಬಗ್ಗೆ ಪ್ರಾಧಿಕಾರದ ಕಾರ್ಯದರ್ಶಿ ಎ.ಈ ರಘು ಮಾಧ್ಯಮದವರೊಂದಿಗೆ ಮಾತನಾಡಿ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ಸಂಪೂರ್ಣವಾಗಿ ಪ್ಲಾಸ್ಟಿಕ್ ನಿಷೇಧ ಮಾಡಲು ಪ್ರಾಧಿಕಾರ ಬದ್ಧವಾಗಿದೆ. ಈಗಾಗಲೇ ಮಳಿಗೆ ಮಾರಾಟಗಾರರಿಗೆ ಪ್ಲಾಸ್ಟಿಕ್ ಬಳಕೆ ಮಾಡದಂತೆ ಸೂಚನೆ ನೀಡಲಾಗಿದೆ.

ಮಹಾಶಿವರಾತ್ರಿ ಜಾತ್ರಾ ಮಹೋತ್ಸವಕ್ಕೆ ನೀರಿನ ಬಾಟಲ್ ಮಾರಾಟ ಮಾಡಲು ಶೇಖರಣೆ ಮಾಡಿದ್ದ ಏಜೆನ್ಸಿಯವರೆಗೂ ಒಂದು ಅವಕಾಶ ನೀಡಲಾಗಿದ್ದು ವಾಪಸ್ ಕಳುಹಿಸಲು ಸೂಚನೆ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಯಾರೇ ಪ್ಲಾಸ್ಟಿಕ್ ಬಳಕೆ ಮಾಡಿದರು ದಂಡ ವಿಧಿಸಿ, ಟೆಂಡರ್ ರದ್ದು ಮಾಡಲಾಗುವುದು ಎಂದು ತಿಳಿಸಿದರು.

ಈ ವೇಳೆ ಪ್ರಾಧಿಕಾರದ ಉಪ ಕಾರ್ಯದರ್ಶಿ ಚಂದ್ರಶೇಖರ್, ಸಿಬ್ಬಂದಿಗಳಾದ ಜನಾರ್ಧನ್, ಕೃಷ್ಣಕುಮಾರ್, ಮಹಾದೇವ್ ಪ್ರಭು, ರಮೇಶ್, ಇಂದ್ರೇಶ್, ನಾಗರಾಜ್ ಅರಸು, ರವೀಂದ್ರ, ಸೆಕ್ಯೂರಿಟಿ ಸೂಪರ್ವೈಸರ್ ಮಾದೇಶ್, ಪೇದೆ ಬಂಗಾರು, ಅರಣ್ಯ ವೀಕ್ಷಕರಾದ ಶಿವರಾಜು ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

# ಹದಗೆಟ್ಟಿರುವ ರಸ್ತೆಗಳನ್ನು ಕೂಡಲೇ ದುರಸ್ತಿಗೊಳಿಸಿ



**ಮಾಲೂರು:** ತಾಲ್ಲೂಕಿನಾದ್ಯಂತ ಮುಖ್ಯ ರಸ್ತೆಗಳು ಹದಗೆಟ್ಟಿದ್ದು ಕೂಡಲೇ ರಸ್ತೆಗಳನ್ನು ಸರಿಪಡಿಸುವಂತೆ ಆಗ್ರಹಿಸಿ ಕರವೇ ಪ್ರವೀಣ್ ಕುಮಾರ್ ಶೆಟ್ಟಿ ಬಣ ತಾಲ್ಲೂಕು ಅಧ್ಯಕ್ಷ ಶಿವಾರನಾರಾಯಣಸ್ವಾಮಿ ನೇತೃತ್ವದಲ್ಲಿ ಲೋಕೋಪಯೋಗಿ ಇಲಾಖೆ ಅಧಿಕಾರಿ ರಾಜ್ ಗೋಪಾಲ್ ಅವರಿಗೆ ಮನವಿ ಸಲ್ಲಿಸಲಾಯಿತು.

ಮಾಲೂರು ತಾಲ್ಲೂಕಿನ ಮುಖ್ಯ ರಸ್ತೆಗಳು ಬರಿ ಹಳ್ಳಿಕೊಳ್ಳಗಳಿಂದ ಕೂಡಿದ್ದು ವಾಹನ ಚಾಲಕರಿಗೆ ಮತ್ತು ಸಾರ್ವಜನಿಕರಿಗೆ ತುಂಬಾ ತೊಂದರೆ ಆಗುತ್ತಿದ್ದು, ಹಾಗೂ ಮಾಲೂರು ಪಟ್ಟಣದಲ್ಲಿರುವ ಬಾಲಾಜಿ ವೃತ್ತ ಮತ್ತು ರೈಲ್ವೆ ಸೇತುವೆ ಬಳಿ ಮೊಣಕಾಲಿನಷ್ಟು ಗುಂಡಿಗಳು ಇದ್ದು ವಾಹನ ಸವಾರರು ಕೆಳಗಡೆ ಬಿದ್ದು ಗಂಭೀರ ಅಪಘಾತಗಳಾಗಿವೆ. ಭಾರಿ ವಾಹನಗಳ ಚಾಲಕರಿಗೂ ಚಾಲನೆಯಲ್ಲಿ ನಿಯಂತ್ರಣ ತಪ್ಪಿ ಅಪಘಾತಗಳಿಗೆ ಕಾರಣಗಳಾಗುತ್ತಿದೆ. ಇದಕ್ಕೆ ಮೂಲ ಲೋಕೋಪಯೋಗಿ ಇಲಾಖೆ ಅಧಿಕಾರಗಳ ನಿರ್ಲಕ್ಷ್ಯವೇ ಕಾರಣ ಎಂದು ದೂರಿದರು. ಮಾಲೂರಿನ ಸಾರ್ವಜನಿಕರ ಹಿತಾಸಕ್ತಿಯನ್ನು ಗಮನಕ್ಕೆ ತೆಗೆದುಕೊಂಡು ರಸ್ತೆಗಳ ಅವ್ಯವಸ್ಥೆ ಸರಿ ಪಡಿಸಿ ಸುಗಮ ಸಂಚಾರಕ್ಕೆ ಅನುಕೂಲಮಾಡಿ ಕೊಟ್ಟು ನೀವು ಅತೀ ಶೀಘ್ರದಲ್ಲಿಯೇ ಈ ರಸ್ತೆಗಳಿಗೆ ಒಳ್ಳೆ ಗುಣಮಟ್ಟದ ಡಾಂಬರು ಹಾಕಿಸಿ ರಸ್ತೆಗಳನ್ನು ಸರಿಪಡಿಸಿ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ಆಗುತ್ತಿರುವ ಅಪಘಾತಗಳನ್ನು ತಡೆಗಟ್ಟುವಂತೆ ಒತ್ತಾಯಿಸಿ ಮನವಿ ನೀಡುತ್ತಿದ್ದು, ರಸ್ತೆ ಸರಿಪಡಿಸದಿದ್ದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಉಗ್ರ ಹೋರಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ತಾಲ್ಲೂಕು ಮಹಿಳಾ ಘಟಕದ ಅಧ್ಯಕ್ಷೆ ಅಮರಾವತಿ. ಎನ್ ದಯಾನಂದ. ಕೊಪ್ಪ ಚಂದ್ರು, ಎಂ ಎಸ್ ಮಣಿ. ಚಿರಂಜೀವಿ, ನರೇಶ್. ಮಿಥುನ್. ನವೀನ್. ಬಿಎಸ್ ಮಂಜುನಾಥ್. ಶಿವಕುಮಾರ್, ವೆಂಕಟೇಶ್, ಅಮರನಾಥ ಪೂಜಾರಿ ಸೇರಿದಂತೆ ಕಾರ್ಯಕರ್ತರು ಹಾಜರಿದ್ದರು.

# ಉಚಿತ ಆರೋಗ್ಯ ತಪಾಸಣೆ



**ಶಿಡ್ಲಘಟ್ಟ:** ಕೇಂಬ್ರಿಡ್ಜ್ ತಾಂತ್ರಿಕ ಮಹಾ ವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಅಡಿಯಲ್ಲಿ ವೈಟ್ ಫೀಲ್ಡ್‌ನ ವೈದೇಹಿ ಆಸ್ಪತ್ರೆಯ ವೈದ್ಯಕೀಯ ತಂಡದಿಂದ ತಾಲ್ಲೂಕಿನ ಬೋದಗೂರು ಗ್ರಾಮದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.

ವಿವಿಧ ತಜ್ಞ ವೈದ್ಯರು ಆಗಮಿಸಿದ್ದು, ಗ್ರಾಮಸ್ಥರ ಆರೋಗ್ಯ ತಪಾಸಣೆ ನಡೆಸಿ, ಉಚಿತವಾಗಿ ಔಷಧಿಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಆನೂರು ಗ್ರಾಮ ಪಂಚಾಯಿತಿ ಪಿಡಿಒ ಕಾತ್ಯಾಯಿನಿ, ಉಪಾಧ್ಯಕ್ಷ ವಿಶ್ವಾಸ್, ಆರೋಗ್ಯ ಶಿಬಿರದ ಸಂಯೋಜಕ ಹರೀಶ್ ಗೌಡ,ಎಂ.ಜೆ.ಶಂಕರ್,ಶಾಲಾ ಮುಖ್ಯಶಿಕ್ಷಕ ವಿಶ್ವನಾಥ್, ಪ್ರಗತಿಪರ ರೈತ ಬೋದಗೂರು, ವೆಂಕಟಸ್ವಾಮಿರೆಡ್ಡಿ, ಜಿ.ಕೆ. ಮುನಿರಾಜು ಮುಂತಾದವರು ಹಾಜರಿದ್ದರು.




**ತುಮಕೂರು ಜಿಲ್ಲೆಯ ತಿಪಟೂರು ತಾಲ್ಲೂಕಿನ ಈಚನೂರು ಶ್ರೀ ರುದ್ರೇಶ್ವರಸ್ವಾಮಿಯವರ ನೂತನ ವಿಗ್ರಹ ಪ್ರತಿಷ್ಠಾಪನ ಸಮಾರೋಪ ಸಮಾರಂಭದಲ್ಲಿ ಶ್ರೀಮದ್ ರಂಭಾಪುರಿ ಶ್ರೀ ಡಾ.ವೀರಸೋಮೇಶ್ವರ ಜಗದ್ಗುರು ಸ್ವಾಮೀಜಿ, ಶ್ರೀಮದ್ ಶ್ರೀಕೇದಾರ ಜಗದ್ಗುರುಗುಳು ಉಪಸ್ಥಿತರಿದ್ದರು.**



**ಶ್ರೀ ಕ್ಷೇತ್ರ ಸಾಲಾದ್ರಿ, ಕೋಟೆಬೆಟ್ಟದ ಶ್ರೀ ವೆಂಕಟರಮಣ ಸ್ವಾಮಿಯ ರಥೋತ್ಸವ ಅದ್ದೂರಿಯಾಗಿ ಜರುಗಿತು. ನಾಗಮಂಗಲ ತಾಲೂಕಿನ ದೇವಲಾಪುರ ಹೋಬಳಿ ಸಮೀಪ ಇರುವ ಕೋಟೆಬೆಟ್ಟ ಗ್ರಾಮದಲ್ಲಿರುವ ಶ್ರೀ ವೆಂಕಟರಮಣ ಸ್ವಾಮಿಯ ಬ್ರಹ್ಮರಥೋತ್ಸವ ಸಾವಿರಾರು ಭಕ್ತಾದಿಗಳ ಭಾಗವಹಿಸಿದ್ದು ಸ್ವಾಮಿಯ ದರ್ಶನ ಮಾಡಿಅದ್ದೂರಿಯ ರಥೋತ್ಸವದಲ್ಲಿ ಪಾಲ್ಗೊಂಡಿದ್ದರು**

# ಅಮೆರಿಕದಲ್ಲಿ ಪ್ರಧಾನಿ ಮೋದಿಗೆ ಭರ್ಜರಿ ಸ್ವಾಗತ

ವಾಷಿಂಗ್ಟನ್: ಎರಡು ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರಗಳ ನಡುವೆ ಬೆಳೆಯುತ್ತಿರುವ ಸಂಬಂಧಗಳನ್ನು ಇನ್ನಷ್ಟು ಬಲಗೊಳಿಸುವ ನಿಟ್ಟಿನಲ್ಲಿ ಅಮೆರಿಕದ ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಸಭೆ ನಡೆಸಲು ಪ್ರಧಾನಿ ಮೋದಿ ವಾಷಿಂಗ್ಟನ್‌ಗೆ ಬಂದಿಳಿದಿದ್ದಾರೆ.

ಯುಎಸ್ ರಾಜಧಾನಿಗೆ ಬಂದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಅನಿವಾಸಿ ಭಾರತೀಯರು ಅದ್ದೂರಿ ಸ್ವಾಗತ ಕೋರಿದರು.

ಫ್ರಾನ್ಸ್ ಪ್ರವಾಸ ಪೂರ್ಣಗೊಳಿಸಿದ ಮೋದಿ ಅಲ್ಲಿಂದಾ ಸೀದಾ ಬೋಯಿಂಗ್ 777 ರಲ್ಲಿ 24 ಗಂಟೆಗಳ ಬಿರುಗಾಳಿ ಭೇಟಿಗಾಗಿ ವಾಷಿಂಗ್ಟನ್ ಗೆ ಬಂದಿಳಿದರು. ಈ ಸಂದರ್ಭದಲ್ಲಿ ಭಾರತೀಯರು ಮತ್ತು ಇತರ ಉತ್ಸಾಹಿ ಗುಂಪುಗಳು ಅವರನ್ನು ಅತ್ಯಂತ ಸಂಭ್ರಮದಿಂದ ಬರ ಮಾಡಿಕೊಂಡವು.

ಅನಿವಾಸಿ ಭಾರತೀಯರಿಗೆ ಅಭಿನಂದನೆ ಸಲ್ಲಿಸಿದ ಪಿಎಂ: ತೀವ್ರ ಶೀತಗಾಳಿಯ ನಡುವೆ ವಾಷಿಂಗ್ಟನ್ ಡಿಸಿಯಲ್ಲಿರುವ ಭಾರತೀಯ ಅನಿವಾಸಿಯರು ನನ್ನನ್ನು ವಿಶೇಷವಾಗಿ ಸ್ವಾಗತಿಸಿದ್ದಾರೆ. ಅವರಿಗೆ ನನ್ನ ಕೃತಜ್ಞತೆಗಳು ಎಂದು ಪ್ರಧಾನಿ ಮೋದಿ ತಮ್ಮ ಎಕ್ಸ್ ಪೋಸ್ಟ್‌ನಲ್ಲಿ ಹೇಳಿಕೊಂಡಿದ್ದಾರೆ.

ವಾಷಿಂಗ್ಟನ್‌ಗೆ ತೆರಳುವ ಮೊದಲು, ಎಕ್ಸ್




ಪೋಸ್ಟ್ ವೊಂದನ್ನು ಹಾಕಿದ ಪ್ರಧಾನಿ ಮೋದಿ "ಈ ಭೇಟಿ ಭಾರತ – ಅಮೆರಿಕದ ಸ್ನೇಹವನ್ನು ಮತ್ತಷ್ಟು ಗಟ್ಟಿಗೊಳಿಸುತ್ತದೆ ಮತ್ತು ವೈವಿಧ್ಯಮಯ ವಲಯಗಳಲ್ಲಿ ಸಂಬಂಧಗಳನ್ನು ಹೆಚ್ಚಿಸುತ್ತದೆ ಎಂದಿದ್ದಾರೆ. ಅಧ್ಯಕ್ಷ ಟ್ರಂಪ್ ಅವರ ಮೊದಲ ಅವಧಿಯಲ್ಲಿ ಅವರೊಂದಿಗೆ ಕೆಲಸ ಮಾಡಿದ್ದನ್ನು ನಾನು ಹೃತ್ಪೂರ್ವಕವಾಗಿ ನೆನಪಿಸಿಕೊಳ್ಳುತ್ತೇನೆ ಎಂದು ಅವರು ಹೇಳಿದ್ದಾರೆ. ಪ್ರಧಾನಿ ಮೋದಿ ಫ್ರಾನ್ಸ್‌ನಲ್ಲಿ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರೊಂದಿಗೆ ಕೃತಕ ಬುದ್ಧಿಮತ್ತೆ ಶೃಂಗಸಭೆಯ ಸಹ–ಆತಿಥ್ಯ ವಹಿಸಿದ್ದರು. ಇದೇ ವೇಳೆ ಅವರು ಮಾರ್ಸಿಲ್ಲೆಯಲ್ಲಿ ಭಾರತದ ಕಾನ್ಸುಲೇಟ್ ಜನರಲ್ ಉದ್ಘಾಟಿಸಿದರು.

ಪ್ರಧಾನಿಯಾಗಿ ಪ್ರಧಾನಿ ಮೋದಿ ಅವರ 10 ನೇ ಅಮೆರಿಕ ಭೇಟಿ ಇದಾಗಿದ್ದರೆ, ಮತ್ತು ಟ್ರಂಪ್ ಅಧ್ಯಕ್ಷೀಯ ಅವಧಿಯ ನಾಲ್ಕನೇ ಭೇಟಿಯಾಗಿದೆ.

ಎಲಾನ್ ಮಸ್ಕ್ ಭೇಟಿ ಮಾಡಲಿರುವ ಪ್ರಧಾನಿ: ಗುರುವಾರ ಶ್ವೇತಭವನಕ್ಕೆ ಭೇಟಿ ನೀಡುವ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಪ್ತ ಮತ್ತು ವಿಶ್ವಾಸಾರ್ಹ ಮಿತ್ರ ಎಂದು ಹೊರಹೊಮ್ಮಿರುವ ಬಿಲಿಯನೇರ್ ಎಲಾನ್ ಮಸ್ಕ್ ಅವರನ್ನು ಭೇಟಿ ಮಾಡಲಿದ್ದಾರೆ.

ಪ್ರಧಾನಿ ಮೋದಿ ತಮ್ಮ ಎರಡು ದಿನಗಳ ಭೇಟಿಯಲ್ಲಿ ಇತರ ಪ್ರಮುಖ ಉದ್ಯಮಿಗಳನ್ನು ಸಹ ಭೇಟಿ ಮಾಡುವ ನಿರೀಕ್ಷೆಯಿದೆ. ಆದರೆ ಮಸ್ಕ್ ಭೇಟಿ ಬಹಳಷ್ಟು ನಿರೀಕ್ಷೆಗಳನ್ನು ಹುಟ್ಟು ಹಾಕಿದೆ. ಪ್ರಧಾನಿ ಮೋದಿ ಮತ್ತು ಉದ್ಯಮಿ ಮಸ್ಕ್ ಹಲವಾರು ಬಾರಿ ಭೇಟಿಯಾಗಿದ್ದಾರೆ. ಡೆಮಾಕ್ರಟಿಕ್ ಪಕ್ಷದ ಬೆಂಬಲಿಗರಾಗಿದ್ದ ಮಸ್ಕ್ ಈಗ ಬಹಳ ದೂರ ಕ್ರಮಿಸಿದ್ದಾರೆ. ಅವರೀಗ ಅಧ್ಯಕ್ಷ ಟ್ರಂಪ್ ಅವರ ಆಪ್ತ ಮಿತ್ರ ಮತ್ತು ವಿಶ್ವಾಸಾರ್ಹ ಸಲಹೆಗಾರರಾಗಿ ಹೊರಹೊಮ್ಮಿದ್ದಾರೆ. ಹೀಗಾಗಿ ಇಂದಿನ ಮಸ್ಕ್ ಅವರ ಭೇಟಿ ಭಾರಿ ಕುತೂಹಲವನ್ನು ಕೆರಳಿಸಿದೆ.

ಭಾರತದಲ್ಲಿ ಹೆಚ್ಚು ಕೈಗೆಟುಕುವ ಮಾದರಿಯ ಆಲ್ – ಎಲೆಕ್ಟ್ರಿಕ್ ಟೆಸ್ಲಾ ಕಾರಿನ ಕಲ್ಪನೆಯನ್ನು ಈ ಬಿಲಿಯನೇರ್ ರೂಪಿಸಿದ್ದಾರೆ. ಆದರೆ ಅವರು ಇನ್ನೂ ಆಸಕ್ತಿ ಹೊಂದಿದ್ದಾರೆಯೇ ಅಥವಾ ಬೇರೆ ಯಾವುದರ ಬಗ್ಗೆ ಮಾತನಾಡಲು ಬಯಸುತ್ತಾರೆ ಎಂಬುದು ಸ್ಪಷ್ಟವಾಗಿಲ್ಲ.

ಭಾರತದಲ್ಲಿ ವಿದೇಶಿ ಹೂಡಿಕೆಯನ್ನು ಆಕರ್ಷಿಸುವ ನಿರಂತರ ಪ್ರಯತ್ನದಲ್ಲಿ ಪ್ರಧಾನಿ ಮೋದಿ ಇದ್ದಾರೆ. ಈ ಹಿಂದೆ ಪ್ರತಿ ಪ್ರವಾಸದ ಸಮಯದಲ್ಲಿಯೂ ಅಮೆರಿಕದ ವಾಣಿಜ್ಯೋದ್ಯಮಿಗಳನ್ನು ಪ್ರಧಾನಿ ಮೋದಿ ಭೇಟಿ ಮಾಡಿದ್ದಾರೆ.

# ಗುಪ್ತಾಂಗಕ್ಕೆ ಡಂಬ್‌ಬೆಲ್ ಕಟ್ಟಿ ರ್‍ಯಾಗಿಂಗ್

**ಕೊಟ್ಟಾಯಂ:** ಕೇರಳದ ಕೊಟ್ಟಾಯಂನ ಸರ್ಕಾರಿ ವೈದ್ಯಕೀಯ ಕಾಲೇಜಿನಲ್ಲಿ 3ನೇ ವರ್ಷದ 5 ನರ್ಸಿಂಗ್ ವಿದ್ಯಾರ್ಥಿಗಳನ್ನು ತಮ್ಮ ಕೆಲವು ಜೂನಿಯರ್‌ಗಳಿಗೆ ದೈಹಿಕವಾಗಿ ಕಿರುಕುಳ ನೀಡಿದ ಆರೋಪದ ಮೇಲೆ ಬಂಧಿಸಲಾಗಿದೆ.

ರ್‍ಯಾಗಿಂಗ್‌ಗೆ ಸಂಬಂಧಿಸಿದಂತೆ ಬಂಧಿತ ವಿದ್ಯಾರ್ಥಿಗಳ ವಿರುದ್ಧ ಕಾಲೇಜಿನ ಮೂವರು ಜೂನಿಯರ್ ನರ್ಸಿಂಗ್ ವಿದ್ಯಾರ್ಥಿಗಳು ದೂರು ಸಲ್ಲಿಸಿದ್ದಾರೆ. ಆ ದೂರಿನ ಪ್ರಕಾರ, ಆ ಜೂನಿಯರ್‌ಗಳ ಬಟ್ಟೆ ಬಿಚ್ಚಿ, ಅವರ ಗುಪ್ತಾಂಗಕ್ಕೆ ಡಂಬ್‌ಬೆಲ್ ಕಟ್ಟಿ, ಚಿತ್ರಹಿಂಸೆ ನೀಡಲಾಗಿದೆ.

ವೇಟ್‌ಲಿಫ್ಟಿಂಗ್‌ಗಾಗಿ ಬಳಸಲಾಗುವ ಡಂಬ್‌ಬೆಲ್‌ಗಳನ್ನು ಗುಪ್ತಾಂಗಕ್ಕೆ ಕಟ್ಟಿ, ಬೆತ್ತಲೆಯಾಗಿ ನಿಲ್ಲುವಂತೆ ಮಾಡಲಾಗಿದೆ. ನಂತರ ಚಿತ್ರಹಿಂಸೆ ನೀಡಲಾಗಿದೆ ಎಂದು ವಿದ್ಯಾರ್ಥಿಗಳು ಆರೋಪಿಸಿದ್ದಾರೆ. ಡಂಬ್‌ಬೆಲ್‌ಗಳನ್ನು ವಿದ್ಯಾರ್ಥಿಗಳ ಖಾಸಗಿ ಭಾಗಗಳಿಗೆ ನೇತುಹಾಕಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ. ಆ ವಿದ್ಯಾರ್ಥಿಗಳ ದೇಹದ ಮೇಲೆ ಗಾಯಗಳೂ ಆಗಿವೆ. ಬಳಿಕ, ಅವರ ಮುಖ, ತಲೆ ಮತ್ತು ಬಾಯಿಗೆ ಕ್ರೀಮ್ ಹಚ್ಚಿಕೊಳ್ಳಲು ಒತ್ತಾಯಿಸಲಾಯಿತು.

ಹಿರಿಯ ವಿದ್ಯಾರ್ಥಿಗಳು ಮದ್ಯ ಖರೀದಿಸಲು ತಮ್ಮಿಂದ ನಿಯಮಿತವಾಗಿ ಹಣವನ್ನು ಸುಲಿಗೆ ಮಾಡುತ್ತಿದ್ದಾರೆ ಎಂದು ಜೂನಿಯರ್ ವಿದ್ಯಾರ್ಥಿಗಳು ದೂರಿನಲ್ಲಿ ಆರೋಪಿಸಿದ್ದಾರೆ. ಕಳೆದ ವರ್ಷ ಡಿಸೆಂಬರ್‌ನಿಂದ ರ್‍ಯಾಗಿಂಗ್ ನಡೆಯುತ್ತಿದೆ ಎಂದು ಜೂನಿಯರ್ ವಿದ್ಯಾರ್ಥಿಗಳು ಆರೋಪಿಸಿದ್ದಾರೆ. ಈ ಬಗ್ಗೆ ವಿದ್ಯಾರ್ಥಿಗಳು




ಇತ್ತೀಚೆಗೆ ತಮ್ಮ ಕುಟುಂಬಗಳಿಗೆ ತಮಗಾದ ಅನುಭವವನ್ನು ವಿವರಿಸಿದ್ದರು. ಅವರು ಕಾಲೇಜು ಅಧಿಕಾರಿಗಳಿಗೆ ಈ ಕುರಿತು ಮಾಹಿತಿ ನೀಡಿದರು. ನಂತರ, ಅವರು ಈ ಪ್ರಕರಣದ ಪ್ರಾಥಮಿಕ ತನಿಖೆಯನ್ನು ಕೈಗೊಂಡು ಪೊಲೀಸರಿಗೆ ಮಾಹಿತಿ ನೀಡಿದರು.

ಆ ಹಿರಿಯ ವಿದ್ಯಾರ್ಥಿಗಳು ಈ ಚಿತ್ರಹಿಂಸೆಯನ್ನು ವೀಡಿಯೋ ಕೂಡ ಮಾಡಿದ್ದಾರೆ. ಇದನ್ನು ಯಾರಿಗಾದರೂ ಹೇಳಿದರೆ ಶೈಕ್ಷಣಿಕ ಹಿನ್ನಡೆ ಸೇರಿದಂತೆ ತೀವ್ರ ಪರಿಣಾಮಗಳನ್ನು ಎದುರಿಸುವುದಾಗಿ ಬೆದರಿಕೆ ಹಾಕುವ ಮೂಲಕ ಜೂನಿಯರ್‌ಗಳ ಬಾಯಿ ಮುಚ್ಚಿಸಿದ್ದರು ಎನ್ನಲಾಗಿದೆ. ದೀರ್ಘಕಾಲದ ಕಿರುಕುಳವನ್ನು ಸಹಿಸಿಕೊಂಡ ನಂತರ, ಮೂವರು ವಿದ್ಯಾರ್ಥಿಗಳು ಕೊಟ್ಟಾಯಂ ಗಾಂಧಿನಗರ ಪೊಲೀಸರಿಗೆ ದೌರ್ಜನ್ಯದ ಬಗ್ಗೆ ದೂರು ನೀಡಲು ನಿರ್ಧರಿಸಿದರು. ಬಂಧಿತ ವಿದ್ಯಾರ್ಥಿಗಳನ್ನು ರಾಹುಲ್ ರಾಜ್, ಎನ್.ಎಸ್. ಜೀವಾ, ಎನ್.ಪಿ. ವಿವೇಕ್, ರಿಗಿಲ್ ಜೀತ್ ಮತ್ತು ಸ್ಯಾಮ್ಯುಯೆಲ್ ಜಾನ್ಸನ್ ಎಂದು ಗುರುತಿಸಲಾಗಿದೆ.

# ತಿರುಪತಿ ಭಕ್ತರಿಗೆ ಟಿಟಿಡಿ ಕಟ್ಟುನಿಟ್ಟಿನ ಸೂಚನೆ

**ತಿರುಮಲ:** ತಿರುಪತಿ ವೆಂಕಟೇಶ್ವರ ದರ್ಶನಕ್ಕೆ ನಿತ್ಯ ಹರಿದು ಬರುವ ಜನಸಾಗರದ ನಿರ್ವಹಣೆ ತ್ತದೆ ನಿರ್ವಹಣೆ ಟಿಟಿಡಿಗೆ ಅತಿ ದೊಡ್ಡ ಸವಾಲು, ಕೆಲ ನಿಯಮಗಳನ್ನು ಮಾರ್ಪಡು ಮಾಡಿ ಕಟ್ಟುನಿಟ್ಟಿನ ಸೂಚನೆಯನ್ನು ಮತ್ತೊಮ್ಮೆ ಭಕ್ತರಿಗಾಗಿ ಹೊರಡಿಸಿದೆ.

ಟೋಕನ್ ಅಥವಾ ಟಿಕೆಟ್ ಪಡೆದು ಆಗಮಿಸುವ ಭಕ್ತರಿಗೆ ದೇವರ ದರ್ಶನಕ್ಕೆ ಅನುಕೂಲಕರ ವಾತಾವರಣ ಕಲ್ಪಿಸುವ ದೃಷ್ಟಿಯಿಂದ ನಿಗದಿತ ಸಮಯವನ್ನು ನೀಡಲಾಗುತ್ತಿದೆ. ಆದರೆ, ಭಕ್ತರು ಈ ನಿಗದಿತ ಸಮಯಕ್ಕೆ ಮೊದಲೇ ಬಂದು ದರ್ಶನದ ಭಕ್ತರ ಸಾಲಿನಲ್ಲಿ ಸೇರುತ್ತಿದ್ದಾರೆ. ಇದರಿಂದ ಭಕ್ತರ ನಿರ್ವಹಣೆ ಸವಾಲಾಗಿದೆ. ಹಾಗೂ ಜನದಟ್ಟಣೆ ಉಂಟಾಗುತ್ತಿದೆ. ಈ ಹಿನ್ನಲೆ ಈ ಸೂಚನೆ ಹೊರಡಿಸಲಾಗಿದೆ.

ಟೋಕನ್ ಅಥವಾ ಟಿಕೆಟ್ ಪಡೆದವರಿಗೆ ನಿಗದಿಪಡಿಸಿದ ಸಮಯಕ್ಕೆ ದೇವರ ದರ್ಶನದ ಪ್ರವೇಶದ ದ್ವಾರಕ್ಕೆ ಆಗಮಿಸಬೇಕು ಎಂದು ಸ್ಪಷ್ಟವಾಗಿ ತಿಳಿಸಿದೆ. ಈ ಸಂಬಂಧ ಈಗಾಗಲೇ ಮಾಧ್ಯಮಗಳಲ್ಲೂ ಭಕ್ತರಿಗೆ ಮನವಿ ಮಾಡಲಾಗಿದೆ.



ನಿಗದಿತ ಸಮಯಕ್ಕೆ ಮೊದಲೇ ಬಂದರು, ದರ್ಶನದ ಸಾಲಿಗೆ ನುಗ್ಗುವುದು ಸರಿಯಲ್ಲ. ಇದರಿಂದ ಇತರರಿಗೆ ತೊಂದರೆಯಾಗುವ ಜೊತೆಗೆ ಈ ಸಂಬಂಧ ಕೆಲ ಭಕ್ತರು ವ್ಯವಸ್ಥೆ ನಿರ್ವಹಣೆ ಮತ್ತು ಜನದಟ್ಟಣೆ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಸುಳ್ಳು ಸುದ್ದಿ ಹರಡುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಪದೇ ಪದೇ ಈ ಕುರಿತು ನಾವು ಭಕ್ತರಿಗೆ ಮನವಿ ಮಾಡುತ್ತಿದ್ದೇವೆ. ಸಮಯ ಪಾಲನೆ ಮಾಡುವುದರಿಂದ ವ್ಯವಸ್ಥೆಗಳು ಸರಾಗವಾಗಿ ಸಾಗಲಿದೆ. ಭಕ್ತರು ಇದಕ್ಕೆ ಸಹಕಾರ ನೀಡಬೇಕು ಎಂದು ತನ್ನ ಪ್ರಕಟಣೆಯಲ್ಲಿ ಮನವಿ ಮಾಡಿಕೊಂಡಿದೆ.

# ಪಾಕ್‌ಗೆ ತಕ್ಕ ಉತ್ತರ ಕೊಟ್ಟ ಭಾರತೀಯ ಸೇನೆ

ಪೂಂಚ್: ಪೂಂಚ್‌ನಲ್ಲಿ ಕದನ ವಿರಾಮ ಉಲ್ಲಂಘಿಸಿದ್ದ ಪಾಕ್ ಸೈನಿಕರಿಗೆ ಭಾರತೀಯ ಸೇನೆ ಪ್ರತ್ಯುತ್ತರ ಕೊಟ್ಟಿದೆ, ಇದರ ಪರಿಣಾಮ ಹಲವು ಪಾಕ್ ಸೈನಿಕರು ಹತರಾಗಿದ್ದಾರೆ. ಭಾರತದ ಗಡಿಯಲ್ಲಿರುವ ನಿಯಂತ್ರಣ ರೇಖೆಯಲ್ಲಿ ಪಾಕಿಸ್ತಾನ ತನ್ನ ದುಷ್ಕೃತ್ಯಗಳನ್ನು ನಿಲ್ಲಿಸುತ್ತಿಲ್ಲ, ಜಮ್ಮು ಮತ್ತು ಕಾಶ್ಮೀರದ ಪೂಂಚ್ ಜಿಲ್ಲೆಯ ನಿಯಂತ್ರಣ ರೇಖೆಯ ಮೇಲೆ ಕದನ ವಿರಾಮ ಉಲ್ಲಂಘಿಸಿ ಗುಂಡು ಹಾರಿಸಿದ್ದಾರೆ. ಅಪ್ರಚೋದಿತ ಗುಂಡಿನ ದಾಳಿಗೆ ಭಾರತೀಯ ಸೇನೆಯು ಸೂಕ್ತ ಪ್ರತ್ಯುತ್ತರ ನೀಡಿತು, ಇದರಲ್ಲಿ ಹೆಚ್ಚಿನ ಸಂಖ್ಯೆಯ ಪಾಕಿಸ್ತಾನಿ ಸೈನಿಕರು ಸಾವನ್ನಪ್ಪಿದರು. ಭದ್ರತಾ ಅಧಿಕಾರಿಗಳು ಈ ಮಾಹಿತಿಯನ್ನು ನೀಡಿದ್ದಾರೆ.

ಪಾಕಿಸ್ತಾನದ ಕಡೆಯ ಸಾವುನೋವುಗಳ ಪ್ರಮಾಣ ತಕ್ಷಣಕ್ಕೆ ತಿಳಿದುಬಂದಿಲ್ಲ, ಆದರೆ ಶತ್ರು ಪಡೆಗಳು ಭಾರೀ ನಷ್ಟ ಅನುಭವಿಸಿವೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಭಾರತೀಯ ಸೇನೆಯು ಈ ಮಾಹಿತಿಯನ್ನು ದೃಢಪಡಿಸಿಲ್ಲ ಅಥವಾ ನಿರಾಕರಿಸಿಲ್ಲ. ಜಮ್ಮು ಜಿಲ್ಲೆಯ ಅಖ್ನೂರ್ ಸೆಕ್ಟರ್‌ನ ನಿಯಂತ್ರಣ ರೇಖೆಯ ಬಳಿ ಶಂಕಿತ ಉಗ್ರರು ನಡೆಸಿದ ಐಇಡಿ ಸ್ಫೋಟದಲ್ಲಿ ಕ್ಯಾಪ್ಟನ್ ಸೇರಿದಂತೆ ಇಬ್ಬರು ಭಾರತೀಯ ಸೇನಾ ಸಿಬ್ಬಂದಿ ಸಾವನ್ನಪ್ಪಿದ ಒಂದು ದಿನದ ನಂತರ ಕೃಷ್ಣ ಘಾಟಿ ಸೆಕ್ಟರ್‌ನಲ್ಲಿ ಪಾಕಿಸ್ತಾನ ಕದನ ವಿರಾಮ ಉಲ್ಲಂಘನೆ ಮಾಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಫೆಬ್ರವರಿ 25, 2021 ರಂದು ಭಾರತ ಮತ್ತು ಪಾಕಿಸ್ತಾನ ಕದನ ವಿರಾಮ ಒಪ್ಪಂದವನ್ನು ನವೀಕರಿಸಿದ ನಂತರ ಎಲ್‌ಒಸಿಯಲ್ಲಿ ಕದನ ವಿರಾಮ ಉಲ್ಲಂಘನೆಯ ಘಟನೆಗಳು ಬಹಳ ಕಡಿಮೆ ದಾಖಲಾಗಿವೆ. ಪಾಕಿಸ್ತಾನಿ ಸೇನಾ ಅಧಿಕಾರಿಯೊಬ್ಬರು ತಮ್ಮ ಮೃತ ಸೈನಿಕರಿಗೆ ಗೌರವ ಸಲ್ಲಿಸುತ್ತಿರುವ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ಪ್ರಸಾರವಾಗುತ್ತಿದೆ. ಈ ವೀಡಿಯೊದಲ್ಲಿ ದಿನಾಂಕವನ್ನು ಉಲ್ಲೇಖಿಸಲಾಗಿಲ್ಲ. ಅಧಿಕಾರಿಗಳ ಪ್ರಕಾರ, ಕಳೆದ ವಾರದಿಂದ ಗಡಿಯುದ್ದಕ್ಕೂ ಶತ್ರುಗಳ ಚಟುವಟಿಕೆ ಹೆಚ್ಚಾಗಿದ್ದು, ಇದರಿಂದಾಗಿ ಎಲ್‌ಒಸಿಯಲ್ಲಿ ಪರಿಸ್ಥಿತಿ ಉದ್ವಿಗ್ನವಾಗಿದೆ. ಈ ವರ್ಷ ಇದು ಮೊದಲ ಕದನ ವಿರಾಮ ಉಲ್ಲಂಘನೆಯಾಗಿದ್ದು, ಐದು ದಿನಗಳಲ್ಲಿ ನಾಲ್ಕನೇ ಗಡಿಯಾಚೆಗಿನ ಘಟನೆಯಾಗಿದೆ.

ಫೆಬ್ರವರಿ 11ರಂದು ಜಮ್ಮು ಮತ್ತು ಕಾಶ್ಮೀರದ ಅಖ್ನೂರ್ ಸೆಕ್ಟರ್‌ನ ಲಲೇಲಿಯಲ್ಲಿ ನಡೆದ ಐಇಡಿ ಸ್ಫೋಟದಲ್ಲಿ ಇಬ್ಬರು ಸೈನಿಕರು ಪ್ರಾಣ ಕಳೆದುಕೊಂಡಿದ್ದರು. ಎಂದು ಭಾರತೀಯ ಸೇನೆ ತಿಳಿಸಿದೆ. ಅಖ್ನೂರ್ ಸೆಕ್ಟರ್‌ನ ಲಲೇಲಿಯಲ್ಲಿ ಬೇಲಿ ಗಸ್ತು ತಿರುಗುತ್ತಿದ್ದಾಗ ಐಇಡಿ ಸಾಧನ ಸ್ಫೋಟ ವರದಿಯಾಗಿದ್ದು, ಇದರ ಪರಿಣಾಮವಾಗಿ ಇಬ್ಬರು ಮೃತಪಟ್ಟಿದ್ದಾರೆ.. ಈ ಪ್ರದೇಶದಲ್ಲಿ ಇನ್ನೂ ಶೋಧ ಕಾರ್ಯಾಚರಣೆಗಳು ನಡೆಯುತ್ತಿವೆ ಎಂದು ಸೇನಾ ಅಧಿಕಾರಿಗಳು ತಿಳಿಸಿದ್ದಾರೆ.

ಜಮ್ಮು ಕಾಶ್ಮೀರದ ಭಟ್ಟಲ್ ಪ್ರದೇಶದ ಫಾರ್ವರ್ಡ್ ಪೋಸ್ಟ್ ಬಳಿ 3.50ರ ಸುಮಾರಿಗೆ ಪ್ರಬಲ ಸ್ಫೋಟ ಸಂಭವಿಸಿದಾಗ ಸೈನಿಕರು ಗಸ್ತು ತಿರುಗುತ್ತಿದ್ದ ಸೈನಿಕರು ಹುತಾತ್ಮರಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಗಾಯಗೊಂಡ ಸಿಬ್ಬಂದಿಯನ್ನು ಆಸ್ಪತ್ರೆಗೆ ಸಾಗಿಸಲಾಯಿತು. ಅಷ್ಟರಲ್ಲಿ ಇಬ್ಬರು ಸೈನಿಕರು ಮೃತಪಟ್ಟಿದ್ದಾರೆ.

# 'ಜಮ್ಮು–ಕಾಶ್ಮೀರದಲ್ಲಿ ಪಾನ ನಿಷೇಧ ಜಾರಿಗೊಳಿಸಿ'

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರ ಕೇಂದ್ರಾಡಳಿತ ಪ್ರದೇಶದಲ್ಲಿ ಸಂಪೂರ್ಣ ಪಾನ ನಿಷೇಧ ಘೋಷಿಸಬೇಕೆಂಬ ಕೂಗು ಬಲವಾಗುತ್ತಿದ್ದು, ಮದ್ಯಪಾನ ನಿಷೇಧಿಸುವಂತೆ ಕೋರಿ ಕನಿಷ್ಠ ಮೂವರು ಶಾಸಕರು ವಿಧಾನಸಭೆಯಲ್ಲಿ ಖಾಸಗಿ ಸದಸ್ಯರ ಮಸೂದೆಗಳನ್ನು ಸಲ್ಲಿಸಿದ್ದಾರೆ.

ಕುಪ್ವಾರಾದ ಪೀಪಲ್ಸ್ ಡೆಮಾಕ್ರಟಿಕ್ ಪಾರ್ಟಿ (ಪಿಡಿಪಿ) ಶಾಸಕ ಮಿರ್ ಮೊಹಮ್ಮದ್ ಫಯಾಜ್, ಲಂಗಟೆಯ ಅವಾಮಿ ಇತ್ತೆಹಾದ್ ಪಕ್ಷದ (ಎಐಪಿ) ಶಾಸಕ ಶೇಖ್ ಖುರ್ಷಿದ್ ಅಹ್ಮದ್ ಮತ್ತು ಲಾಲ್ ಚೌಕ್‌ನ ಆಡಳಿತಾರೂಢ ನ್ಯಾಷನಲ್ ಕಾನ್ಫರೆನ್ಸ್ (ಎನ್‌ಸಿ) ಶಾಸಕ ಅಹ್ಸಾನ್ ಪರ್ದೇಸಿ ಅವರು ಜಮ್ಮು ಮತ್ತು ಕಾಶ್ಮೀರದಲ್ಲಿ ಮದ್ಯ ನಿಷೇಧಕ್ಕಾಗಿ ಪ್ರತ್ಯೇಕ ಖಾಸಗಿ ಸದಸ್ಯರ ಮಸೂದೆಗಳನ್ನು ಸಲ್ಲಿಸಿದ್ದಾರೆ.

ಮಾರ್ಚ್ 3 ರಿಂದ ಬಜೆಟ್ ಅಧಿವೇಶನಕ್ಕಾಗಿ ಜಮ್ಮುವಿನಲ್ಲಿ ನಡೆಯಲಿರುವ ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಯ ಮುಂಬರುವ ಅಧಿವೇಶನದಲ್ಲಿ ಮಸೂದೆಗಳನ್ನು ಮಂಡಿಸಲಾಗುವುದು.

"ಮದ್ಯಪಾನವು ಜಮ್ಮು ಮತ್ತು ಕಾಶ್ಮೀರದಾದ್ಯಂತ ಜನರ ಜೀವನವನ್ನು ಹಾಳು ಮಾಡುತ್ತಿದೆ ಮತ್ತು ನಮ್ಮ ಸಾಮಾಜಿಕ ವ್ಯವಸ್ಥೆಗೆ ಗಂಭೀರ ಅಪಾಯವನ್ನುಂಟು ಮಾಡುತ್ತಿದೆ. ನಾಯಿಕೊಡೆಗಳಂತೆ ಹುಟ್ಟಿಕೊಂಡಿರುವ ಮದ್ಯದಂಗಡಿಗಳ ಕಾರಣದಿಂದಾಗಿ 2019 ರಿಂದ ಎಲ್ಲಿ ಬೇಕಾದರೂ ಮದ್ಯ ಲಭ್ಯವಾಗುತ್ತಿರುವುದರಿಂದ ಸಮಸ್ಯೆ ಹೆಚ್ಚಾಗಿದೆ. ಮದ್ಯಪಾನ ನಿಷೇಧ ಕೋರಿ ಖಾಸಗಿ (ಸದಸ್ಯರ) ಮಸೂದೆಯನ್ನು ಮಂಡಿಸಿದ ಪಿಡಿಪಿ ಶಾಸಕ ಮಿರ್ ಮೊಹಮ್ಮದ್ ಫಯಾಜ್ ಅವರಿಗೆ ಅಭಿನಂದನೆಗಳು. ಈ ನಿಟ್ಟಿನಲ್ಲಿ ಇನ್ನಷ್ಟು ಪ್ರಯತ್ನಗಳಾಗಲಿ" ಎಂದು ಪಿಡಿಪಿ ನಾಯಕಿ ಇಲ್ತಿಜಾ ಮುಫ್ತಿ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

"ಆಧ್ಯಾತ್ಮಿಕವಾಗಿ ಶ್ರೀಮಂತವಾಗಿರುವ ನಮ್ಮ ಸಮಾಜದಲ್ಲಿ ಮದ್ಯಕ್ಕೆ ಸ್ಥಾನವಿಲ್ಲ. 'ರೇಶ್ವಾರ್' (ಸಂತರ ನಾಡು) ಎಂದು ಕರೆಯಲ್ಪಡುವ ಭೂಮಿಯನ್ನು ಮದ್ಯದ ವ್ಯಾಪಾರದಿಂದ ಕಳಂಕಿತಗೊಳಿಸಬಾರದು. 2009 ರಿಂದ ಎಂಜಿನಿಯರ್ ರಶೀದ್ ಈ ಪಿಡುಗಿನ ವಿರುದ್ಧ ಹೋರಾಡುತ್ತಿದ್ದಾರೆ ಮತ್ತು ಜಮ್ಮು ಮತ್ತು ಕಾಶ್ಮೀರವನ್ನು ಮದ್ಯಮುಕ್ತ ರಾಜ್ಯವೆಂದು ಘೋಷಿಸುವ ಧ್ಯೇಯಕ್ಕೆ ಎಐಪಿ ಬದ್ಧವಾಗಿದೆ" ಎಂದು ಶೇಖ್ ಅಬ್ದುಲ್ ರಶೀದ್ ಅಥವಾ ಎಂಜಿನಿಯರ್ ರಶೀದ್ ನೇತೃತ್ವದ ಪಕ್ಷದ ವಕ್ತಾರರು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಅಸಂಖ್ಯಾತ ಕುಟುಂಬಗಳ ಸರ್ವನಾಶಕ್ಕೆ ಕಾರಣವಾಗಿರುವ ಆನ್ ಲೈನ್ ಗೇಮಿಂಗ್ ಅನ್ನು ಕೂಡ ನಿಷೇಧಿಸಬೇಕೆಂದು ಎಐಪಿ ಹೋರಾಡುತ್ತಿದೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಮದ್ಯಪಾನ ನಿಷೇಧ ಕೋರಿ ಖಾಸಗಿ ಸದಸ್ಯರ ಮಸೂದೆಯನ್ನು ಸಲ್ಲಿಸಿರುವುದಾಗಿ ಪರ್ದೇಸಿ ಸಾಮಾಜಿಕ ಮಾಧ್ಯಮದಲ್ಲಿ ಘೋಷಿಸಿದ್ದಾರೆ.

# 'ಮಹಿಳಾ ಮೀಸಲು ಜಾರಿಗೆ ಡಿಲಿಮಿಟೇಶನ್ ಷರತ್ತು ಕಾನೂನು ಬಾಹಿರ'

ನವದೆಹಲಿ: ಮಹಿಳಾ ಮೀಸಲಾತಿ ಕಾಯ್ದೆ 2023ರಲ್ಲಿನ 334ಎ(1) ಅಥವಾ ಕಲಂ 5ನ್ನು ಅಸಾಂವಿಧಾನಿಕ ಎಂದು ಘೋಷಿಸುವಂತೆ ಕೋರಿ ಸಲ್ಲಿಸಲಾಗಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ಬಗ್ಗೆ ವಿಚಾರಣೆ ನಡೆಸಿದ ದಿಲ್ಲಿ ಉಚ್ಚ ನ್ಯಾಯಾಲಯವು, ಈ ಬಗ್ಗೆ ಪ್ರತಿಕ್ರಿಯೆ ಸಲ್ಲಿಸುವಂತೆ ಕಾನೂನು ಮತ್ತು ನ್ಯಾಯ ಸಚಿವಾಲಯದ ಮೂಲಕ ಕೇಂದ್ರ ಸರಕಾರಕ್ಕೆ ನೋಟಿಸ್ ಜಾರಿಗೊಳಿಸಿದೆ.

ನ್ಯಾಷನಲ್ ಫೆಡರೇಶನ್ ಆಫ್ ಇಂಡಿಯನ್ ವುಮೆನ್ ಹೆಸರಿನ ಸಂಘಟನೆಯು ಸಲ್ಲಿಸಿದ ಮನವಿಯಲ್ಲಿ, ಕಾಯ್ದೆಯನ್ನು ಜಾರಿಗೆ ತರಲು ಡಿಲಿಮಿಟೇಶನ್ ಪ್ರಕ್ರಿಯೆಯು ಮುಗಿಯಬೇಕೆಂಬ ಷರತ್ತು ಹಾಕಿರುವುದು ಕಾನೂನುಬಾಹಿರವಾಗಿದೆ ಎಂದು ಹೇಳಲಾಗಿದೆ.

ಈ ಕುರಿತು ವಿಚಾರಣೆ ನಡೆಸಿದ ನ್ಯಾಯಮೂರ್ತಿ ತುಷಾರ್ ರಾವ್ ಗೆಡೆಲಾ ಅವರನ್ನೂ ಒಳಗೊಂಡ ಮುಖ್ಯ ನ್ಯಾಯಮೂರ್ತಿ ದೇವೇಂದ್ರ ಕುಮಾರ್ ಉಪಾಧ್ಯಾಯ ನೇತೃತ್ವದ ನ್ಯಾಯಪೀಠವು ಕಾನೂನು ಮತ್ತು ನ್ಯಾಯ ಸಚಿವಾಲಯಕ್ಕೆ ಪ್ರತಿಕ್ರಿಯೆ ನೀಡುವಂತೆ ಸೂಚಿಸಿ, ಮುಂದಿನ ವಿಚಾರಣೆಯನ್ನು ಏಪ್ರಿಲ್ 9, 2025 ಕ್ಕೆ ಮುಂದೂಡಿದೆ.

ವಿಶೇಷವೆಂದರೆ, ಮಹಿಳಾ ಮೀಸಲಾತಿ ಮಸೂದೆಯ ಹಿಂದಿನ ಆವೃತ್ತಿಗಳಲ್ಲಿ ಅಂತಹ ಯಾವುದೇ ಷರತ್ತು ಇರಲಿಲ್ಲ ಮತ್ತು ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಕಾಯ್ದಿರಿಸಿದ ಇತರ ವರ್ಗಗಳಿಗೆ ಅಂತಹ ಯಾವುದೇ ಷರತ್ತನ್ನು ವಿಧಿಸಲಾಗಿಲ್ಲ ಎಂದು ಮನವಿಯಲ್ಲಿ ತಿಳಿಸಲಾಗಿದೆ.

# ಆನ್‌ಲೈನ್ ಚಾಲನಾ ಪರವಾನಗಿ ಪ್ರಕ್ರಿಯೆ: ಇನ್ಮುಂದೆ ಕನ್ನಡ, ತಮಿಳು, ಹಿಂದಿಯಲ್ಲೂ ಆನ್‌ಲೈನ್ ಸೇವೆ ಲಭ್ಯ

**ಉತ್ತರ ಪ್ರದೇಶ:** ಸಾರಿಗೆ ಇಲಾಖೆಯ ಸಾರಥಿ ಪೋರ್ಟಲ್‌ನ ಮಾಹಿತಿಗಳನ್ನು ಪ್ರಾದೇಶಿಕ ಭಾಷೆಯಲ್ಲೂ ನೀಡಲು ಇಲಾಖೆ ಮುಂದಾಗಿದ್ದು, ಇನ್ಮುಂದೆ ಕೇವಲ ಇಂಗ್ಲಿಷ್‌ನಲ್ಲಿ ಮಾತ್ರವಲ್ಲದೇ, ಹಿಂದಿ, ಕನ್ನಡ, ತಮಿಳಿನಲ್ಲೂ ಮಾಹಿತಿಗಳು ಲಭ್ಯವಾಗಲಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಡಿಎಲ್ ಸೇರಿದಂತೆ ವಿವಿಧ ಆನ್‌ಲೈನ್ ಸೇವೆಗಳು ಕೇವಲ ಇಂಗ್ಲಿಷ್ ಮತ್ತು ಹಿಂದಿಯಲ್ಲಿ ಲಭ್ಯವಾಗುತ್ತಿರುವ ಹಿನ್ನೆಲೆಯಲ್ಲಿ, ಇದಕ್ಕೆ ಸಂಬಂಧಿಸಿದಂತೆ ಈಟಿವಿ ಭಾರತ್ ಸುದ್ದಿ ಪ್ರಕಟಿಸಿತ್ತು. ಈ ಸುದ್ದಿ ಬೆನ್ನಲ್ಲೇ ಈಗ ಸಾರಿಗೆ ಇಲಾಖೆಯ ಸಾರಥಿ ಪೋರ್ಟಲ್‌ನಲ್ಲಿ ಇಂಗ್ಲಿಷ್ ಜೊತೆಗೆ ಹಿಂದಿಯ ಆಯ್ಕೆಯನ್ನು ಸಹ ಪ್ರಾರಂಭಿಸಿದೆ. ಇದು ಜನರಿಗೆ ಡಿಎಲ್ ಸಂಬಂಧಿತ ಎಲ್ಲ ಮಾಹಿತಿ ಸೇರಿದಂತೆ ವಿವಿಧ ಆನ್‌ಲೈನ್ ಸೇವೆಗಳ ಲಾಭ ಪಡೆಯಲು ಅನುಕೂಲವಾಗಲಿದೆ. ಅರ್ಜಿದಾರರಿಗೆ ಹಿಂದಿ ಮಾತ್ರವಲ್ಲ, ಕನ್ನಡ ಮತ್ತು ತಮಿಳು ಭಾಷೆಗಳ ಆಯ್ಕೆಯನ್ನೂ ನೀಡಲು ಇಲಾಖೆ ಮುಂದಾಗಿದೆ.

ಪ್ರಾದೇಶಿಕ ಭಾಷೆಗೆ ಒತ್ತು ನೀಡುವ ಉದ್ದೇಶದಿಂದ ಈ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಎನ್‌ಐಸಿಗೆ ಸಾರಿಗೆ ಆಯುಕ್ತರು ತಿಳಿಸಿದ್ದಾರೆ. ಇಲಾಖೆಯ ಈ ತೀರ್ಮಾನದಿಂದ ಹಿಂದಿ ಮಾತ್ರವಲ್ಲದೇ ಅರ್ಜಿದಾರರು ಕನ್ನಡ ಮತ್ತು ತಮಿಳು ಆಯ್ಕೆಯ ಸೇವೆಗಳನ್ನು ಪಡೆಯಬಹುದಾಗಿದೆ.

ಉತ್ತರ ಪ್ರದೇಶ ಸಾರಿಗೆ ಇಲಾಖೆಯ ವೆಬ್‌ಸೈಟ್ ಇಂಗ್ಲಿಷ್‌ನಲ್ಲಿರುವುದರಿಂದ ಅರ್ಜಿದಾರರು ಸಮಸ್ಯೆ ಎದುರಿಸುತ್ತಿದ್ದರು.




ಇಂಗ್ಲಿಷ್‌ನ ಹೆಚ್ಚಿನ ಜ್ಞಾನವಿಲ್ಲದ ಅರ್ಜಿದಾರರು ಸೈಬರ್ ಕೆಫೆಗಳಿಗೆ ಹೋಗಬೇಕಾದ ಪರಿಸ್ಥಿತಿ ಇತ್ತು. ಇಲ್ಲಿ ದಲ್ಲಾಳಿಗಳು ಹಣ ವಸೂಲಿ ಮಾಡುತ್ತಿದ್ದರು. ಈ ಸಂಬಂಧ ಹಲವು ದೂರುಗಳು ಕೇಳಿ ಬಂದಿದ್ದವು.

ಇದರಿಂದಾಗಿ ಮೊದಲಿಗೆ ಉತ್ತರ ಪ್ರದೇಶದ ಸಾರಿಗೆ ಆಯುಕ್ತ ಬಿ.ಎನ್.ಸಿಂಗ್ ಹಿಂದಿಯಲ್ಲಿ ವೆಬ್ ಸೈಟ್ ಮಾಡುವ ಕಸರತ್ತು ಆರಂಭಿಸಿದ್ದರು . ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವಾಲಯ ಮತ್ತು ಎನ್‌ಐಸಿಯೊಂದಿಗೆ ಈ ಕುರಿತು ಪತ್ರ ಬರೆದಿದ್ದರು. ಇದರ ಫಲವಾಗಿ ಇದೀಗ ಕೇವಲ ಹಿಂದಿ ಮಾತ್ರವಲ್ಲದೇ, ಕನ್ನಡ ಮತ್ತು ತಮಿಳಿನ ಆಯ್ಕೆಯನ್ನೂ ನೀಡಲಾಗುತ್ತಿದೆ.

ಇಂಗ್ಲಿಷ್‌ನಲ್ಲಿ ಮಾಹಿತಿ ಭರ್ತಿ: ಅರ್ಜಿ ಭರ್ತಿ ಮಾಡುವಾಗ, ರಾಷ್ಟ್ರೀಯ ಮಾಹಿತಿ ಕೇಂದ್ರಕ್ಕೆ ಸಂಬಂಧಿಸಿದ ಆಯ್ಕೆಗಳು ಹಿಂದಿಯಲ್ಲಿ ಕಂಡರೂ, ಅರ್ಜಿ ದಾರರು ಇಂಗ್ಲಿಷ್‌ನಲ್ಲಿಯೇ ಇವುಗಳನ್ನು ಭರ್ತಿ ಮಾಡಬೇಕು. ಡಿಎಲ್ ಲೈಸೆನ್ಸ್ ಪರೀಕ್ಷೆಯಲ್ಲಿ ಇಂಗ್ಲಿಷ್‌ನಲ್ಲಿ ಇದ್ದ ಕಾರಣ ಅರ್ಜಿದಾರರು ಹೆಚ್ಚಿನ ಸಮಸ್ಯೆ ಅನುಭವಿಸುತ್ತಿದ್ದರು. ಆದ್ದರಿಂದ ಆಗಾಗ್ಗೆ ತಪ್ಪು ಉತ್ತರಗಳನ್ನು ನೀಡುತ್ತಿದ್ದರು. ಈಗ ಅದು ಹಿಂದಿಯಲ್ಲಿರುವುದರಿಂದ, ಹೇಗೆ ಉತ್ತರಿಸಬೇಕೆಂದು ಅವರಿಗೆ ಅರ್ಥವಾಗುತ್ತದೆ.

ಹಲವು ಸೇವೆಗಳು : ಕಲಿಕಾ ಚಾಲನಾ ಪರವಾನಗಿ, ವಿಳಾಸ ಬದಲಾವಣೆ, ಫೋಟೋ ಬದಲಾವಣೆ ಮತ್ತು ಕಲಿಕಾ ಪರವಾನಗಿ ನೀಡುವುದು, ನಕಲು ಕಲಿಕಾ ಪರವಾನಗಿ ನೀಡಿಕೆ, ಡಿಎಲ್ ನವೀಕರಣ, ಡಿಎಲ್‌ನಲ್ಲಿ ಬಯೋಮೆಟ್ರಿಕ್‌ಗಳನ್ನು ಬದಲಾವಣೆ, ಡಿಎಲ್‌ನಲ್ಲಿ ಫೋಟೋ ಮತ್ತು ಸೈನ್ ಇನ್ ಬದಲಾವಣೆ, ಡಿಎಲ್‌ನಿಂದ ವಾಹನದ ವರ್ಗೀಕರಣ, ಡಿಎಲ್‌ನಿಂದ ಸರೆಂಡರ್ ಮಾಡುವುದು, ನಕಲು ಸಾರ್ವಜನಿಕ ಸೇವಾ ವಾಹನದ ಬ್ಯಾಡ್ಜ್, ಡ್ಯೂಪ್ಲಿಕೇಟ್ ಸಾರ್ವಜನಿಕ ಸೇವಾ ವಾಹನದ ಬ್ಯಾಡ್ಜ್ ಸೇರಿದಂತೆ ಹಲವು ಸೇವೆಗಳು ಇದೀಗ ಆನ್‌ಲೈನ್ ಮೂಲಕವೇ ಲಭ್ಯವಿದ್ದು, ಇದು ಹೆಚ್ಚಿನ ಅನುಕೂಲವನ್ನು ಅರ್ಜಿದಾರರಿಗೆ ನೀಡಲಿದೆ.

ಈ ಕುರಿತು ಮಾತನಾಡಿದ ಉತ್ತರ ಪ್ರದೇಶದ ಸಾರಿಗೆ ಕಮಿಷನರ್ ಬಿಎನ್ ಸಿಂಗ್, ಹಿಂದಿಯಲ್ಲಿ ಮಾಹಿತಿ ಪ್ರಕಟವಾಗುವುದರಿಂದ ಅರ್ಜಿದಾರರಿಗೆ ಅರ್ಥಮಾಡಿಕೊಳ್ಳಲು ಸಹಾಯಕವಾಗುತ್ತದೆ. ಇದು ಅರ್ಜಿ ಸಲ್ಲಿಕೆ ಪ್ರಕ್ರಿಯೆ ಸುಲಭಗೊಳಿಸುತ್ತದೆ ಎಂದಿದ್ದಾರೆ.

# ಅತ್ಯಾಚಾರಕ್ಕೊಳಗಾದ ಹೆಣ್ಣಿಗೆ ಗರ್ಭಪಾತದ ಹಕ್ಕಿದೆ

**ಅಲಹಾಬಾದ್:** ಅತ್ಯಾಚಾರಕ್ಕೆ ಒಳಗಾಗಿ ಗರ್ಭಿಣಿಯಾಗಿದ್ದ 17 ವರ್ಷದ ಬಾಲಕಿಗೆ ಮಗುವನ್ನು ಇಟ್ಟುಕೊಳ್ಳಬೇಕೆ ಅಥವಾ ಬೇಡವೇ ಎಂಬುದನ್ನು ಆಯ್ಕೆ ಮಾಡಲು ಅವಕಾಶ ನೀಡಿರುವ ಅಲಹಾಬಾದ್ ಹೈಕೋರ್ಟ್ ತಾನು ತಾಯಿಯಾಗಬೇಕೇ ಅಥವಾ ಗರ್ಭಪಾತ ಮಾಡಿಸಿಕೊಳ್ಳಬೇಕೇ ಎಂಬುದನ್ನು ನಿರ್ಧರಿಸಲು ಅವಕಾಶ ನೀಡಿದೆ. ನ್ಯಾಯಮೂರ್ತಿಗಳಾದ ಮಹೇಶ್ ಚಂದ್ರ ತ್ರಿಪಾಠಿ ಮತ್ತು ಪ್ರಶಾಂತ್ ಕುಮಾರ್ ಅವರನ್ನೊಳಗೊಂಡ ಇಬ್ಬರು ನ್ಯಾಯಾಧೀಶರ ಪೀಠವು 17 ವರ್ಷದ ಅತ್ಯಾಚಾರ ಸಂತ್ರಸ್ತೆಯ ಗರ್ಭಧಾರಣೆಯನ್ನು ವೈದ್ಯಕೀಯವಾಗಿ ಅಂತ್ಯಗೊಳಿಸಲು ಕೋರಿ ಸಲ್ಲಿಸಿದ ಅರ್ಜಿಯ ವಿಚಾರಣೆ ನಡೆಸಿದೆ. ಅತ್ಯಾಚಾರದಿಂದ ಯುವತಿ ಅಥವಾ ಮಹಿಳೆ ಗರ್ಭಿಣಿಯಾದರೆ ಆ ಮಗುವನ್ನು ಉಳಿಸಿಕೊಳ್ಳಬೇಕೇ, ಬೇಡವೇ ಎಂದು ನಿರ್ಧರಿಸಲು ಆಕೆಗೆ ಹಕ್ಕಿದೆ. ಕಾನೂನು ಲೈಂಗಿಕ ದೌರ್ಜನ್ಯಕ್ಕೊಳಗಾದ ಸಂತ್ರಸ್ತೆಗೆ ತನ್ನ ಗರ್ಭಧಾರಣೆಯನ್ನು ವೈದ್ಯಕೀಯವಾಗಿ ಅಂತ್ಯಗೊಳಿಸಲು ಹಕ್ಕನ್ನು ಒದಗಿಸುತ್ತದೆ ಎಂದು ಕೋರ್ಟ್ ಹೇಳಿದೆ.

ವೈದ್ಯಕೀಯ ಗರ್ಭಪಾತ ಕಾಯ್ದೆಯ ಸೆಕ್ಷನ್ 3(2) ಲೈಂಗಿಕ ದೌರ್ಜನ್ಯಕ್ಕೊಳಗಾದ ಸಂತ್ರಸ್ತೆಗೆ ತನ್ನ ಗರ್ಭಾವಸ್ಥೆಯನ್ನು ವೈದ್ಯಕೀಯವಾಗಿ ಅಂತ್ಯಗೊಳಿಸುವ ಹಕ್ಕನ್ನು ಒದಗಿಸುತ್ತದೆ. ಆಕೆಗೆ ವೈದ್ಯಕೀಯವಾಗಿ ಗರ್ಭಪಾತವನ್ನು ಮಾಡಿಸಿಕೊಳ್ಳುವ ಅಥವಾ ಆ ಮಗುವನ್ನು ಹೆತ್ತು ಅದರ ಜವಾಬ್ದಾರಿ ವಹಿಸಿಕೊಳ್ಳುವ ಎರಡೂ ಹಕ್ಕುಗಳಿರುತ್ತದೆ. ಆಕೆಯ ಮಾತೃತ್ವದ ಜವಾಬ್ದಾರಿಯನ್ನು ವಹಿಸಿಕೊಳ್ಳುವ ಹಕ್ಕನ್ನು ನಿರಾಕರಿಸುವುದು ಅವಳ ಘನತೆಯಿಂದ ಬದುಕುವ ಮಾನವ ಹಕ್ಕನ್ನು ನಿರಾಕರಿಸುವುದಕ್ಕೆ ಸಮಾನವಾಗಿರುತ್ತದೆ ಎಂದು ನ್ಯಾಯಪೀಠ ಹೇಳಿದೆ. ಒಂದುವೇಳೆ ಆ ಮಗುವನ್ನು ಆಕೆ ಹೆರಲೇಬೇಕೆಂದು ಒತ್ತಾಯಿಸಿದರೆ ಅದು ಆಕೆಗೆ ಜೀವನಪರ್ಯಂತ ನೋವು, ದುಃಖ ನೀಡುವ ಸಂಗತಿಯಾಗುವುದರಿಂದ ಕೋರ್ಟ್ ಈ ತೀರ್ಪು ನೀಡಿದೆ ಎಂದು ನ್ಯಾಯಪೀಠ ಹೇಳಿದೆ.

ಇಂತಹ ಪ್ರಕರಣಗಳಲ್ಲಿ ಗರ್ಭಧಾರಣೆಯನ್ನು ವೈದ್ಯಕೀಯವಾಗಿ ಮುಕ್ತಾಯಗೊಳಿಸಲು ಅವಕಾಶ ನೀಡುವ ಸುಪ್ರೀಂ ಕೋರ್ಟ್ ಮತ್ತು ದೆಹಲಿ ಹೈಕೋರ್ಟ್ ತೀರ್ಪುಗಳನ್ನು ಉಲ್ಲೇಖಿಸಿದ ಹೈಕೋರ್ಟ್, ಲೈಂಗಿಕ ದೌರ್ಜನ್ಯದಿಂದ ಗರ್ಭ ಧರಿಸಿದ ಮಹಿಳೆ ಆ ಮಗುವನ್ನು ಇಟ್ಟುಕೊಳ್ಳುವುದಕ್ಕೆ ಒಪ್ಪುವ ಅಥವಾ ನಿರಾಕರಿಸುವ ಹಕ್ಕನ್ನು ಹೊಂದಿದ್ದಾಳೆ. ಆ ಮಗುವನ್ನು ಇಟ್ಟುಕೊಳ್ಳಬೇಕೆ ಅಥವಾ ಬೇಡವೇ ಎಂಬುದನ್ನು ಆ ಮಹಿಳೆಯೇ ಆಯ್ಕೆ ಮಾಡಿಕೊಳ್ಳಲು ಅವಕಾಶವಿದೆ ಎಂದು ಹೇಳಿದೆ.

# ಒತ್ತೆಯಾಳುಗಳ ಬಿಡದಿದ್ದರೆ ಯುದ್ಧ ಪುನಾರಂಭ

**ಟೆಲ್ ಅವಿವ್:** ಒಪ್ಪಂದದ ಪ್ರಕಾರ ನಮ್ಮ ಒತ್ತೆಯಾಳುಗಳನ್ನು ಬಿಡುಗಡೆ ಮಾಡದಿದ್ದರೆ, ಕದನ ವಿರಾಮದಿಂದ ಹೊರಬಂದು ಮರು ಯುದ್ಧ ನಡೆಸಲು ಸಿದ್ಧ ಎಂದು ಹಮಾಸ್ ಉಗ್ರರಿಗೆ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಖಡಕ್ ಎಚ್ಚರಿಕೆ ರವಾನಿಸಿದ್ದಾರೆ.

ಇಸ್ರೇಲ್ ಒತ್ತೆಯಾಳುಗಳನ್ನು ಬಿಡುಗಡೆ ಮಾಡುವಲ್ಲಿ ವಿಳಂಬ ಮತ್ತು ನಿರಾಕರಣೆ ತೋರುತ್ತಿರುವ ಹಮಾಸ್ ಉಗ್ರರಿಗೆ ಕೊನೆಯ ಗಡುವು ನೀಡಿದ್ದಾರೆ. ಶನಿವಾರ ಮಧ್ಯಾಹ್ನದೊಳಗೆ ಒತ್ತೆ ಇಟ್ಟುಕೊಂಡಿರುವ ನಮ್ಮವರನ್ನು ಬಿಡುಗಡೆ ಮಾಡದೇ ಹೋದಲ್ಲಿ ಕದನ ವಿರಾಮ ಉಲ್ಲಂಘನೆ ಆರೋಪದ ಮೇಲೆ ಮರು ದಾಳಿ ಆರಂಭಿಸಲಾಗುವುದು. ಹಮಾಸ್‌ನ ಅಂತಿಮ ಸೋಲಿನವರೆಗೂ ಹೋರಾಟ ನಡೆಸಲಾಗುವುದು ಎಂದು ಗುಡುಗಿದ್ದಾರೆ.

ಈ ಬಗ್ಗೆ ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿರುವ ಇಸ್ರೇಲ್ ಪ್ರಧಾನಿ, ಕದನ ವಿರಾಮದ ವೇಳೆ ಒಪ್ಪಿದಂತೆ ಉಭಯರ ಕಡೆಯಿಂದ ಒತ್ತೆಯಾಳುಗಳನ್ನು ಬಿಡುಗಡೆ ಮಾಡಬೇಕು. ಆದರೆ, ಹಮಾಸ್ ಉಲ್ಲಂಘಿಸುತ್ತಿದೆ. ಹೀಗಾಗಿ, ಗಾಜಾ ಪಟ್ಟಿಯ ಸುತ್ತಲೂ ಮತ್ತು ಒಳಗೆ ಸೇನೆಯನ್ನು ಸಜ್ಜುಗೊಳಿಸಲು ಸೂಚನೆ ನೀಡಲಾಗಿದೆ ಎಂದು ಬರೆದುಕೊಂಡಿದ್ದಾರೆ.

ಮತ್ತೊಂದು ಪೋಸ್ಟ್‌ನಲ್ಲಿ, "ಹಮಾಸ್ ಉಗ್ರರು ಶನಿವಾರ ಮಧ್ಯಾಹ್ನದೊಳಗೆ ನಮ್ಮ ಒತ್ತೆಯಾಳುಗಳನ್ನು ಕಳುಹಿಸದಿದ್ದರೆ, ಕದನ ವಿರಾಮ ಕೊನೆಗೊಳ್ಳುತ್ತದೆ. ಹಮಾಸ್‌ನ ಅಂತಿಮ ಸೋಲಿನವರೆಗೂ ಐಡಿಎಫ್ ತೀವ್ರ ಹೋರಾಟ ಪುನರಾರಂಭಿಸಲಿದೆ ಎಂದು ಸಚಿವ ಸಂಪುಟದಲ್ಲಿ ಸರ್ವಾನುಮತದ ಅಂಗೀಕರಿಸಲಾಗಿದೆ ಎಂದು ತಿಳಿಸಿದ್ದಾರೆ.

ಅಮೆರಿಕ ಅಧ್ಯಕ್ಷರಿಂದಲೂ ಎಚ್ಚರಿಕೆ: ಪ್ಯಾಲೆಸ್ಟೈನಿಯನ್ನರು ಗಾಜಾ ಪಟ್ಟಿಗೆ ಮರಳಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿರೋಧಿಸಿದ್ದರು. ಯುದ್ಧ ಪೂರ್ಣ ಪ್ರಮಾಣದಲ್ಲಿ ಮುಗಿಯುವವರೆಗೂ ಜನರು ಗಾಜಾ ಪಟ್ಟಿ ಪ್ರವೇಶಿಸಬಾರದು. ಎಲ್ಲ ಒತ್ತೆಯಾಳುಗಳನ್ನು ಹಮಾಸ್ ನಿಗದಿತ ಕಾಲಾವಧಿಯಲ್ಲಿ ಬಿಡುಗಡೆ ಮಾಡಬೇಕು ಎಂದು ಸೂಚನೆ ನೀಡಿದ್ದರು.

ಇತ್ತ ಹಮಾಸ್, ಇಸ್ರೇಲ್ ನೀಡಿದ ಶನಿವಾರದ ಗಡುವನ್ನು ನಿರ್ಲಕ್ಷಿಸಿತ್ತು. ಮುಂದಿನ ಸೂಚನೆ ಬರುವವೆಗೆ ಒತ್ತೆಯಾಳುಗಳ ಬಿಡುಗಡೆ ವಿಳಂಬವಾಗಲಿದೆ ಎಂದು ಘೋಷಿಸಿತ್ತು. ಇದಕ್ಕೀಗ ಇಸ್ರೇಲ್ ಕಟುವಾಗಿಯೇ ಪ್ರತಿಕ್ರಿಯೆ ನೀಡಿದೆ. ಇಸ್ರೇಲ್ ಮತ್ತು ಹಮಾಸ್ ಉಗ್ರರ ನಡುವೆ ಒಂದು ವರ್ಷಕ್ಕೂ ಅಧಿಕ ಅವಧಿಯಿಂದ ನಡೆಯುತ್ತಿದ್ದ ಯುದ್ಧಕ್ಕೆ ಕಳೆದ ತಿಂಗಳು ಕದನ ವಿರಾಮ ಘೋಷಿಸಲಾಗಿತ್ತು. ಅದರಂತೆ ಉಭಯ ಪಡೆಗಳು ತಮ್ಮಲ್ಲಿರುವ ಯುದ್ಧ ಕೈದಿಗಳು/ ಒತ್ತೆಯಾಳುಗಳನ್ನು ಪರಸ್ಪರ ಬಿಡುಗಡೆ ಮಾಡಬೇಕು ಎಂದು ಷರತ್ತು ವಿಧಿಸಲಾಗಿತ್ತು.

# ಆರ್‌ಸಿಬಿ ಸಾರಥಿ ರಜತ್




ಕಳೆದ 17 ಆವೃತ್ತಿಗಳಲ್ಲಿ ಮೂರು ಬಾರಿ (2009, 2011, 2016) ಫೈನಲ್ ಪ್ರವೇಶಿಸಿದ್ದರೂ ಆರ್‌ಸಿಬಿಗೆ ಕಪ್ ಗೆಲ್ಲಲು ಸಾಧ್ಯವಾಗಿರಲಿಲ್ಲ. ಆದರೆ ಈ ಬಾರಿ ಹೊಸ ತಂಡದೊಂದಿಗೆ ಅಖಾಡಕ್ಕಿಳಿಯಲು ಸಿದ್ಧವಾಗಿರುವ ಬೆಂಗಳೂರು ಶತಾಯಗತ ಕಪ್ ಗೆಲ್ಲಲೇಬೇಕೆಂದು ಪಣತೊಟ್ಟಿದೆ. ಇದೇ ಉದ್ದೇಶದಿಂದಾಗಿ ಕಳೆದ ವರ್ಷ ಡಿಸೆಂಬರ್ ಕೊನೆಯಲ್ಲಿ ಜೆಡ್ಡಾದಲ್ಲಿ ನಡೆದಿದ್ದ ಐಪಿಎಲ್ 2025ರ ಮೆಗಾ ಹರಾಜಿನಲ್ಲಿ ಆರ್‌ಸಿಬಿ ಅಳೆದು ತೂಗಿ ಬಲಿಷ್ಠ ಸೈನ್ಯವನ್ನು ಕಟ್ಟಿದೆ. ಈ ಬಾರಿ ವಿರಾಟ್ ಕೊಹ್ಲಿ, ರಜತ್ ಪಟಿದಾರ್, ಯಶ ದಯಾಳ್ ಹರತು ಪಡಿಸಿ ಹಳೆಬರನ್ನೆಲ್ಲ ಕೈಬಿಟ್ಟಿರುವ ಬೆಂಗಳೂರು ಫ್ರಾಂಚೈಸಿ ಹೊಸ ಪ್ರತಿಭೆಗಳಿಗೆ ಮಣೆ ಹಾಕಿ ಅದೃಷ್ಟದ ಪರೀಕ್ಷೆಗಿಳಿದಿದೆ. ಈ ಬಾರಿ ಟಿ20ಯಲ್ಲಿ ಸ್ಫೋಟಕ ಪ್ರದರ್ಶನದೊಂದಿಗೆ ಮಿಂಚುವಂತಹ ಬಲಿಷ್ಠ ಆಟಗಾರನ್ನು ತಂಡಕ್ಕೆ ಸೇರಿಸಿಕೊಂಡಿದೆ. ಅದರಲ್ಲೂ ಭುವನೇಶ್ವರ್ ಕುಮಾರ್, ಫಿಲ್ ಸಾಲ್ಟ್, ಜೇಕಬ್ ಬೆಥೆಲ್, ಟಿಮ್ ಡೇವಿಡ್ ಲಿವಿಂಗ್‌ಸ್ಟೋನ್ ಮೇಲೆ ಹೆಚ್ಚಿನ ನಿರೀಕ್ಷೆಗಳನ್ನು ಇಡಲಾಗಿದೆ. ಈ ಆಟಗಾರರು ಸಿಡಿದೆದ್ದರೇ ಈ ಸಲ ಕಪ್ ಆರ್‌ಸಿಬಿಯದ್ದಾಗಲಿದೆ. ಈ ಬಾರಿ ಬಲಿಷ್ಠ ತಂಡವನ್ನು ಕಟ್ಟಿರುವ ಆರ್‌ಸಿಬಿಗೆ ಯಾರು ನಾಯಕನಾಗಲಿದ್ದಾರೆ ಎಂಬ ಬಗ್ಗೆ ಕ್ರಿಕೆಟ್ ವಲಯದಲ್ಲಿ ಭಾರೀ ಚರ್ಚೆಗಳು ನಡೆದಿದ್ದವು. ಅಭಿಮಾನಿಗಳು ಕಾಯುವಿಕೆ ಇಂದು ಕೊನೆಗೊಂಡಿದೆ. ಆರ್‌ಸಿಬಿಯ ನೂತ ನಾಯಕನಾಗಿ ರಜತ್ ಪಾಟಿದಾರ್ ಆಯ್ಕೆ ಆಗಿದ್ದಾರೆ.



# ದಾಖಲೆಯ ರನ್ ಚೇಸ್; ಭರ್ಜರಿ ಜಯ

ಸೌತ್ ವಿರುದ್ಧ ನಡೆದ ಏಕದಿನ ಪಂದ್ಯದಲ್ಲಿ ಪಾಕಿಸ್ತಾನ್ ತಂಡ ಭರ್ಜರಿ ಜಯ ಸಾಧಿಸಿದೆ. ಕರಾಚಿಯ ನ್ಯಾಷನಲ್ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ 353 ರನ್‌ಗಳನ್ನು ಬೆನ್ನತ್ತುವ ಮೂಲಕ ಪಾಕ್ ಪಡೆ ಹೊಸ ಇತಿಹಾಸ ನಿರ್ಮಿಸಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಸೌತ್ ಆಫ್ರಿಕಾ ತಂಡದ ನಾಯಕ ಟೆಂಬಾ ಬವುಮಾ ಬ್ಯಾಟಿಂಗ್ ಆಯ್ದುಕೊಂಡಿದ್ದರು.

ಅದರಂತೆ ಇನಿಂಗ್ಸ್ ಆರಂಭಿಸಿದ ಟೆಂಬಾ ಬವುಮಾ 82 ರನ್ ಬಾರಿಸಿ ತಂಡಕ್ಕೆ ಉತ್ತಮ ಆರಂಭ ಒದಗಿಸಿದ್ದರು. ಇನ್ನು ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಮ್ಯಾಥ್ಯೂ ಬ್ರೀಟ್ಝ್ಕೆ 84 ಎಸೆತಗಳಲ್ಲಿ 1 ಸಿಕ್ಸ್ ಹಾಗೂ 10 ಫೋರ್‌ಗಳೊಂದಿಗೆ 83 ರನ್ ಚಚ್ಚಿದರು.

ಆ ಬಳಿಕ ಬಂದ ಹೆನ್ರಿಕ್ ಕ್ಲಾಸೆನ್ ಸಿಡಿಲಬ್ಬರದ ಬ್ಯಾಟಿಂಗ್ ಪ್ರದರ್ಶಿಸುವ ಮೂಲಕ ಕೇವಲ 56 ಎಸೆತಗಳಲ್ಲಿ 3 ಸಿಕ್ಸ್ ಹಾಗೂ 11 ಫೋರ್‌ಗಳೊಂದಿಗೆ 87 ರನ್ ಬಾರಿಸಿದರು. ಈ ಮೂಲಕ ಸೌತ್ ಆಫ್ರಿಕಾ ತಂಡವು 50 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 352 ರನ್ ಕಲೆಹಾಕಿತು.

ಈ ಗುರಿಯನ್ನು ಬೆನ್ನತ್ತಿದ ಪಾಕಿಸ್ತಾನ್ ತಂಡಕ್ಕೆ ಫಖರ್ ಝಮಾನ್ (41) ಉತ್ತಮ ಆರಂಭ ಒದಗಿಸಿದರು. ಆದರೆ ಬಾಬರ್ ಆಝಂ (23) ಹಾಗೂ ಸೌದ್ ಶಕೀಲ್ (15) ಬೇಗನೆ ವಿಕೆಟ್ ಒಪ್ಪಿಸಿದ್ದರು. ಈ ಹಂತದಲ್ಲಿ ಜೊತೆಗೂಡಿದ ನಾಯಕ ಮೊಹಮ್ಮದ್ ರಿಝ್ವಾನ್ ಹಾಗೂ ಸಲ್ಮಾನ್ ಅಘಾ ದ್ವಿಶತಕದ ಜೊತೆಯಾಟದೊಂದಿಗೆ ಇನಿಂಗ್ಸ್ ಕಟ್ಟಿದರು.

ಇದರ ನಡುವೆ ಸಲ್ಮಾನ್ ಅಘಾ 87 ಎಸೆತಗಳಲ್ಲಿ ಶತಕ ಪೂರೈಸಿದರೆ, ಮೊಹಮ್ಮದ್ ರಿಝ್ವಾನ್ 106 ಎಸೆತಗಳಲ್ಲಿ ಸೆಂಚುರಿ ಸಿಡಿಸಿದರು. ಶತಕದ ಬಳಿಕ ಕೂಡ ಪಾಲುದಾರಿಕೆ ಮುಂದುವರೆಸಿದ ಈ ಜೋಡಿಯು ನಿರಾಯಾಸವಾಗಿ ಸೌತ್ ಆಫ್ರಿಕಾ ವೇಗಿಗಳನ್ನು ಎದುರಿಸಿದರು.

ಅಂತಿಮವಾಗಿ ಸಲ್ಮಾನ್ ಅಘಾ ಅಜೇಯ 134 ರನ್ ಬಾರಿಸಿದರೆ, ರಿಝ್ವಾನ್ ಅಜೇಯ 122 ರನ್ ಸಿಡಿಸಿದರು. ಈ ಮೂಲಕ 48.5 ಓವರ್‌ಗಳಲ್ಲಿ ತಂಡವನ್ನು ಗುರಿ ಮುಟ್ಟಿಸಿ ಪಾಕಿಸ್ತಾನ್ ತಂಡಕ್ಕೆ 7 ವಿಕೆಟ್‌ಗಳ ಭರ್ಜರಿ ಜಯ ತಂದುಕೊಟ್ಟರು.

ದಾಖಲೆಯ ಗೆಲುವು:

ಈ ವಿಜಯವು ಏಕದಿನ ಕ್ರಿಕೆಟ್‌ನಲ್ಲಿ ಪಾಕಿಸ್ತಾನ್ ತಂಡದ ದಾಖಲೆಯ ಗೆಲುವು. ಅಂದರೆ ಪಾಕ್ ಪಡೆ ಇದೇ ಮೊದಲ ಬಾರಿಗೆ 350+ ರನ್‌ಗಳ ಗುರಿಯನ್ನು ಬೆನ್ನತ್ತಿ ಗೆಲುವು ದಾಖಲಿಸಿದೆ.

ಇದಕ್ಕೂ ಮುನ್ನ 2022 ರಲ್ಲಿ ಆಸ್ಟ್ರೇಲಿಯಾ ವಿರುದ್ಧ 349 ರನ್‌ಗಳನ್ನು ಬೆನ್ನತ್ತಿ ಗೆದ್ದಿರುವುದು ಶ್ರೇಷ್ಠ ಸಾಧನೆಯಾಗಿತ್ತು. ಇದೀಗ ಸೌತ್ ಆಫ್ರಿಕಾ ವಿರುದ್ಧ 355 ರನ್ ಬಾರಿಸಿ ಐತಿಹಾಸಿಕ ಗೆಲುವು ದಾಖಲಿಸುವಲ್ಲಿ ಯಶಸ್ವಿಯಾಗಿದೆ.

# ಬ್ರೇಕಪ್ ಬಳಿಕ ಒಬ್ಬಂಟಿ ಆದ ರೋಹ್ಮನ್ ಶಾಲ್



ಮಾಡೆಲ್ ಮತ್ತು ನಟ ರೋಹ್ಮನ್ ಶಾಲ್ ಈ ಹಿಂದೆ ಸುಶ್ಮಿತಾ ಸೇನ್ ಜೊತೆಗಿನ ಸಂಬಂಧದ ಬಗ್ಗೆ ಸುದ್ದಿಯಲ್ಲಿದ್ದರು ಮತ್ತು ಈಗ ಅವರ ವಿಘಟನೆಯ ಬಗ್ಗೆ ಸುದ್ದಿಯಲ್ಲಿದ್ದಾರೆ.

ಇಬ್ಬರೂ ದೀರ್ಘಕಾಲ ಒಟ್ಟಿಗೆ ಇದ್ದರು, ಆದರೆ ನಂತರ ಬೇರ್ಪಟ್ಟರು. ಆದರೆ ವಿಘಟನೆಯ ನಂತರವೂ ಇಬ್ಬರೂ ಒಳ್ಳೆಯ ಸ್ನೇಹಿತರಾಗಿದ್ದಾರೆ ಮತ್ತು ಆಗಾಗ್ಗೆ ಒಟ್ಟಿಗೆ ಕಾಣಿಸಿಕೊಳ್ಳುತ್ತಾರೆ. ರೋಹ್ಮನ್ ಸುಶ್ಮಿತಾ ಅವರ ಇಬ್ಬರು ಹೆಣ್ಣುಮಕ್ಕಳೊಂದಿಗೂ ಉತ್ತಮ ಸಂಬಂಧವನ್ನು ಹೊಂದಿದ್ದಾರೆ. ಇತ್ತೀಚೆಗೆ, ಅವರು ಸುಶ್ಮಿತಾ ಅವರೊಂದಿಗಿನ ಸಂಬಂಧ ಮತ್ತು ಅವರ ಬ್ರೇಕಪ್ ಬಗ್ಗೆ ಬಹಿರಂಗವಾಗಿ ಮಾತನಾಡಿದ್ದಾರೆ.

ಸುಶ್ಮಿತಾ ಜೊತೆಗಿನ ಸಂಬಂಧ ಮುರಿದುಬಿದ್ದ ನಂತರ, ರೋಹ್ಮನ್ ಶಾಲ್ ಪ್ರಸ್ತುತ ತಮ್ಮ ವೃತ್ತಿಜೀವನ ಮತ್ತು ತಮ್ಮ ಮೇಲೆ ಕೇಂದ್ರೀಕರಿಸುತ್ತಿದ್ದಾರೆ. ನಟನಾ ಕ್ಷೇತ್ರಕ್ಕೆ ಪ್ರವೇಶಿಸಿದ ನಂತರ, ಅವರು ತಮ್ಮನ್ನು ಹೊಸ ದೃಷ್ಟಿಕೋನದಿಂದ ನೋಡಿಕೊಂಡರು ಎಂದು ಅವರು ನಂಬುತ್ತಾರೆ. ಪ್ರಸ್ತುತ, ರೋಹ್ಮನ್ ಒಂಟಿಯಾಗಿದ್ದು, ತಮ್ಮ ವೃತ್ತಿಜೀವನದ ಮೇಲೆ ಸಂಪೂರ್ಣವಾಗಿ ಗಮನಹರಿಸಲು ಬಯಸುತ್ತಾರೆ ಎಂದು ಅವರು ಹೇಳಿದರು.

ರೋಹ್ಮನ್ ಶಾಲ್ ಇತ್ತೀಚೆಗೆ ಸಂದರ್ಶನವೊಂದರಲ್ಲಿ ಮೊದಲ ಬಾರಿಗೆ ತಮ್ಮ ವೈಯಕ್ತಿಕ ಜೀವನದ ಬಗ್ಗೆ ಮುಕ್ತವಾಗಿ ಮಾತನಾಡಿದ್ದಾರೆ.

'ನಾನು ಸುಶ್ಮಿತಾ ಸೇನ್ ಜೊತೆ ಸಂಬಂಧದಲ್ಲಿದ್ದಾಗ, ಎಲ್ಲರೂ ನಮ್ಮ ಸಂಬಂಧದ ಬಗ್ಗೆ ಸ್ವಲ್ಪ ಹೆಚ್ಚು ಗಮನ ಹರಿಸಿದರು. ಆದರೆ ನಾನು ಈ ಒತ್ತಡವನ್ನು ಎಂದಿಗೂ ನನ್ನ ಮೇಲೆ ಬರಲು ಬಿಡಲಿಲ್ಲ. ಮೊದಲಿಗೆ ಅದು ನನಗೆ ಮುಖ್ಯವಾಗಲಿಲ್ಲ, ಆದರೆ ಸಂಬಂಧ ಮುರಿದ ನಂತರ, ನಾನು ನಟಿಸಲು ಪ್ರಾರಂಭಿಸಿದಾಗ, ಈ ಸಂಬಂಧವು ನನ್ನ ಭಾವನಾತ್ಮಕ ಬೆಂಬಲವಾಯಿತು' ಎಂದಿದ್ದಾರೆ ಅವರು.



ಸುಶ್ಮಿತಾ ಜೊತೆಗಿನ ಸಂಬಂಧದ ಬಗ್ಗೆ ಇರುವ ಹಲವು ವದಂತಿಗಳು ರೋಹ್ಮನ್ ಅವರ ಮೇಲೆ ಪರಿಣಾಮ ಬೀರಿವೆಯೇ ಎಂದು ಕೇಳಿದಾಗ? 'ಸುಷ್ಮಿತಾ ನನ್ನ ಜೀವನದ ಒಂದು ಭಾಗವಾಗಿದ್ದರು ಯಾವಾಗಲೂ ಇರುತ್ತಾರೆ. ನಾನು ಯಾವುದೇ ತಪ್ಪು ಮಾಡಿಲ್ಲದ ಕಾರಣ ನನಗೆ ಇದರ ಬಗ್ಗೆ ಹೆಮ್ಮೆ ಇದೆ.

ಯಾರನ್ನಾದರೂ ಪ್ರೀತಿಸುವುದರಲ್ಲಿ ಯಾವುದೇ ತಪ್ಪಿಲ್ಲ, ಹಾಗಾಗಿ ನಾನು ಎಂದಿಗೂ ಯಾವುದರ ಬಗ್ಗೆಯೂ ಕೆಟ್ಟದಾಗಿ ಭಾವಿಸಿಲ್ಲ ಮತ್ತು ಇನ್ನೂ ನನಗೆ ಹಾಗೆ ಅನಿಸಿಲ್ಲ' ಎಂದು ಸುಶ್ಮಿತಾ ಅವರೊಂದಿಗಿನ ಸಂಬಂಧದ ಬಗ್ಗೆ ಅವರು ಪ್ರತಿಕ್ರಿಯಿಸಿದ್ದಾರೆ. ಸದ್ಯ ಅವರು ಒಂಟಿಯಾಗಿದ್ದು, ಯಾರನ್ನೂ ಪ್ರೀತಿಸುವ ಸಾಹಸಕ್ಕೆ ಹೋಗಿಲ್ಲ.



# ಅಮ್ಮನ ಬಳಿ ಬದುಕೋಕೇ ಇಷ್ಟವಿಲ್ಲ ಎಂದಿದ್ದೆ

**ನವದೆಹಲಿ:** ಪರೀಕ್ಷೆಗಳು ಸಮೀಪಿಸುತ್ತಿರುವುದರಿಂದ ಕೇಂದ್ರ ಸರ್ಕಾರದ ಪರೀಕ್ಷಾ ಪೇ ಚರ್ಚಾ ಕಾರ್ಯಕ್ರಮದ ಭಾಗವಾಗಿ ಬಾಲಿವುಡ್ ನಟಿ ದೀಪಿಕಾ ಪಡುಕೋಣೆ ಮಾನಸಿಕ ಆರೋಗ್ಯ, ಖಿನ್ನತೆ ಮುಂತಾದ ವಿಷಯಗಳ ಬಗ್ಗೆ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ್ದಾರೆ.

ಮುಂಬೈಗೆ ಬಂದು ನಟನಾ ವೃತ್ತಿಯನ್ನು ಆರಂಭಿಸಿದ ಆರಂಭಿಕ ದಿನಗಳಲ್ಲಿ ತಾನು ಯಾವ ರೀತಿಯ ಮಾನಸಿಕ ಖಿನ್ನತೆಯನ್ನು ಅನುಭವಿಸಿದ್ದೆ, ಅದರಿಂದ ಹೊರಗೆ ಬರಲಾರದೆ ಹೇಗೆ ಒದ್ದಾಡಿದ್ದೆ, ಜೀವವನ್ನೇ ಕಳೆದುಕೊಳ್ಳಲು ಯೋಚಿಸಿದ್ದೆ ಎಂಬುದೆಲ್ಲದರ ಬಗ್ಗೆಯೂ ದೀಪಿಕಾ ಮುಕ್ತವಾಗಿ ಮಾತನಾಡಿದ್ದಾರೆ.

ಒಂದು ಸಮಯದಲ್ಲಿ ನಾನು ನನ್ನ ತಾಯಿಯ ಬಳಿ ನನಗೆ ಇನ್ನು ಬದುಕೋಕೇ ಇಷ್ಟವಿಲ್ಲ ಎಂದು ಹೇಳಿದ್ದನ್ನು ದೀಪಿಕಾ ಪಡುಕೋಣೆ ನೆನಪಿಸಿಕೊಂಡಿದ್ದಾರೆ.

ಮಾನಸಿಕ ಆರೋಗ್ಯವೆನ್ನುವುದು ಎಲ್ಲರಿಗೂ ಬಹಳ ಮುಖ್ಯ. ಆದರೆ, ಬಹುತೇಕ ಜನರು ಖಿನ್ನತೆಗೆ ಒಳಗಾಗಿದ್ದರೂ ಅದನ್ನು ಮುಕ್ತವಾಗಿ ಹೇಳಿಕೊಳ್ಳುವುದಿಲ್ಲ ಮತ್ತು ಅದಕ್ಕೆ ಪರಿಹಾರ ಪಡೆಯುವುದಿಲ್ಲ. ಆದರೆ, ಬಾಲಿವುಡ್ ನಟಿ ದೀಪಿಕಾ ಪಡುಕೋಣೆ ತಾನು ಕೂಡ ಮಾನಸಿಕ ಖಿನ್ನತೆಗೆ ಒಳಗಾಗಿದ್ದೆ ಎಂದು ಬಹಿರಂಗಪಡಿಸುವ ಮೂಲಕ ಮಾನಸಿಕ ಆರೋಗ್ಯವನ್ನು ನಿರ್ಲಕ್ಷ್ಯಿಸಬೇಡಿ ಎಂದು ಕರೆ ನೀಡಿದ್ದರು.

ಇದೀಗ ಪರೀಕ್ಷಾ ಪೇ ಚರ್ಚಾ ಕಾರ್ಯಕ್ರಮದ ಎಪಿಸೋಡ್‌ನಲ್ಲಿ ವಿದ್ಯಾರ್ಥಿಗಳ ಜೊತೆ ಮಾನಸಿಕ ಆರೋಗ್ಯದ ಬಗ್ಗೆ ದೀಪಿಕಾ ಸಂವಾದ ನಡೆಸಿದ್ದಾರೆ. ಇಂದಿನ ಚರ್ಚೆಯ ಸಮಯದಲ್ಲಿ ದೀಪಿಕಾ ಪಡುಕೋಣೆ ಖಿನ್ನತೆಯೊಂದಿಗಿನ ತನ್ನ ಹೋರಾಟದ ಬಗ್ಗೆ ಮತ್ತು ಆತ್ಮಹತ್ಯೆಯ ಯೋಚನೆಯ ಬಗ್ಗೆ ತನ್ನ ತಾಯಿಯಲ್ಲಿ ಹೇಳಿಕೊಂಡ ಕ್ಷಣದ ಬಗ್ಗೆ ಮಾತನಾಡಿದ್ದಾರೆ.

"ಮಾಡೆಲಿಂಗ್ ಮತ್ತು ನಟನೆಯಲ್ಲಿ ಯಶಸ್ಸನ್ನು ಸಾಧಿಸಿದ್ದರೂ ನನಗೆ ನನ್ನ ಆರೋಗ್ಯದಲ್ಲಿ ಏನೋ ವ್ಯತ್ಯಾಸವಾಗಿದೆ ಎಂಬುದು ಗೊತ್ತಾಗಿತ್ತು. ಆದರೆ, ಅದೇನೆಂದು ಅರ್ಥವಾಗಿರಲಿಲ್ಲ. ನಾನು ಶಾಲಾ ದಿನಗಳಿಂದಲೂ ಕ್ರೀಡೆ, ಮಾಡೆಲಿಂಗ್ ಮತ್ತು ನಟನೆಯಲ್ಲಿ ತೊಡಗಿಸಿಕೊಂಡಿದ್ದೆ. ಹೀಗಾಗಿ, ನನಗೆ ಸ್ಟೇಜ್ ಭಯವೇನೂ ಇರಲಿಲ್ಲ.

ಆದರೆ, 2014ರಲ್ಲಿ ನಾನು ಇದ್ದಕ್ಕಿದ್ದಂತೆ ಮೂರ್ಛೆ ಹೋಗುವವರೆಗೂ ನನಗೆ ನಾನು ಖಿನ್ನತೆಯಿಂದ ಬಳಲುತ್ತಿದ್ದೇನೆ ಎಂದು ಗೊತ್ತಾಗಲೇ ಇಲ್ಲ. ನನ್ನ ಮನಸಿನ ಮೇಲೆ ನಾನು ಸಾಕಷ್ಟು ಒತ್ತಡ ಹೇರುತ್ತಿದ್ದೆ ಎಂದು ಆಗಲೇ ನನಗೆ ಅರ್ಥವಾಗಿದ್ದು." ಎಂದು ದೀಪಿಕಾ ಪಡುಕೋಣೆ ಹೇಳಿದ್ದಾರೆ.

ಖಿನ್ನತೆಯು ಯಾವಾಗಲೂ ಗೋಚರಿಸುವುದಿಲ್ಲ ಮತ್ತು ಬಾಹ್ಯವಾಗಿ ಸಂತೋಷ ಮತ್ತು ಸಾಮಾನ್ಯವಾಗಿ ಕಾಣುವ ಜನರ ಮೇಲೆ ಹೇಗೆ ಪರಿಣಾಮ ಬೀರುತ್ತದೆ ಎಂಬುದನ್ನು ಅವರು ಒತ್ತಿ ಹೇಳಿದರು.

"ಒಮ್ಮೆ ನನ್ನ ತಾಯಿ ಮುಂಬೈನಲ್ಲಿ ನನ್ನನ್ನು ಭೇಟಿ ಮಾಡಲು ಬಂದಿದ್ದರು. ಅಲ್ಲಿಯವರೆಗೂ ಮುಂಬೈನಲ್ಲಿ ನಾನೊಬ್ಬಳೇ ಇರುತ್ತಿದ್ದೆ. ಅಮ್ಮ ಆಗಾಗ ಬಂದು ಹೋಗುತ್ತಿದ್ದರು. ಅಮ್ಮ ಸ್ವಲ್ಪ ದಿನ ಇದ್ದು ಮುಂಬೈನಿಂದ ಬೆಂಗಳೂರಿಗೆ ವಾಪಾಸ್ ಹೊರಟಾಗ ನಾನು ಅಳಲಾರಂಭಿಸಿದ್ದೆ. ಅವರು ಏನಾಯಿತೆಂದು ಕೇಳಿದಾಗ ನನಗೆ ಏನು ಹೇಳಬೇಕೆಂದೇ ತೋಚಲಿಲ್ಲ. ನನಗೆ ಏನಾಗ್ತಿದೆ ಎಂದು ಗೊತ್ತಿಲ್ಲ. ನಾನು ಅಸಹಾಯಕಳಾಗಿದ್ದೇನೆ ಮತ್ತು ಹತಾಶಳಾಗಿದ್ದೇನೆ. ನನಗೆ ಬದುಕಲು ಇಷ್ಟವಿಲ್ಲ ಎಂದು ಹೇಳಿದ್ದೆ" ಎಂದು ದೀಪಿಕಾ ಪಡುಕೋಣೆ ಹಳೆಯ ದಿನಗಳನ್ನು ನೆನಪಿಸಿಕೊಂಡಿದ್ದಾರೆ.

ನಾನು ಆತ್ಮಹತ್ಯೆಯ ಬಗ್ಗೆ ಮಾತನಾಡಿದಾಗ ನನ್ನ ತಾಯಿ ನನ್ನ ಮಾನಸಿಕ ಆರೋಗ್ಯದಲ್ಲಿ ಏರುಪೇರಾಗುತ್ತಿರುವುದನ್ನು ಗುರುತಿಸಿದರು. ತಕ್ಷಣ ಅವರು ಮನಶಾಸ್ತ್ರಜ್ಞರನ್ನು ಸಂಪರ್ಕಿಸಲು ಸೂಚಿಸಿದರು. ಆಮೇಲೆ ನಾನು ವೈದ್ಯರ ಸಹಾಯ ಪಡೆದು ಖಿನ್ನತೆಯಿಂದ ಹೊರಬಂದೆ.

ಇಂದಿಗೂ ಮಾನಸಿಕ ಆರೋಗ್ಯದ ಸಮಸ್ಯೆ ಇದೆ ಎಂದು ಗೊತ್ತಾದರೆ ಸಮಾಜದಲ್ಲಿ ಜನರು ನಮ್ಮನ್ನು ವಿಚಿತ್ರವಾಗಿ ನೋಡುತ್ತಾರೆ ಎಂಬ ಆತಂಕ ಹಲವರಿಗಿದೆ. ಇದೇ ಕಾರಣಕ್ಕೆ ಆ ಸಮಸ್ಯೆಗೆ ವೃತ್ತಿಪರರ ಬಳಿ ಹೋಗದೆ ಕೊನೆಗೆ ಆತ್ಮಹತ್ಯೆಯ ಮೊರೆ ಹೋಗುವವರ ಸಂಖ್ಯೆ ಹೆಚ್ಚುತ್ತಿದೆ ಎಂದು ದೀಪಿಕಾ ಪಡುಕೋಣೆ ಆತಂಕ ವ್ಯಕ್ತಪಡಿಸಿದ್ದಾರೆ.

"ಆತಂಕ, ಒತ್ತಡ ಮತ್ತು ಖಿನ್ನತೆ ಯಾರ ಮೇಲೂ ಪರಿಣಾಮ ಬೀರಬಹುದು. ಅದರ ಬಗ್ಗೆ ಮಾತನಾಡುವುದರಿಂದ ನಿಜವಾಗಿಯೂ ನಮ್ಮ ಮನಸಿನ ಮೇಲಿನ ಹೊರೆ ಕಡಿಮೆಯಾಗುತ್ತದೆ." ಎಂದು ದೀಪಿಕಾ ಪಡುಕೋಣೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದ್ದಾರೆ.

ೀಪಿಕಾ ಪಡುಕೋಣೆ ಮಾನಸಿಕ ಆರೋಗ್ಯ ಸಮಸ್ಯೆಗಳೊಂದಿಗೆ ಹೋರಾಡುತ್ತಿರುವವರನ್ನು ಬೆಂಬಲಿಸಲು ಲಿವ್ ಲವ್ ಲಾಫ್ ಎಂಬ ಫೌಂಡೇಶನ್ ಅನ್ನು ಸಹ ಸ್ಥಾಪಿಸಿದ್ದಾರೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: **9448074878**